31 July 2026 Friday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಭವಿಷ್ಯದ ಮುನ್ನುಡಿ
ಸಂಪಾದಕ: ಕೆ.ಎನ್.ರವಿ

**ಭಾವನಾಂತರಂಗ**

ನಮ್ಮ ಬಳಿ ಇರುವ ವಸ್ತುವನ್ನು ನಾವು ಗೌರವಿಸಲಿಲ್ಲವೆಂದರೆ, ಸಂತೋಷ ಎಂದಿಗೂ ನಮ್ಮ ಬಳಿ ಬರುವದಿಲ್ಲ

-ಸ್ನೇಹಾ ಆನಂದ್

info.varthaman@gmail.com



ಮೈಸೂರಿಗೆ ನಾಳೆ ಮೋದಿ: ಪ್ರಧಾನಿ ಸ್ವಾಗತಕ್ಕೆ ಅಂತಿಮ ತಯಾರಿ — ಪುಟ ಸಂ. 2



ಬರ ನಿರ್ವಹಣೆಯಲ್ಲಿ ರಾಜ್ಯಸರ್ಕಾರ ವಿಫಲ: ಬಿಜೆಪಿ — ಪುಟ ಸಂ. 3



ಮಡಿಕೇರಿಯಲ್ಲಿ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 240 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ರಾಮಮಂದಿರ ದೇಣಿಗೆ ಕಳವು ಪ್ರಕರಣ: ಸಂಸತ್‌ನಲ್ಲಿ ಗದ್ದಲ

**ನವದೆಹಲಿ:** ರಾಮಮಂದಿರದಲ್ಲಿ ನಡೆದಿದ್ದ ದೇಣಿಗೆ ಕಳವು ಪ್ರಕರಣದ ಕುರಿತು ರಾಜ್ಯ ಸಭೆಯಲ್ಲಿ ತುರ್ತು ಚರ್ಚೆಗೆ ಕಾಂಗ್ರೆಸ್ ಸದಸ್ಯ ರಣದೀಪ್ ಸಿಂಗ್ ಸುರ್ಜೇವಾಲಾ ಗುರುವಾರ ಒತ್ತಾಯಿಸಿದರು.


ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಸಂಬಂಧಿಸಿದ ದೇಣಿಗೆ ದುರ್ಬಳಕೆ, ಹಣಕಾಸು ಅಕ್ರಮ ಹಾಗೂ ದೇಣಿಗೆ ಲೂಟಿ ಆರೋಪಗಳ ಕುರಿತು ತುರ್ತು ಚರ್ಚೆ ನಡೆಸುವಂತೆ ಮನವಿ ಮಾಡಿದರು.

ಇದೇ ವಿಚಾರವಾಗಿ ಲೋಕಸಭೆಯಲ್ಲೂ ಸಂಸದರು ಒತ್ತಾಯಿಸಿದರು. ಇಂದು ಬೆಳಗ್ಗೆ ಲೋಕಸಭೆ ಕಲಾಪ ಆರಂಭವಾದ ಕೆಲವೇ ನಿಮಿಷಗಳಲ್ಲಿ ಪ್ರತಿಪಕ್ಷ ಪುಟ 2ಕ್ಕೆ



# ಹೊರಟ್ಟಿ ರಾಜೀನಾಮೆಗೆ ಸೂಚನೆ?

## ಅವಿಶ್ವಾಸ ನಿರ್ಣಯ ಮಂಡಿಸುವಂತೆ ಸಭಾಪತಿ ಪಟ್ಟು





**ಬೆಂಗಳೂರು:** ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್‌ಗೆ ಸ್ಪಷ್ಟ ಬಹುಮತ ದೊರೆತಿರುವ ಹಿನ್ನೆಲೆಯಲ್ಲಿ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಬಸವರಾಜ್ ಹೊರಟ್ಟಿ ಅವರಿಗೆ ರಾಜ್ಯ ಸರ್ಕಾರ ಸೂಚನೆ ನೀಡಿದೆ. ಆದರೆ ಹೊರಟ್ಟಿ ಅವರು ರಾಜೀನಾಮೆ ನೀಡಲು ನಿರಾಕರಿಸಿದ್ದಾರೆ ಎನ್ನಲಾಗಿದೆ

ಬಸವರಾಜ್ ಹೊರಟ್ಟಿ ಅವರನ್ನು ಸಂಪರ್ಕಿಸಿರುವ ರಾಜ್ಯ ಸರ್ಕಾರದ ಪ್ರತಿನಿಧಿಗಳು ಮುಂಬರುವ ಅಧಿವೇಶನಕ್ಕೂ ಮುನ್ನ ರಾಜೀನಾಮೆ ಸಲ್ಲಿಸುವಂತೆ ಸೂಚಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಸಭಾಪತಿ ಸ್ಥಾನದಿಂದ ಹೊರಟ್ಟಿ ಅವರನ್ನು ಕೆಳಗಿಳಿಸಲು ಸರ್ಕಾರ ಮುಂದಾಗಿರುವ ಹಿನ್ನೆಲೆಯಲ್ಲಿ, ಮುಂದಿನ ದಿನಗಳಲ್ಲಿ ಈ ವಿಚಾರ ಮತ್ತಷ್ಟು ಚರ್ಚೆಗೆ ಗ್ರಾಸವಾಗುವ ನಿರೀಕ್ಷೆಯಿದೆ.

ಮಾಧ್ಯಮಗಳ ಜೊತೆ ಮಾತನಾಡಿದ ಬಸವರಾಜ್ ಹೊರಟ್ಟಿ, ಸರ್ಕಾರದಿಂದ ಅಧಿಕೃತ ನೋಟಿಸ್ ಬಂದರೆ ರಾಜೀನಾಮೆ ನೀಡುತ್ತೇನೆ. 1956ರಿಂದ ಇಲ್ಲಿಯವರೆಗೆ ಯಾವುದೇ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿದ ಉದಾಹರಣೆ ಇಲ್ಲ. ಎಲ್ಲ ಸಭಾಪತಿಗಳೂ ತಮ್ಮ ಪೂರ್ಣ ಅವಧಿಯನ್ನು ಮುಗಿಸಿದ್ದಾರೆ. ಈಗ ಹೊಸ ಸಂಪ್ರದಾಯಕ್ಕೆ ಚಾಲನೆ ನೀಡಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಬಹುಮತದ ಬಲದಿಂದ ಸಭಾಪತಿ ಸ್ಥಾನದಲ್ಲಿ ಬದಲಾವಣೆ ತರಲು ಮುಂದಾಗುತ್ತದೆಯೇ ಅಥವಾ ಈಗ ರಾಜ್ಯ ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ.

### ಸಮರ್ಪಕ ಕಾರಣ ನೀಡಲಿ

ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಬೇಕಾದರೆ ಅದಕ್ಕೆ ಸಮರ್ಪಕ ಕಾರಣ ಇರಬೇಕು. ಭ್ರಷ್ಟಾಚಾರ, ಪಕ್ಷಪಾತ ಅಥವಾ ಕರ್ತವ್ಯಲೋಪದಂತಹ ಆರೋಪಗಳು ಇರಬೇಕು. ಯಾವುದೇ ಕಾರಣವಿಲ್ಲದೆ ಕೇವಲ ಬಹುಮತ ವಿದೆ ಎಂಬ ಕಾರಣಕ್ಕೆ ಕ್ರಮ ಕೈಗೊಳ್ಳುವುದು ಸರಿಯಲ್ಲ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಅಭಿಪ್ರಾಯಪಟ್ಟರು.


## ಜನನಾಯಗನ್ ಚಿತ್ರ ಪ್ರದರ್ಶನ ಬಂದ್

**ಮಂಡ್ಯ:** ತಮಿಳುನಾಡಿಗೆ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ಕಾವೇರಿ ನೀರು ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ಸಿಡಬ್ಲ್ಯುಎಂಎ ನಿರ್ದೇಶನ ನೀಡಿರುವುದನ್ನು ವಿರೋಧಿಸಿ ಕನ್ನಡ ಪರ ಕಾರ್ಯಕರ್ತರು ಗುರುವಾರ ಮಂಡ್ಯದಲ್ಲಿ ಪ್ರತಿಭಟನೆ ತೀವ್ರಗೊಳಿಸಿದರು.

ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡದಂತೆ ಪ್ರತಿಭಟನಾಕಾರರು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು. ಜನನಾಯಗನ್ ಚಿತ್ರ ಪ್ರದರ್ಶನಗೊಳ್ಳುತ್ತಿದ್ದ ಗುರುಶ್ರೀ ಚಿತ್ರಮಂದಿರಕ್ಕೆ ಕಾರ್ಯಕರ್ತರು ಮುತ್ತಿಗೆ ಹಾಕಿದರು. ಚಿತ್ರಮಂದಿರದ ಸಿಬ್ಬಂದಿ ಪ್ರದರ್ಶನ ಪುಟ 2ಕ್ಕೆ



## ಕೊಡಗಿನಲ್ಲಿ ಮಳೆ ಆರಂಭ



**ಮಡಿಕೇರಿ:** ಕೊಡಗಿನಲ್ಲಿ ಮತ್ತೆ ಮಳೆ ಆರಂಭವಾಗಿದೆ. ಹಾರಂಗಿ ಜಲಾಶಯಕ್ಕೆ ಒಳಹರಿವು ಹೆಚ್ಚಿರುವ ಹಿನ್ನೆಲೆಯಲ್ಲಿ ಜಲಾಶಯದಿಂದ 5,365 ಕ್ಯೂಸೆಕ್ ನೀರನ್ನ ಕಾವೇರಿ ನದಿಗೆ ಹರಿಸಲಾಗಿದೆ.

ಜಿಲ್ಲೆಯಾದ್ಯಂತ ಗಾಳಿ–ಮಳೆಯ ತೀವ್ರತೆ ಹೆಚ್ಚಾಗಿದೆ. ನದಿ, ತೋರೆ, ಹಳ್ಳ–ಕೊಳ್ಳಗಳು ತುಂಬಿ ಹರಿಯುತ್ತಿವೆ. ನಿರಂತರ ಮಳೆಯ ಪರಿಣಾಮ ಕಾವೇರಿ ನದಿಯ ನೀರಿನ ಮಟ್ಟವೂ ಏರಿಕೆಯಾಗಿದೆ. ಹಾರಂಗಿ ಜಲಾಶಯಕ್ಕೆ ಒಳಹರಿವು ಹೆಚ್ಚಿದೆ.

ನಿರಂತರ ಮಳೆ ಪರಿಣಾಮ ನದಿಯ ನೀರಿನ ಮಟ್ಟ ಏರಿಕೆಯಾಗಿದೆ. ನದಿಯ ತಗ್ಗು ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ವಹಿಸಲಾಗಿದೆ. ಹಾರಂಗಿ ಜಲಾನಯನ ಪ್ರದೇಶದಲ್ಲೂ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಜಲಾಶಯಕ್ಕೆ 4,613 ಕ್ಯೂಸೆಕ್ಸ್ ಪುಟ 2ಕ್ಕೆ

## ವೃದ್ಧಗೆ ಡಿಜಿಟಲ್ ಅರೆಸ್ಟ್: 70.77 ಲಕ್ಷ ವಂಚನೆ



**ಮೈಸೂರು:** ಡಿಜಿಟಲ್ ಅರೆಸ್ಟ್ ಭೀತಿ ಸೃಷ್ಟಿಸಿ ವೃದ್ಧರೊಬ್ಬರಿಗೆ 70.77 ಲಕ್ಷ ವಂಚಿಸಿದ ಪ್ರಕರಣ ಸೆನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ನಗರದ ಜೆಪಿ ನಗರ ನಿವಾಸಿ ಮಾಧವರಾವ್ (68) ವಂಚನೆಗೆ ಒಳಗಾದವರು.

ಮುಂಬೈ ಕ್ರೈಂ ಬ್ರಾಂಚ್ ಪೊಲೀಸ್ ಎಂದು ವಿಡಿಯೋ ಕಾಲ್ ಮಾಡಿ ಪರಿಚಯಿಸಿಕೊಂಡ ವಂಚಕ ಮನಿ ಲಾಂಡ್ರಿಂಗ್ ಕೇಸ್ ದಾಖಲಾಗಿದ್ದು, ನರೇಶ್ ಗೋಯಲ್ ಕೇಸ್‌ಗೆ ಸಂಬಂಧಿಸಿದಂತೆ ನಿಮ್ಮ ಕೆನರಾ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಆಗಿದೆ ಎಂದು ನಂಬಿಸಿದ್ದಾನೆ.

ಇದನ್ನು ಮಾಧವರಾವ್ ನಿರಾಕರಿಸಿದಾಗ ಡಿಕ್ಲರೇಷನ್ ಲೆಟರ್ ನೀಡುವಂತೆ ಸೂಚಿಸಿದ್ದಾನೆ. ನರೇಶ್ ಗೋಯಲ್ ಮನೆ ರೈಡ್ ಮಾಡಿದಾಗ ನಿಮ್ಮ ಆಧಾರ್ ಕಾರ್ಡ್ ಹಾಗೂ ಎಟಿಎಂ ದೊರೆತಿದೆ. ನೀವು ಡಿಜಿಟಲ್ ಅರೆಸ್ಟ್ ನಲ್ಲಿ ಇದ್ದೀರ. ನಿಮ್ಮ ಖಾತೆ ಪರಿಶೀಲನೆ ಮಾಡಬೇಕೆಂದು ನಂಬಿಸಿ ಹಂತ ಹಂತವಾಗಿ 70,77,000 ರೂ. ವರ್ಗಾವಣೆ ಮಾಡಿಕೊಂಡಿದ್ದಾರೆ. ಮತ್ತೆ ಕೆಲವು ದಿನಗಳ ನಂತರ ವಿಡಿಯೋ ಕಾಲ್ ಮಾಡಿ ಮತ್ತಷ್ಟು ಹಣ ವರ್ಗಾವಣೆ ಮಾಡುವಂತೆ ತಿಳಿಸಿದಾಗ ಮಾಧವರಾವ್‌ಗೆ ಮೋಸ ಹೋಗಿರುವುದು ಖಚಿತವಾಗಿದೆ. ಈ ಸಂಬಂಧ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಾವೇರಿ: ರಾಜ್ಯಕ್ಕೆ ಮತ್ತೆ ಆಘಾತ

## ತ.ನಾಡಿಗೆ 15 ದಿನ 3500 ಕ್ಯೂಸೆಕ್ ನೀರು ಹರಿಸಲು ಕಾವೇರಿ ಪ್ರಾಧಿಕಾರ ಆದೇಶ



**ನವದೆಹಲಿ:** ಕಾವೇರಿ ನೀರಿನ ವಿಚಾರದಲ್ಲಿ ಕರ್ನಾಟಕ ರಾಜ್ಯಕ್ಕೆ ಮತ್ತೆ ಆಘಾತ ನೀಡಲಾಗಿದೆ. ಬರದಿಂದ ಕಂಗೆಟ್ಟಿರುವುದನ್ನು ಗಮನಕ್ಕೆ ತೆಗೆದುಕೊಳ್ಳದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ತಮಿಳುನಾಡಿಗೆ ನೀರು ಹರಿಸುವಂತೆ ಗುರುವಾರ ಆದೇಶಿಸಿದೆ.

ಕಾವೇರಿ ನೀರು ನಿಯಂತ್ರಣ ಸಮಿತಿಯ ಶಿಫಾರಸಿನಂತೆ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಕರ್ನಾಟಕ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ಪ್ರತಿನಿತ್ಯ 3,500 ಕ್ಯೂಸೆಕ್‌ನಂತೆ ನೀರು ಹರಿಸಬೇಕು ಎಂದು ಸಿಡಬ್ಲ್ಯುಸಿ ಆದೇಶಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಕರ್ನಾಟಕ ಸರ್ಕಾರ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿತ್ತು. ಆದರೆ ಪ್ರಾಧಿಕಾರವು ನೀಡಿದ್ದ ಆದೇಶವನ್ನು ಎತ್ತಿಹಿಡಿದಿದ್ದು ನೀರು ಬಿಡುವಂತೆ ರಾಜ್ಯಕ್ಕೆ ಸೂಚಿಸಿದೆ.

ನವದೆಹಲಿಯಲ್ಲಿ ಎಸ್.ಕೆ.ಹಲ್ದಾರ್ ಅಧ್ಯಕ್ಷತೆಯಲ್ಲಿ ಗುರುವಾರ ಮಧ್ಯಾಹ್ನ ಪ್ರಾಧಿಕಾರದ ಮಹತ್ವದ ಸಭೆ ನಡೆಯಿತು. ಈ ಸಭೆಯಲ್ಲಿ ಕರ್ನಾಟಕದ ಪರವಾಗಿ ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಭಾಗವಹಿಸಿದ್ದರು. ರಾಜ್ಯದ ಜಲಾಶಯಗಳ ನೀರಿನ ಅಭಾವದ ಪರಿಸ್ಥಿತಿಯನ್ನು ಸಭೆಗೆ ವಿವರಿಸಿದರು. ಆದರೂ ಪುಟ 2ಕ್ಕೆ

### ಕರ್ನಾಟಕದ ವಾದ ಏನು?

ಸೂಪರ್ ಎಲ್ ನಿನೋ ಪರಿಣಾಮ ಕರ್ನಾಟಕದಲ್ಲಿ ಮಳೆ ಇಲ್ಲದೆ ಬರದ ಸ್ಥಿತಿ ಇದೆ. ಕಳೆದ 30 ವರ್ಷಗಳ ಸರಾಸರಿಗಿಂತ ಬರೋಬ್ಬರಿ ಶೇ.65.65ರಷ್ಟು ನೀರಿನ ಹರಿವು ಕಡಿಮೆಯಾಗಿದೆ. ಕರ್ನಾಟಕದಿಂದ ಬಿಡುಗಡೆಯಾಗುವ ನೀರಿನ ಜೊತೆಗೆ ಶೀಘ್ರದಲ್ಲೇ ಆರಂಭವಾಗಲಿರುವ ಈಶಾನ್ಯ ಮಳೆಗಾಲದ ಲಾಭವೂ ತಮಿಳುನಾಡಿಗೆ ಸಿಗಲಿದೆ. ಕರ್ನಾಟಕದಿಂದ ಈಗಾಗಲೇ ಬಿಡುಗಡೆ ಮಾಡಿರುವ ನೀರಿನ ಪರಿಣಾಮವಾಗಿ ತಮಿಳುನಾಡಿನ ಪುಟ 2ಕ್ಕೆ

### ತಮಿಳುನಾಡು ವಾದ ಏನು?

ಸುಪ್ರೀಂ ಕೋರ್ಟ್ ಆದೇಶದಂತೆ ಜೂನ್ ಮತ್ತು ಜುಲೈ ತಿಂಗಳಿನಲ್ಲಿ ತಮಿಳುನಾಡಿಗೆ ಒಟ್ಟು 32 ಟಿಎಂಸಿ ನೀರು ಬರಬೇಕಿತ್ತು. ಆದರೆ ಕರ್ನಾಟಕ ಕೇವಲ 3 ಟಿಎಂಸಿ ನೀರನ್ನು ಮಾತ್ರ ಹರಿಸಿದೆ. ಇದರಿಂದ ಮೆಟ್ಟೂರು ಅಣೆಕಟ್ಟಿನಲ್ಲಿ ನೀರಿನ ಸಂಗ್ರಹ ಕೇವಲ 40 ಟಿಎಂಸಿಗೆ ಕುಸಿದಿದೆ. ಕನಿಷ್ಠ 50 ಟಿಎಂಸಿ ನೀರಿದ್ದರೆ ಮಾತ್ರ ನೀರಾವರಿಗೆ ನೀರು ಬಿಡಲು ಸಾಧ್ಯ.



## ಆ.2ರಂದು ಸರ್ವಪಕ್ಷ ಸಭೆ

**ಬೆಂಗಳೂರು:** ಕಾವೇರಿ ನೀರಿನ ವಿಚಾರವಾಗಿ ಚರ್ಚಿಸಲು ಗೃಹ ಕಚೇರಿ ಕೃಷ್ಣಾದಲ್ಲಿ ಆ.2ರಂದು ಭಾನುವಾರ ಸರ್ವಪಕ್ಷ ಸಭೆ ಕರೆಯಲಾಗಿದೆ. ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ಕಾವೇರಿ ಜಲಾನಯನ ಪ್ರದೇಶದ ಸಂಸದರು, ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಸಿಎಂ ಡಿ.ಕೆ ಶಿವಕುಮಾರ್ ತಿಳಿಸಿದರು.

ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಗುರುವಾರ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಲಾಗಿದೆ. ಮುಂದೆ ಈ ವಿಚಾರವನ್ನು ಹೇಗೆ ತೆಗೆದುಕೊಂಡು ಹೋಗಬೇಕು ಎಂದು ಸರ್ವಪಕ್ಷ ಸಭೆಯಲ್ಲಿ ಚರ್ಚೆ ಮಾಡಲಾಗುವುದು ಎಂದು ಹೇಳಿದರು.

ಈ ವಿಚಾರವಾಗಿ ಸಂಸದರು, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಸೋಮಣ್ಣ, ಜಗದೀಶ್ ಶೆಟ್ಟರ್, ಬೊಮ್ಮಾಯಿ ಅವರ ಜೊತೆ ಚರ್ಚೆ ಮಾಡಲಾಗಿದೆ. ಅವರು ರಾಜ್ಯದ ಹಿತಕ್ಕಾಗಿ ಶಕ್ತಿ ಮೀರಿ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕರ್ನಾಟಕ ಕಾಂಗ್ರೆಸ್ ನಾಯಕರ ಬದಲು ದೆಹಲಿ ಸರ್ಕಾರವನ್ನು ಭೇಟಿ ಮಾಡಿ ಎಂದು ತಮಿಳುನಾಡು ಸಿಎಂ ವಿಜಯ್ ಅವರಿಗೆ ಡಿಎಂಕೆ ನಾಯಕ ಅನ್ಬುಮಣಿ ಸಲಹೆ ನೀಡಿರುವ ಬಗ್ಗೆ ಕೇಳಿದಾಗ, ಆ ವಿಚಾರವಾಗಿ ಪ್ರತಿಕ್ರಿಯೆ ನೀಡುವುದಿಲ್ಲ. ನಮಗೆ ಪರಸ್ಪರ ಕಿತ್ತಾಟ ಮಾಡಲು ಇಷ್ಟವಿಲ್ಲ. ನೆಲದ ಕಾನೂನು ಇದೆ. ನಾವು ಪರಸ್ಪರ ಗೌರವಿಸಬೇಕು. ಇಡೀ ದೇಶ ಒಂದಾಗಿ ಕೆಲಸ ಮಾಡಬೇಕು ಎಂದು ತಿಳಿಸಿದರು.

ಸಚಿವ ಸಂಪುಟ ವಿಸ್ತರಣೆ ಕುರಿತು ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, ಯಡಿಯೂರಪ್ಪ ಅವರು ಕೂಡ ಸಚಿವ ಸಂಪುಟ ರಚನೆ ಮಾಡದೇ ಅಧಿಕಾರ ಮಾಡಿರಲಿಲ್ಲವೇ? ಆಗ ಅಪ್ಪ–ಮಗ ಅಧಿಕಾರವನ್ನು ಅನುಭವಿಸಲಿಲ್ಲವೇ ಎಂದು ಪ್ರಶ್ನಿಸಿದರು.

## ಮಡಿಕೇರಿ: ಭೂಕುಸಿತ ಆತಂಕ

**ಮಡಿಕೇರಿ:** ಕೊಡಗು ಜಿಲ್ಲೆಯಲ್ಲಿ ಕಳೆದ ಎರಡು ದಿನಗಳಿಂದ ಮಳೆಯ ಅಬ್ಬರ ಮುಂದು ವರಿದಿದೆ. ಭೂಕುಸಿತದ ಆತಂಕ ಮತ್ತೆ ಹೆಚ್ಚಾಗಿದೆ. ಕಳೆದ ವರ್ಷ ಭೂಕುಸಿತ ಸಂಭವಿಸಿದ್ದ ಸ್ಥಳದಲ್ಲೇ ಇದೀಗ ಮತ್ತೆ ಭೂಮಿ ಕುಸಿದಿದೆ. ಸ್ಥಳೀಯರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಮಡಿಕೇರಿ ಸಮೀಪದ ಮಂಗಳದೇವಿ ನಗರದ ಖಾಸಗಿ ಜಾಗದಲ್ಲಿ ಮತ್ತೆ ಭೂಕುಸಿತ ಸಂಭವಿಸಿದೆ. ಗಮನಾರ್ಹ ಸಂಗತಿಯೆಂದರೆ, ಇದೇ ಸ್ಥಳದಲ್ಲಿ ಪುಟ 2ಕ್ಕೆ

# ಇಡೀ ಸರ್ಕಾರವೇ ದೆಹಲಿಗೆ ಬಂದಿಲ್ಲ

## ಬಿಜೆಪಿ ಆರೋಪಕ್ಕೆ ಬಿ.ಕೆ.ಹರಿಪ್ರಸಾದ್ ತಿರುಗೇಟು



**ನವದೆಹಲಿ:** ದೆಹಲಿಯಲ್ಲಿ ಇಡೀ ಕರ್ನಾಟಕ ಸರ್ಕಾರ ಬೀಡುಬಿಟ್ಟಿಲ್ಲ. ಮುಖ್ಯಮಂತ್ರಿ ಮಾತ್ರ ಸಂಸದರ ಸಭೆಗೆ ಹಾಗೂ ಕೇಂದ್ರದಿಂದ ಬರಬೇಕಿರುವ ಅನುದಾನದ ಕುರಿತು ಚರ್ಚಿಸಲು ದೆಹಲಿಗೆ ಬಂದಿದ್ದಾರೆ. ಉಳಿದೆಲ್ಲಾ ಸಚಿವರು ರಾಜ್ಯದಲ್ಲೇ ಇದ್ದು ಕಾರ್ಯನಿರ್ವಹಿಸುತ್ತಿದ್ದಾರೆಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿ ಪ್ರಸಾದ್ ತಿಳಿಸಿದರು.

ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಸಿಎಂ ದೆಹಲಿ ಪ್ರವಾಸದ ಕುರಿತು ಬಿಜೆಪಿ ಮಾಡುತ್ತಿರುವ ಆರೋಪಗಳಿಗೆ ತಿರು ಗೇಟು ನೀಡಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ದೆಹಲಿಗೆ ಬಂದಿರುವುದು ರಾಜ್ಯ ಸಂಸದರ ಸಭೆ ನಡೆಸಿ, ಕೇಂದ್ರದಿಂದ ಬರಬೇಕಿರುವ ಬಾಕಿ ಅನುದಾನದ ಕುರಿತು ಚರ್ಚೆ ಮಾಡಲು. ಆದರೆ ಕೆಲವು ಕೇಂದ್ರ ಸಚಿವರು ಇನ್ನೂ ಭೇಟಿಗೆ ಸಮಯ ನೀಡಿಲ್ಲ ಎಂದರು.

ಸಚಿವ ಸಂಪುಟ ವಿಸ್ತರಣೆ ವಿಷಯವಾಗಿ ಈಗಾಗಲೇ ಚರ್ಚೆಯಾಗಿದೆ. ಹೈಕಮಾಂಡ್‌ನಿಂದ ಪಟ್ಟಿಗೆ ಅನುಮತಿ ಸಿಗಬೇಕಿದೆ ಅಷ್ಟೇ. ಹೈಕಮಾಂಡ್ ಭೇಟಿಗೆ ಸಮಯ ನಿಗದಿಯಾಗುವ ಸಾಧ್ಯತೆಯಿದೆ ಎಂದು ಹರಿ ಪ್ರಸಾದ್ ತಿಳಿಸಿದರು.

ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಸಂತೋಷ್ ಅವರು ಬಿಜೆಪಿಗೆ ಆರ್‌ಎಸ್‌ಎಸ್‌ನಿಂದ ದೇಣಿಗೆ ಯಾಗಿ ಬಂದವರು. ಕೇವಲ ಬಿಜೆಪಿಯನ್ನು ನಿಯಂತ್ರಿಸುವ ಏಕೈಕ ಉದ್ದೇಶದಿಂದ ಅವರನ್ನು ನಾಗಪುರದಿಂದ ಇಲ್ಲಿಗೆ ಪುಟ 2ಕ್ಕೆ

# ಎಳೆದು ತಂದು ಜನರ ಮುಂದೆ ನಿಲ್ಲಿಸುತ್ತೇವೆ!

## ಗೃಹಸಚಿವ ಅಮಿತ್ ಶಾ ವಿರುದ್ಧ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ



**ನವದೆಹಲಿ:** ಅಮಿತ್ ಶಾ ಅವರನ್ನು ನಾವು ಒಂದು ದಿನ ಹೊರಗೆ ಎಳೆದು ತಂದು ಜನರ ಮುಂದೆ ನಿಲ್ಲಿಸುತ್ತೇವೆ ಎಂದು ರಾಜ್ಯಸಭೆ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಗುರುವಾರ ಸದನದಲ್ಲಿ ಆಕ್ರೋಶ ವ್ಯಕ್ತಪಡಿಸಿದರು.

ಪರೀಕ್ಷಾ ಅಕ್ರಮ ತಡೆ ತಿದ್ದುಪಡಿ ಮಸೂದೆ ಚರ್ಚೆ ವೇಳೆ ಖರ್ಗೆ ಮಾತನಾಡಿ, ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ಕ್ರಮವನ್ನು ಖಂಡಿಸಿದರು. ಈ ಘಟನೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೇ ಹೊಣೆ. ಸಂಸತ್ತಿನತ್ತ ಶಾಂತಿಯುತವಾಗಿ ಮೆರವಣಿಗೆ ಹೊರಟಿದ್ದ ಸಾವಿರಾರು ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್, ಅಶ್ರುವಾಯು ಮತ್ತು ಪೆಲೆಟ್ ಗನ್‌ಗಳನ್ನು ಬಳಸಲಾಗಿದೆ. ರೈಲ್ವೆ ನಿಲ್ದಾಣಗಳು ಮತ್ತು ಇಂಟರ್ನೆಟ್ ಸೇವೆಗಳನ್ನು ಬಂದ್ ಮಾಡಲಾಗಿತ್ತು ಎಂದು ಖರ್ಗೆ ದೂರಿದರು.

ಇದರಿಂದ ದೇಶದ ಮೂಲೆ ಮೂಲೆಗಳಿಂದ ಬಂದಿದ್ದ ಹಲವು ವಿದ್ಯಾರ್ಥಿಗಳ ಕೈಕಾಲುಗಳು ಮುರಿದಿವೆ, ಕಣ್ಣುಗಳಿಗೆ ಪೆಲೆಟ್ ಏಟು ಬಿದ್ದಿದೆ. ಈ ಘಟನೆಗೆ ಗೃಹ ಸಚಿವರೇ ಕಾರಣ. ಅವರು ಬಾಗಿಲ ಹಿಂದೆ ಅಡಗಿ ಕುಳಿತಿರಬಹುದು. ಆದರೆ ಹೆಚ್ಚು ಕಾಲ ಅಡಗಿರಲು ಸಾಧ್ಯವಿಲ್ಲ. ಒಂದು ದಿನ ನಾವು ಅವರನ್ನು ಹೊರಗೆ ಎಳೆದು ತಂದು ಜನರ ಮುಂದೆ ನಿಲ್ಲಿಸುತ್ತೇವೆ ಎಂದು ಕಿಡಿಕಾರಿದರು.

ಖರ್ಗೆ ಅವರ ಹೊರಗೆ ಎಳೆದು ತರುತ್ತೇವೆ ಎಂಬ ಪದಪ್ರಯೋಗಕ್ಕೆ ಆಡಳಿತ ಪಕ್ಷದ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈ ಹೇಳಿಕೆ ಹಿಂಸಾಚಾರದ ಬೆದರಿಕೆ ಎಂದು ಟೀಕಿಸಿದರು. ಸದನದ ನಾಯಕ ಜೆ.ಪಿ. ನಡ್ಡಾ ಅವರು ಈ ಹೇಳಿಕೆಯನ್ನು ಕಡತದಿಂದ ತೆಗೆದುಹಾಕುವಂತೆ ಸ್ಪೀಕರ್ ಅವರನ್ನು ಒತ್ತಾಯಿಸಿದರು. ಇದಕ್ಕೆ ಸ್ಪಷ್ಟನೆ ನೀಡಿದ ಖರ್ಗೆ ನಾನು ಯಾವುದೇ ಅಸಂಸದೀಯ ಪದ ಬಳಸಿಲ್ಲ, ನಾವು ಎಂದರೆ ಈ ದೇಶದ ಪುಟ 2ಕ್ಕೆ

# ಚಿನ್ನ ಕದ್ದು ಸಿಕ್ಕಿಬಿದ್ದ 'ಇಲಿರಾಯ'!

## ವಜ್ರ ಖಚಿತ ಚಿನ್ನಾಭರಣ ನಾಪತ್ತೆ ಪ್ರಕರಣಕ್ಕೆ ಟ್ವಿಸ್ಟ್




**ತುಮಕೂರು:** ನಗರದ ಪ್ರತಿಷ್ಠಿತ ಜ್ಯುವೆಲರಿ ಶಾಪ್‌ನಿಂದ ಸುಮಾರು 10 ಲಕ್ಷ ರೂಪಾಯಿ ಮೌಲ್ಯದ ವಜ್ರ ಖಚಿತ ಚಿನ್ನಾಭರಣಗಳು ನಾಪತ್ತೆಯಾಗಿದ್ದ ಪ್ರಕರಣಕ್ಕೆ ಈಗ ಸಿನಿಮಿಯಾ ಮಾದರಿ ತಿರುವು ಸಿಕ್ಕಿದೆ.

ಅಂಗಡಿಯ ಬೀಗ ಮುರಿಯದೆ, ಗೋಡೆ ಕೊರೆಯದೆ ಅಥವಾ ಯಾವುದೇ ಕಳವು ನಡೆಯದೆ ಚಿನ್ನಾಭರಣ ನಾಪತ್ತೆಯಾಗಿದ್ದ ಬಗ್ಗೆ ಮಾಲೀಕ ಹಾಗೂ ಸಿಬ್ಬಂದಿ ಬೆಚ್ಚಿಬಿದ್ದಿದ್ದರು. ಆದರೆ ತನಿಖೆ ಮುಂದುವರಿದಂತೆ ಪ್ರಕರಣಕ್ಕೆ ಸಿಕ್ಕ ಟ್ವಿಸ್ಟ್ ಪೊಲೀಸರನ್ನೂ ಅಚ್ಚರಿಗೊಳಿಸಿದೆ.

ಶಿವರಾಜ್ ಕುಮಾರ್ ನಟನೆಯ ಗೋಸ್ಟ್ ಸಿನಿಮಾದಲ್ಲಿ ಇಲಿಯೊಂದಕ್ಕೆ ತರಬೇತಿ ನೀಡಿ ಸೀಕ್ರೆಟ್ ಸಂದೇಶ ರವಾನಿಸುವ ವಾಹಕವನ್ನಾಗಿ ಬಳಸಿಕೊಳ್ಳಲಾಗಿತ್ತು. ಈ ಸಿನಿಮಾ ಕಥೆಯನ್ನೇ ಮೀರಿಸುವಂತಹ ಘಟನೆ ತುಮಕೂರು ನಗರದಲ್ಲಿ ಬೆಳಕಿಗೆ ಬಂದಿದೆ.

ನಗರದ ವಿಶ್ವಾಸ್ ಜ್ಯುವೆಲರಿ ಪುಟ 2ಕ್ಕೆ

## ಮೋದಿಗೆ ವಿವೇಕಾನಂದರ ಮೂರ್ತಿ ಸ್ಮರಣಿಕೆ ಸಿದ್ಧ



**ಮೈಸೂರು:** ಸಾಂಸ್ಕೃತಿಕ ನಗರ ಮೈಸೂರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಆಗಸ್ಟ್ 1ರಂದು ಆಗಮಿಸುತ್ತಿದ್ದಾರೆ. ಮೋದಿ ಅವರಿಗೆ ಸ್ಮರಣಿಕೆ ನೀಡಲು ಶಿಲ್ಪಿ ಅರುಣ್ ಯೋಗಿರಾಜ್ ಅವರು ಸ್ವಾಮಿ ವಿವೇಕಾನಂದರ ಮೂರ್ತಿ ಕೆತ್ತನೆ ಮಾಡಿದ್ದಾರೆ.

ವಿವೇಕಾನಂದರ ಮೂರ್ತಿಯನ್ನು ಬಿಳಿಯ ಬಣ್ಣದ ವೆಟ್ನಾಂ ಮಾರ್ಬಲ್‌ನಲ್ಲಿ ಕೆತ್ತನೆ ಮಾಡಿದ್ದಾರೆ. 8.5 ಕೆಜಿ ತೂಕವಿರುವ ಮೂರ್ತಿಯನ್ನು 15 ದಿನದಲ್ಲಿ ಅರುಣ್ ಯೋಗಿರಾಜ್ ನಿರ್ಮಿಸಿದ್ದಾರೆ.

ಮೈಸೂರಿಗೆ ಭೇಟಿ ನೀಡಲಿರುವ ಪ್ರಧಾನಿ ಮೋದಿ ರಾಮಕೃಷ್ಣ ಆಶ್ರಮಕ್ಕೆ ಭೇಟಿ ನೀಡಲಿದ್ದಾರೆ. ಆಶ್ರಮದಿಂದ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿ ನಿರ್ಮಿಸಿರುವ ವಿವೇಕ ಸ್ಮಾರಕವನ್ನು ಉದ್ಘಾಟನೆ ಮಾಡಲಿದ್ದಾರೆ.

ನಗರಕ್ಕೆ ಮೋದಿ ಭೇಟಿ ಹಿನ್ನೆಲೆಯಲ್ಲಿ ಗುಂಡಿ ಬಿದ್ದಿದ್ದ ರಸ್ತೆಗಳನ್ನು ಮುಚ್ಚಲಾಗಿದೆ. ಪ್ರಧಾನಿ ತೆರಳುವ ರಸ್ತೆಯ ಇಕ್ಕೆಲದ ಗೋಡೆಗಳಿಗೆ ಸ್ವಚ್ಛತೆಗೆ ಸಂಬಂಧಿಸಿದ ಚಿತ್ರಗಳನ್ನು ಬಿಡಿಸಲಾಗಿದೆ. ಪುಟ 2ಕ್ಕೆ

# ಮೂರು ದಿನ ಮಳೆ ಸಾಧ್ಯತೆ



**ಬೆಂಗಳೂರು:** ರಾಜ್ಯದ ಹಲವೆಡೆ ಮೂರು ದಿನ ದಿನ ಗುಡುಗು, ಸಿಡಿಲು ಸಹಿತ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

ರಾಜ್ಯದಾದ್ಯಂತ ಅಲ್ಲಲ್ಲಿ ಗುಡುಗು, ಸಿಡಿಲು ಸಹಿತ ಜೋರಾದ ಗಾಳಿಯೊಂದಿಗೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಆಗಸ್ಟ್ 1ರವರೆಗೆ ಅಲ್ಲಲ್ಲಿ ಭಾರಿ ಮಳೆ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಜುಲೈ 31ರಂದು ಕೆಲವು ಕಡೆಗಳಲ್ಲಿ ಭಾರಿ ಮಳೆಯಾಗುತ್ತದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಯಲ್ಲಿ ಆಗಸ್ಟ್ 1ರಿಂದ 3ರವರೆಗೆ ಮೂರು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸೂಚನೆ ನೀಡಲಾಗಿದೆ. ಆಗಸ್ಟ್ 2 ಮತ್ತು 3ರಂದು ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಬಾಗಲಕೋಟೆ, ಬೀದರ್, ಕಲಬುರಗಿ, ರಾಯಚೂರು, ವಿಜಯಪುರ, ಯಾದಗಿರಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸೂಚನೆಯಿದೆ.

ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಬೆಂಗಳೂರು ದಕ್ಷಿಣ ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಪುಟ 2ಕ್ಕೆ

# ಪ್ರಧಾನಿ ಸ್ವಾಗತಕ್ಕೆ ತಯಾರಿ

## ಪಾಲಿಕೆ ವತಿಯಿಂದ ಸ್ವಚ್ಛತಾ ಕಾರ್ಯ । ಪ್ರಮುಖ ರಸ್ತೆಗಳಿಗೆ ಡಾಂಬರ್





ಮೈಸೂರು: ಪ್ರಧಾನಿ ಆಗಮನದ ಹಿನ್ನೆಲೆ ನಗರದ ಪ್ರಮುಖ ರಸ್ತೆಗಳಿಗೆ ಡಾಂಬರ್ ಹಾಕಲಾಗುತ್ತಿದ್ದು, ಜೊತೆಗೆ ಪಾಲಿಕೆ ವತಿಯಿಂದ ಸ್ವಚ್ಛತಾ ಕಾರ್ಯ ನಡೆಯುತ್ತಿದೆ.

ಪ್ರಧಾನಿ ಸಂಚರಿಸುವ ಮಾರ್ಗದಲ್ಲಿ ಈಗಾಗಲೇ ಎಸ್ಪಿಜಿ ತಂಡದಿಂದ ಪರಿಶೀಲನೆ ನಡೆಯುತ್ತಿದ್ದು, ಪ್ರಧಾನಿ ಸಂಚರಿಸುವ ಮಾರ್ಗದಲ್ಲಿ ಸಾರ್ವಜನಿಕರ ಪ್ರಯಾಣಕ್ಕೆ ನಿರ್ಬಂಧ ಹಾಕಲಾಗಿದೆ. ಶೇಷ ವಿಮಾನದಲ್ಲಿ ಮೈಸೂರು ವಿಮಾನ ನಿಲ್ದಾಣಕ್ಕೆ ಆಗಮಿಸಿ ಅಲ್ಲಿಂದ ಹೆಲಿಕಾಪ್ಟರ್‌ನಲ್ಲಿ ಮೈಸೂರು ವಿವಿಯ ಕ್ರಾಫೆಡ್ ಭವನದ ಮುಂಭಾಗದಲ್ಲಿರುವ ಓವೆಲ್ ಗ್ರೌಂಡ್ಗೆ ಪ್ರಧಾನಿ ಆಗಮಿಸಲಿದ್ದಾರೆ. ಅಲ್ಲಿಂದ ರಸ್ತೆ ಮೂಲಕ ರಾಮಕೃಷ್ಣ ಆಶ್ರಮಕ್ಕೆ ಭೇಟಿ ನೀಡುವರು.

ಈ ಹಿನ್ನೆಲೆಯಲ್ಲಿ ಇಂದು ಹೆಲಿಕ್ಯಾಪ್ಟರ್ ನಿಂದ ಎರಡು ಬಾರಿ ಪೂರ್ವ ತಾಲೀಮು ನಡೆಸಿ ಸ್ಥಳದ ಸಂಪೂರ್ಣ ಮಾಹಿತಿ ಸಂಗ್ರಹಿಸಿದರು. ಮಾತ್ರವಲ್ಲದೆ, ಶ್ವಾನದಳ, ಬಾಂಬ್ ನಿಷ್ಕ್ರೀಯ ದಳ ತೀವ್ರವಾದ ತಪಾಸಣೆ ನಡೆಸಿ ಭದ್ರತೆ ಕೈಗೊಂಡರು.

## ಪ್ರಧಾನಿ ಮೋದಿ ವಿರುದ್ಧ ದಸಂಸ ಪ್ರತಿಭಟನೆಗೆ ನಿರ್ಧಾರ

**ಮೈಸೂರು:** ನೀಟ್ ಪ್ರಶ್ನೆ ಪತ್ರಿಕೆ ಅಕ್ರಮದಿಂದಾಗಿ ಹಲವಾರು ವಿದ್ಯಾರ್ಥಿಗಳು ಪ್ರಾಣ ಕಳೆದುಕೊಂಡಿದ್ದಾರೆ. ಇದರ ನೈತಿಕ ಹೊಣೆಯನ್ನು ಪ್ರಧಾನಿ ನರೇಂದ್ರ ಮೋದಿ ಹೊತ್ತಿಲ್ಲ. ಇದೇ ವೇಳೆ ಕನ್ನಡ ಶಾಲೆ ಧ್ವಂಸಗೊಳಿಸಿ ನಿರ್ಮಿಸಿರುವ ವಿವೇಕ ಸ್ಮಾರಕ ಉದ್ಘಾಟನೆಗೆ ಆಗಮಿಸುತ್ತಿದ್ದಾರೆ. ಹೀಗಾಗಿ ಆ. 1 ರಂದು ಬೆಳಗ್ಗೆ 11ಕ್ಕೆ ನಗರದಲ್ಲಿ ಗೋಬ್ಯಾಕ್ ಮೋದಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಸಂಘರ್ಷ ಸಮಿತಿ ಸಂಚಾಲಕ ಚೋರನಹಳ್ಳಿ ಶಿವಣ್ಣ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಮಾನಸ ಗಂಗೋತ್ರಿಯಲ್ಲಿ ಕ್ಲಾಕ್ ಟವರ್ ಬಳಿಯಿಂದ ಹೊರಡುವ ಪ್ರತಿಭಟನಾ ಮೆರವಣಿಗೆ ಮೋದಿ ಪಾಲ್ಗೊಳ್ಳುವ ಕಾರ್ಯಕ್ರಮ ನಡೆಯುವ ರಾಮಕೃಷ್ಣ ಆಶ್ರಮದವರೆಗೂ ಸಾಗಿ ಗೋಬ್ಯಾಕ್ ಮೋದಿ ಎಂಬ ಘೋಷಣೆ ಕೂಗಲಿದೆ. ಇದರಲ್ಲಿ ನೂರಾರು ವಿದ್ಯಾರ್ಥಿಗಳು, ಪ್ರಗತಿಪರರು ಪಾಲ್ಗೊಳ್ಳಲಿದ್ದಾರೆಂದರು. ಕಳೆದ ಮೇ 3 ರಂದು ನಡೆದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಸುದ್ದಿ ಕೇಳಿ ಒಟು 21 ವಿದ್ಯಾರ್ಥಿಗಳು ಆಘಾತಕ್ಕೊಳಗಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದು ಭಾರತದ ಶಿಕ್ಷಣ ವ್ಯವಸ್ಥೆಯ ಕರಾಳ ಘಟ್ಟದ ಸೂಚಕವೂ ಆಗಿದೆ. ಇದನ್ನು ವಿರೋಧಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆ ವೇಳೆ ಅಮಾಯಕ ಪ್ರತಿಭಟನಾ ನಿರತರ ಮೇಲೆ ಪೊಲೀಸರು ಹಾಗೂ ಗೂಂಡಾಗಳು ದುರ್ವರ್ತನೆ ತೋರಿ ಹಲವರ ಮೇಲೆ ಹಲ್ಲೆ ನಡೆಸಿದ್ದಾರೆ. ಇದನ್ನು ಖಂಡಿಸಿ ಹಾಗೂ ನಗರದ ಕನ್ನಡ ಶಾಲೆ ಧ್ವಂಸಗೊಳಿಸಿ ವಿವೇಕ ಸ್ಮಾರಕ ನಿರ್ಮಿಸಿರುವುದನ್ನು ಪ್ರತಿಭಟಿಸಿ ಅಂದು ಗೋಬ್ಯಾಕ್ ಮೋದಿ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗುತ್ತಿದೆ ಎಂದು ವಿವರಿಸಿದರು. ದಸಂಸ ಹಾಗೂ ಇನ್ನಿತರ ಸಂಘಟನೆಗಳ ಪದಾಧಿಕಾರಿಗಳಾದ ಎಂ. ಮಂಜುನಾಥ್, ಗಿರೀಶ್, ಯಡದೊರೆ ಮಹದೇವಯ್ಯ, ರವಿಕುಮಾರ್, ಸಣ್ಣಮಾದು, ಸುನಿಲ್ ಬುದ್ಧ ಮೊದಲಾದವರು ಇದ್ದರು.




## ಮುಂದುವರೆದ ಕಾವೇರಿ ಹೋರಾಟ




ಮೈಸೂರು: ತಮಿಳುನಾಡಿಗೆ 15ದಿನಗಳ ಕಾಲ ನೀರು ಹರಿಸಿ ಎಂಬ ಕಾವೇರಿ ನೀರು ನಿರ್ವಹಣಾ ಮಂಡಳಿಯ ಆದೇಶದ ವಿರುದ್ಧ ಮೈಸೂರಿನಲ್ಲಿ ಸರಣಿ ಪ್ರತಿಭಟನೆಗಳು ಎರಡನೇ ದಿನವೂ ಮುಂದುವರೆದವು.

ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಳಗ ನಗರದ ರಾಮಸ್ವಾಮಿ ವೃತ್ತದಲ್ಲಿ ಜಮಾವಣೆಗೊಂಡು ನೀರು ಬಿಡುವಂತೆ ಆದೇಶ ಮಾಡಿದ ಮಂಡಳಿ ವಿರುದ್ಧ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವವಹಿಸಿದ್ದ ಬಳಗದ ಸಂಸ್ಥಾಪಕ ಅಧ್ಯಕ್ಷ ಡಾ.ಎಂ.ಲಿಂಗರಾಜು ಮಾತನಾಡಿ, ಕಾವೇರಿ ಪ್ರಾಧಿಕಾರ ಸೂಚನೆಯನ್ನು ಖಂಡಿಸುತ್ತೇನೆ. ಮೈಸೂರು, ಬೆಂಗಳೂರು, ಮಂಡ್ಯ ಜಿಲ್ಲೆಗೆ ಕುಡಿಯಲು ನೀರಿನ ಅಭಾವವಿದೆ. ರೈತರ ಬೆಳೆಗೂ ನೀರಿಲ್ಲ ಎಂದಿದ್ದಾರೆ. ರಾಜ್ಯ ಈಗಾಗಲೇ ಬರ ಪರಿಸ್ಥಿತಿ ಎದುರಾಗಿದೆ. ಹೀಗಾಗಿ ರಕ್ತ ಕೊಟ್ಟರೂ ಸಹ ನೀರು ಕೊಡುವುದಿಲ್ಲ. ರಾಜ್ಯ ಸರ್ಕಾರ ರಾತ್ರೋರಾತ್ರಿ ನೀರು ಹರಿಯಲು ಬಿಟ್ಟರೆ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಒಂದು ಹನಿ ನೀರು ಬಿಡಬಾರದು ಎಂದು ಆಗ್ರಹಿಸುತ್ತೇನೆಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮಿಳುನಾಡು ವಿಜಯ ಸರ್ಕಾರಕ್ಕೆ ಮಣಿಯದೇ ಈ ಕೂಡಲೇ ಮೇಕೆದಾಟು ಯೋಜನೆಗೆ ಚಾಲನೆ ನೀಡಬೇಕು. ಕನ್ನಡ ಪರ ಸಂಘಟನೆಗಳೆಲ್ಲವೂ ಅವರೊಟ್ಟಿಗೆ ನಿಲ್ಲಲ್ಲಿದ್ದು, ರಾಜ್ಯ ರೈತ, ಜನರ ಕುಡಿಯುವ ನೀರಿನ ವಿಚಾರದಲ್ಲಿ ಮಹತ್ತರವಾದ ತೀರ್ಮಾನ ಕೈಗೊಳ್ಳಬೇಕೆಂದರು. ಪ್ರಧಾನ ಕಾರ್ಯದರ್ಶಿ ಚರಣ್ ರಾಜ್, ರಾಜ್ಯ ಉಪಾಧ್ಯಕ್ಷ ಎಂ.ಮಲ್ಲೇಶ್, ಖಜಾಂಚಿ ಮಹದೇವಸ್ವಾಮಿ, ರಾಜ್ಯ ಸಂಚಾಲಕ ಕರಿಯಪ್ಪ, ಮಹದೇವ್, ಪುಟ್ಟತಾಯಮ್ಮ, ಸೌಮ್ಯ, ಸಚಿನ್, ಮಹೇಶ್, ರವಿಪ್ರಸಾದ್, ರವಿಕುಮಾರ್, ರವಿಕಿರಣ್, ಸೋಮಣ್ಣ, ಶಿವಣ್ಣ, ಗುರುಸ್ವಾಮಿ, ಗಗನ ಇತರರು ಇದ್ದರು.

### ಖಾಲಿ ಕೊಡ ಪ್ರದರ್ಶನ

ಕನ್ನಡ ಚಳವಳಿ ಹೋರಾಟಗಾರರ ಸಂಘವು ನಗರದ ಅಗ್ರಹಾರ ವೃತ್ತದಲ್ಲಿ ಖಾಲಿ ಕೊಡಗಳನ್ನು ಪ್ರದರ್ಶಿಸಿ ಕಾವೇರಿ ನೀರು ಖಾಲಿ ಖಾಲಿ ಎಂದು ಪ್ರತಿಭಟಿಸಿದವು.

ಸಂಘದ ಅಧ್ಯಕ್ಷ ಶಿವಶಂಕರ್ ಮಾತನಾಡಿ, ಕಾವೇರಿ ಭಾಗದ ರೈತರು ಹಾಗೂ ಜನರಿಗೆ ಕುಡಿಯಲು ನೀರಿಲ್ಲ. ಇಂತಹ ವೇಳೆ ಅವೈಜ್ಞಾನಿಕವಾಗಿ ನೀರು ಬಿಡಿ ಎಂದಿರುವ ಮಂಡಳಿಯನ್ನೇ ರದ್ದುಪಡಿಸಬೇಕು. ಯಾವುದೇ ಕಾರಣಕ್ಕೂ ಮಂಡಳಿ ಆದೇಶವನ್ನು ರಾಜ್ಯ ಸರ್ಕಾರ ಪಾಲಿಸಬಾರದು. ನೀರು ಬಿಡಲು ಮುಂದಾದರೆ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಕಾವೇರಿ ನದಿ ವಿವಾದ ದಸರೆ ಸಂದರ್ಭದಲ್ಲಿ ಉದ್ಭವಿಸಿದರೆ ಅದು ಪ್ರವಾಸೋದ್ಯಮಕ್ಕೆ ಹೊಡೆತ ಬೀಳಲಿದೆ. ಹೀಗಾಗಿ ಕಾವೇರಿ ವಿವಾದಕ್ಕೆ ಮುಕ್ತಿ ನೀಡುವ ನಿಟ್ಟಿನಲ್ಲಿ ರಾಷ್ಟ್ರೀಯ ಜಲನೀತಿಯನ್ನು ಜಾರಿಗೊಳಿಸಬೇಕು. ಈಗಾಗಲೇ ಕುಡಿಯುವ ನೀರಿಗೆ ಅಭಾವ ಉಂಟಾಗಿದೆ. ಪರಿಸ್ಥಿತಿ ಅವಲೋಕಿಸಿ ಆದೇಶಿಸಬೇಕಿದ್ದ ಮಂಡಳಿ ಹೀಗೆ ಎಕಾಎಕಿ ಸೂಚನೆ ನೀಡಿರುವುದು ಸರಿಯಲ್ಲ. ಹೋಟೆಲ್ ಮಾಲೀಕರ ಸಂಘ ಸದಾ ರೈತರ ಹಾಗೂ ಕಾವೇರಿ ನೀರಿನ ವಿಚಾರದಲ್ಲಿ ರೈತರ ಪರವಾಗಿ ನಿಲ್ಲಲ್ಲಿದೆ ಎಂದು ಹೇಳಿದರು. ಸಮಾಜ ಸೇವಕ ಕೆ.ರಘುರಾಮ್ ವಾಜಪೇಯಿ ಇನ್ನಿತರರು ಇದ್ದರು.

**ಮೊದಲ ಪುಟದಿಂದ**

## ಕಾವೇರಿ: ರಾಜ್ಯಕ್ಕೆ ಮತ್ತೆ ಆಘಾತ

ರಾಜ್ಯದ ವಾದವನ್ನು ಗಮನಕ್ಕೆ ತೆಗೆದುಕೊಳ್ಳದ ಕೇಂದ್ರದ ಅಧಿಕಾರಿಗಳು ಕರ್ನಾಟಕಕ್ಕೆ ಮರಣ ಶಾಸನ ಬರೆದಿದ್ದಾರೆ. ಕರ್ನಾಟಕದ ಅಣೆಕಟ್ಟುಗಳಲ್ಲಿ 55 ಟಿಎಂಸಿ ನೀರಿದೆ. ಮುಂಬರುವ ದಿನಗಳಲ್ಲಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಕರ್ನಾಟಕದ ಜಲಮೂಲಗಳಿಗೆ ದಿನಕ್ಕೆ 1ರಿಂದ 2 ಟಿಎಂಸಿ ನೀರು ಹರಿದುಬರುವ ನಿರೀಕ್ಷೆಯಿದೆ. ಹೀಗಾಗಿ ಒಟ್ಟು ನೀರು 60 ರಿಂದ 70 ಟಿಎಂಸಿಗೆ ತಲುಪಲಿದೆ. ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ನಿಯಂತ್ರಣ ಸಮಿತಿಯ ಶಿಫಾರಸಿನಂತೆ ಮುಂದಿನ 15 ದಿನಗಳವರೆಗೆ ಒಟ್ಟು 4.5 ಟಿಎಂಸಿ (ಪ್ರತಿದಿನ 3,500 ಕ್ಯೂಸೆಕ್) ನೀರು ಬಿಡುಗಡೆ ಮಾಡಬೇಕು ಎಂದು ಪ್ರಾಧಿಕಾರಿ ಆದೇಶಿಸಿದೆ. ತಮಿಳುನಾಡು ಸರ್ಕಾರದ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದರು.

### ತಮಿಳುನಾಡು ವಾದ ಏನು?

ನಮ್ಮ ಕುರುವೈ ಕೃಷಿಗೆ ಯಾವುದೇ ತೊಂದರೆಯಾಗದಂತೆ ಮುಂದಿನ 15 ದಿನಗಳ ಕಾಲ ದಿನಂಪ್ರತಿ 11,500 ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲು ಕರ್ನಾಟಕಕ್ಕೆ ನಿರ್ದೇಶಿಸಬೇಕು.

### ಕರ್ನಾಟಕದ ವಾದ ಏನು?

ಜಲಾಶಯಗಳಲ್ಲಿ ಗಣನೀಯ ಪ್ರಮಾಣದ ನೀರು ಸಂಗ್ರಹವಾಗಿದೆ. ಈ ಹಿಂದಿನ ಬರಗಾಲದ ವರ್ಷಗಳಲ್ಲೂ ಈಶಾನ್ಯ ಮಳೆ ತಮಿಳುನಾಡಿನ ಜಲಾಶಯಗಳಿಗೆ ಅಪಾರ ಪ್ರಮಾಣದ ನೀರನ್ನು ತುಂಬಿಸಿದೆ. ಬಿಳಿಗುಂಡ್ಲುವಿನಲ್ಲಿ 3,500 ಕ್ಯೂಸೆಕ್ ನೀರಿನ ಹರಿವು ಖಚಿತಪಡಿಸಲು, ನದಿಪಾತ್ರ ಒಣಗಿರುವುದರಿಂದ ಮತ್ತು ಸಾಗಣೆ ನಷ್ಟದ ಕಾರಣದಿಂದ ಕರ್ನಾಟಕವು ಸುಮಾರು 7,000 ಕ್ಯೂಸೆಕ್ ಬಿಡುಗಡೆ ಮಾಡಬೇಕಾಗುತ್ತದೆ. ಜೂನ್ 2027ರವರೆಗೆ ರಾಜ್ಯದ ಕುಡಿಯುವ ನೀರಿನ ಅಗತ್ಯವನ್ನು ಪೂರೈಸಲು ಕರ್ನಾಟಕಕ್ಕೆ ಸುಮಾರು 40 ಟಿಎಂಸಿ ನೀರನ್ನು ಕಾಯ್ದಿರಿಸುವ ಅಗತ್ಯವಿದೆ. ನಿಯಂತ್ರಣ ಸಮಿತಿ ನೀಡಿರುವ ನಿರ್ದೇಶನವನ್ನು ಇನ್ನೂ ಎರಡು ವಾರಗಳ ಕಾಲ ತಾತ್ಕಾಲಿಕವಾಗಿ ತಡೆಹಿಡಿದು ಮಳೆಯ ಸ್ಥಿತಿಯನ್ನು ಮರುಪರಿಶೀಲಿಸಬೇಕು.

## ಮಡಿಕೇರಿಯಲ್ಲಿ ಭೂಕುಸಿತ ಆತಂಕ

ಕಳೆದ ವರ್ಷವೂ ಭೂಕುಸಿತ ಉಂಟಾಗಿತ್ತು. ಇದೀಗ ನಿರಂತರ ಮಳೆಯಿಂದ ಮತ್ತೊಮ್ಮೆ ಭೂಮಿ ಕುಸಿದಿರುವುದು ಸ್ಥಳೀಯರನ್ನು ಆತಂಕಕ್ಕೆ ದೂಡಿದೆ. ಮಳೆ ಇದೇ ರೀತಿ ಮುಂದುವರಿದರೆ ಇನ್ನಷ್ಟು ಭೂಕುಸಿತ ಸಂಭವಿಸುವ ಸಾಧ್ಯತೆ ಇದೆ ಎಂಬ ಆತಂಕ ವ್ಯಕ್ತವಾಗಿದೆ. ಬೆಟ್ಟ ಪ್ರದೇಶಗಳಲ್ಲಿ ನೆಲ ಸಡಿಲಗೊಂಡಿರುವುದರಿಂದ ಸುತ್ತಮುತ್ತಲಿನ ನಿವಾಸಿಗಳು ಭಯಭೀತರಾಗಿದ್ದಾರೆ.

## ಕೊಡಗಿನಲ್ಲಿ ಮಳೆ ಆರಂಭ

ನೀರು ಹರಿದು ಬರುತ್ತಿದೆ. ಒಳಹರಿವು ಹೆಚ್ಚಿದ ಕಾರಣ 5,365 ಕ್ಯೂಸೆಕ್ಸ್ ನೀರನ್ನು ಕಾವೇರಿ ನದಿಗೆ ಬಿಡುಗಡೆ ಮಾಡಲಾಗುತ್ತಿದೆ.

ಜಿಲ್ಲೆಯಲ್ಲಿ ಇನ್ನಷ್ಟು ದಿನಗಳ ಕಾಲ ಹೀಗೆ ಮಳೆ ಮುಂದುವರಿಯುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕೆಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸರ್ಕಾರವೇ ದೆಹಲಿಗೆ ಬಂದಿಲ್ಲ

ಕಳು ಹಿಸಲಾಗಿದೆ. ನೋಂದಣಿಯಾಗದ ಯಾವುದೇ ಸಂಘಟನೆ ಸಲಹೆ ಅಥವಾ ಸೂಚನೆಗಳನ್ನು ಪಡೆಯುವ ಅಗತ್ಯ ಕಾಂಗ್ರೆಸ್‌ಗೆ ಇಲ್ಲ ಎಂದು ವ್ಯಂಗ್ಯವಾಡಿದರು. ಕಾಂಗ್ರೆಸ್ ಸರ್ಕಾರದ ಬಗ್ಗೆ ಮಾತನಾಡುವ ಬದಲು ಬಿಜೆಪಿ ನಾಯಕರು ಮೊದಲು ತಮ್ಮ ಪಕ್ಷದಲ್ಲಿ ಉದ್ಭವಿಸಿರುವ ಗೊಂದಲಗಳನ್ನು ಸರಿಪಡಿಸಿಕೊಳ್ಳುವ ಬಗ್ಗೆ ಯೋಚಿಸಲಿ ಎಂದು ಹರಿಪ್ರಸಾದ್ ಸಲಹೆ ನೀಡಿದರು.

## ಚಿನ್ನ ಕದ್ದು ಸಿಕ್ಕಿಬಿದ್ದ 'ಇಲಿರಾಯ'!

ಶಾಪ್‌ನಲ್ಲಿ ರಾತ್ರಿ ವೇಳೆ ಸುಮಾರು 50 ಗ್ರಾಂ ವಜ್ರ ಹಾಗೂ ಚಿನ್ನಾಭರಣಗಳು ಇದ್ದಕ್ಕಿದ್ದಂತೆ ನಾಪತ್ತೆಯಾಗಿದ್ದವು. ಬೆಳಗ್ಗೆ ಅಂಗಡಿ ತೆರೆದು ನೋಡಿದ ಸಿಬ್ಬಂದಿಗೆ ಅಚ್ಚರಿ ಕಾದಿತ್ತು. ಸರಗಳು, ಉಂಗುರಗಳು ಸೇರಿದಂತೆ ಹಲವು ಅಮೂಲ್ಯ ಆಭರಣಗಳು ಮಿಸ್ಸಿಂಗ್ ಆಗಿದ್ದವು. ಈ ಪ್ರಕರಣದಲ್ಲಿ ಟ್ವಿಸ್ಟ್ ಕೊಟ್ಟಿದ್ದು ಏನು ಅಂದರೆ ಇಲಿರಾಯ. ಆಭರಣ ಅಂಗಡಿಯಲ್ಲಿದ್ದ ಚಿನ್ನದ ಉಂಗುರುಗಳನ್ನು ಇಲಿ ಒಂದೊಂದಾಗಿ ತೆಗೆದುಕೊಂಡು ಹೋಗಿ ಬಿಲದಲ್ಲಿ ಅಡಗಿಸಿತ್ತು. ಪೊಲೀಸರು ಸಿಸಿಟಿವಿ ಪರಿಶೀಲಿಸಿದಾಗ ಚಾಣಕ್ಷ ಇಲಿರಾಯ ಸಿಕ್ಕಿಬಿದಿದ್ದಾನೆ.

## ಮೂರು ದಿನ ಮಳೆ ಸಾಧ್ಯತೆ

ಕೋಲಾರ, ಮಂಡ್ಯ, ಮೈಸೂರು, ತುಮಕೂರು, ವಿಜಯನಗರ ಜಿಲ್ಲೆಗಳಲ್ಲಿ ಆಗಸ್ಟ್ 1ರವರೆಗೆ ಭಾರಿ ಮಳೆಯಾಗುವ ಸೂಚನೆಯಿದೆ.

ಆಗಸ್ಟ್ 2 ಹಾಗೂ 3ರಂದು ಬೆಂಗಳೂರು ನಗರ, ಶಿವಮೊಗ್ಗ, ಕೊಡಗು, ಚಿಕ್ಕಮಗಳೂರು, ದಾವಣಗೆರೆ, ತುಮಕೂರು ಸೇರಿದಂತೆ 17 ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

## ಆ.2 ಭರತನಾಟ್ಯ ರಂಗಪ್ರವೇಶ

ಮೈಸೂರು: ನಗರದ ಗುರುದೇವ ಲಲಿತ ಕಲಾ ಅಕಾಡೆಮಿ ವತಿಯಿಂದ ತಮ್ಮ ಶಿಷ್ಯೆಯಾಗಿರುವ ಕೆ. ಪಾರ್ಕ್ವಿತಾ ಅವರ ಭರತನಾಟ್ಯ ರಂಗ ಪ್ರವೇಶ ಕಾರ್ಯಕ್ರಮ ಆ. 2 ರಂದು ವಿಜಯನಗರದ ಜಗನ್ನಾಥ ಕಲಾ ಮತ್ತು ಸಾಂಸ್ಕೃತಿಕ ಕೇಂದ್ರದಲ್ಲಿ ಆಯೋಜಿಸಲಾಗಿದೆ ಎಂದು ಡಾ. ಚೇತನಾ ರಾಧಾಕೃಷ್ಣ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಬೆಳಗ್ಗೆ 1ಕ್ಕೆ ಕಾರ್ಯಕ್ರಮ ಆರಂಭವಾಗಲಿದೆ. ಸಂಗೀತ ಕಲಾರತ್ನ ಡಾ.ಎಂ. ಸೂರ್ಯಪ್ರಸಾದ್, ಡಾ.ಕೆ. ಕುಮಾರ್, ಲೋಕೇಶ್ ಕಾಯರ್ಗ ಇನ್ನಿತರರು ವೇದಿಕೆಯಲ್ಲಿರುವರು. ಜೆ. ಪಾರ್ಕ್ವಿತಾ ಅವರು ತಮ್ಮ ಗುರುಗಳ ಮಾರ್ಗದರ್ಶನದಲ್ಲಿ ಭರತನಾಟ್ಯ ಅಭ್ಯಾಸ ಮಾಡುತ್ತಿದ್ದು, ತಮ್ಮ ಕಲಾ ಪಯಣದ ಮಹತ್ವದ ಘಟ್ಟವಾಗಿ ಈ ರಂಗಪ್ರವೇಶ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆಂದರು ರಾಧಾಕೃಷ್ಣ, ಪಾರ್ಕ್ವಿತಾ, ಕೆ. ಲಕ್ಷ್ಮಿ, ಕೆ. ಕಾರ್ತಿಕ್ ಇದ್ದರು.



## ನಾಳೆ ಕನ್ನಡ, ಸಂಸ್ಕೃತಿ ಉತ್ಸವ



ಮೈಸೂರು: ಟಿ. ನರಸೀಪುರ ತಾಲ್ಲೂಕಿನ ಯಾಚೇನಹಳ್ಳಿಯ ನನ್ನವ್ವ ಸಾಂಸ್ಕೃತಿಕ ಕಲಾ ತಂಡದ ವತಿಯಿಂದ ಆ. 1 ರ ಬೆಳಗ್ಗೆ 10ಕ್ಕೆ ಬಲ್ಲಾಳ್ ವೃತ್ತ ಬಳಿಯ ಪಂಚವಟಿ ಗಾರ್ಡೇನಿಯಾ ಹೋಟೆಲ್‌ನಲ್ಲಿ ಕನ್ನಡ ಮತ್ತು ಸಂಸ್ಕೃತಿ ಉತ್ಸವ ಹಾಗೂ ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯದರ್ಶಿ ಜಿ.ಎಚ್. ಸಂಕಪ್ಪ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಉದ್ಘಾಟಿಸುವರು, ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸುವರು, ವೈ.ಎನ್. ಶಂಕರೇಗೌಡ, ನಾಗರಾಜ್ ವಿ. ಭೈರಿ, ನಿರ್ಮಲಾ ಮಠಪತಿ, ಜಯಪ್ಪ ಹೊನ್ನಾಳಿ, ಮ.ನ. ಲತಾ ಮೋಹನ್ ಇನ್ನಿತರರು ವೇದಿಕೆಯಲ್ಲಿರುವರು. ಕಾರ್ಯಕ್ರಮದಲ್ಲಿ ಕಂಸಾಳೆ, ಕಹಳೆ, ವೀರಗಾಸೆ, ಮಂಗಳವಾದ್ಯ, ನಾಡಗೀತೆ, ನಾಡು ನುಡಿ ನೃತ್ಯ, ಜಾನಪದ ನೃತ್ಯ ಮೊದಲಾದವು ಇರಲಿವೆ. ಈ ವೇಳೆ ಮಹದೇವು ಅವರಿಗೆ ಕನ್ನಡ ಕಣ್ಮಣಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಮಾಹಿತಿ ನೀಡಿದರು. ಪ್ರಭಾಶಾಸ್ತ್ರಿ ಜೋಶ್ಯುಲ, ನಾ. ಗಂಗಾಧರಪ್ಪ, ಸುಮಾ ಪಂಚವಳ್ಳಿ, ಸಲ್ಮಾಬಾನು, ಸಿ. ಚೌಡಯ್ಯ, ಡಾ.ಸಿ.ವಿ. ರವೀಂದ್ರ, ಎನ್. ವೈರಮುಡಿ, ನರಸಿಂಹಾಚಾರ ಇದ್ದರು.

## ನಾಳೆಯಿಂದ ವಿಶ್ವಸ್ತನ್ಯಪಾನ ದಿನಾಚರಣೆ

ಮೈಸೂರು: ಭಾರತೀಯ ಶಿಶು ವೈದ್ಯರ ಸಂಘದ ಮೈಸೂರು ಶಾಖೆ ವತಿಯಿಂದ ಇನ್ನಿತರ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಆ. 1 ರಿಂದ 7 ರವರೆಗೆ ನಗರದಲ್ಲಿ ವಿಶ್ವ ಸ್ತನ್ಯಪಾನ ದಿನಾಚರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವೈದ್ಯರಾದ ನಾರಾಯಣಪ್ಪ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಆ. 1 ರಂದು ಬೆಳಗ್ಗೆ 11ಕ್ಕೆ ಜೆಎಸ್ಎಸ್ ಆಸ್ಪತ್ರೆಯ ರಾಜೇಂದ್ರ ಶತಮಾನೋತ್ಸವ ಭವನದಲ್ಲಿ ಉದ್ಘಾಟನೆ ನೆರವೇರಲಿದೆ. ಡಾ.ಸಿ.ಪಿ. ಮಧು, ತಾವು, ಡಾ.ಎಸ್. ಮಮತಾ, ಡಾ.ಡಿ. ಶ್ರೀನಿವಾಸ ಮೂರ್ತಿ ಇನ್ನಿತರ'ರು ವೇದಿಕೆಯಲ್ಲಿರವರು. ನಂತರ ಆ. 7 ರವರೆಗೆ ವಿವಿಧೆಡೆ ಸ್ತನ್ಯಪಾನ ಮಹತ್ವ ಕುರಿತು ಅರಿವು ಮೂಡಿಸಲಾಗುವುದು. ಸುಸ್ಥಿರ ಜೀವನದ ಆರಂಭಕ್ಕೆ ಸ್ತನ್ಯಪಾನ– ಈಗಾಗಲೇ ಪರಿಣಾಮಕಾರಿಯಾಗಿರುವ ಬೆಂಬಲ ವ್ಯವಸ್ಥೆಗಳನ್ನು ಮತ್ತಷ್ಟು ಬಲಪಡಿಸೋಣ ಎಂಬುದು ಈ ಬಾರಿಯ ಘೋಷವಾಕ್ಯವಾಗಿದೆ ಎಂದರು. ಡಾ.ಟಿ ಶಿವು, ಡಾ.ಕೆ. ಅನುಷಾ ರಾಜ್, ಡಾ. ರಾಜೇಂದ್ರಕುಮಾರ್, ಡಾ. ಪ್ರದೀಪ್, ಡಾ. ನಾಗೇಂದ್ರ ಇದ್ದರು.




## ಜನನಾಯಗನ್ ಪ್ರದರ್ಶನ ಬಂದ್

ರದ್ದುಗೊಳಿಸಲು ಒಪ್ಪಿಕೊಂಡರು. ಬಳಿಕ ಪ್ರತಿಭಟನಾಕಾರರು ಚಿತ್ರಮಂದಿರದ ಹೊರಗೆ ಚಿತ್ರದ ಪೋಸ್ಟರ್‌ಗಳನ್ನು ಹರಿದು ಕಾವೇರಿ ನೀರು ನಿಯಂತ್ರಣ ಸಮಿತಿಯ ನಿರ್ದೇಶನದ ವಿರುದ್ಧ ಘೋಷಣೆಗಳನ್ನು ಕೂಗಿದರು.

## ಸಂಸತ್‌ನಲ್ಲಿ ಗದ್ದಲ

ಸದಸ್ಯರು ವಿವಿಧ ವಿಚಾರಗಳನ್ನ ಮುಂದಿಟ್ಟು ಘೋಷಣೆ ಕೂಗಿದರು. ರಾಮ ಮಂದಿರ ದೇಣಿಗೆ ಕಳ್ಳತ ಪ್ರಕರಣವನ್ನು ಚರ್ಚೆ ನಡೆಸುವಂತೆ ಒತ್ತಾಯಿಸಿ ಗದ್ದಲ ಸೃಷ್ಟಿಸಿದರು. ಪ್ರಶ್ನೋತ್ತರ ಅವಧಿಯನ್ನು ಮುಂದುವರಿಸಲು ಸ್ಪೀಕರ್ ಓಂ ಬಿರ್ಲಾ ಮನವಿ ಮಾಡಿದರೂ ಪ್ರತಿಪಕ್ಷ ಸದಸ್ಯರ ಗದ್ದಲ ಮುಂದುವರಿದ ಹಿನ್ನೆಲೆ ಸದನವನ್ನು ಮಧ್ಯಾಹ್ನಕ್ಕೆ ಮುಂದೂಡಲಾಯಿತು.

## ಜನರ ಮುಂದೆ ನಿಲ್ಲಿಸುತ್ತೇವೆ!

ಜನತೆ ಎಂದರ್ಥ ಎಂದು ವಿವರಿಸಿದರು. ಅಧಿಕಾರ ಕಳೆದುಕೊಳ್ಳುವ ಭಯದಿಂದ ಸರ್ಕಾರ ಈ ಮಸೂದೆಯನ್ನು ತಂದಿದೆ. ವಿದ್ಯಾರ್ಥಿಗಳ ಕುಂದುಕೊರತೆಗಳನ್ನು ಪರಿಹರಿಸುವುದಕ್ಕಿಂತ ಹೆಚ್ಚಾಗಿ, ಬೀದಿಗಿಳಿದು ಪ್ರತಿಭಟಿಸುತ್ತಿರುವ ಯುವಕರನ್ನು ಶಾಂತಗೊಳಿಸಲು ಮತ್ತು ತಮ್ಮ ಸ್ಥಾನವನ್ನು ಉಳಿಸಿಕೊಳ್ಳಲು ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ ಎಂದು ಖರ್ಗೆ ಆರೋಪಿಸಿದರು.

## ಜವಾಬ್ದಾರಿ ಮರೆತ ಜಿಲ್ಲಾ ಮಕ್ಕಳ ರಕ್ಷಣಾ ಘಟಕ

ಎಚ್.ಡಿ.ಕೋಟೆ: ತಾಲೂಕಿನಲ್ಲಿ ಇತ್ತೀಚೆಗೆ ಬೆಳಕಿಗೆ ಬಂದಿರುವ ಪೋಸ್ಕೋ ಪ್ರಕರಣಗಳಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಖುದ್ದು ಭೇಟಿ ನೀಡದೆ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ಕುಳಿತಲ್ಲಿಯೇ ಕಾರ್ಯನಿರ್ವಹಿಸುತ್ತಿರುವ ಆರೋಪ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದ್ದು, ಇದೀಗ ಚರ್ಚೆಗೆ ಗ್ರಾಸವಾಗುತ್ತಿದೆ.




ಅಪ್ರಾಪ್ತ ಬಾಲಕಿಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಮಾಹಿತಿ ದೊರೆತ ತಕ್ಷಣ ಜಿಲ್ಲಾ ಮಕ್ಕಳ ರಕ್ಷಣಾ ಘಟಕ (ಡಿಸ್ಟ್ರಿಕ್ಟ್ ಚೈಲ್ಡ್ ಪ್ರೊಟೆಕ್ಷನ್ ಯೂನಿಟ್)ಸ್ಥಳಕ್ಕೆ ಭೇಟಿ ನೀಡಿ, ಸಂತ್ರಸ್ತ ಮಗುವಿನ ಸುರಕ್ಷತೆ, ಸಮಾಲೋಚನೆ, ಪುನರ್ವಸತಿ ಹಾಗೂ ಕಾನೂನು ನೆರವಿನ ಕ್ರಮಗಳನ್ನು ಕೈಗೊಳ್ಳುವುದು ಕಡ್ಡಾಯವಾಗಿದೆ. ಆದರೆ, ಘಟನೆಯ ವಿಷಯ ತಿಳಿದ ನಂತರವೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿಲ್ಲ.

ಸೌಜನ್ಯಕ್ಕಾದರೂ ತಮ್ಮ ಸಿಬ್ಬಂದಿಗಳನ್ನೂ ಸ್ಥಳಕ್ಕೆ ಕಳುಹಿಸದೇ ಮಕ್ಕಳ ಬಗ್ಗೆ ಬೇಜವಾಬ್ದಾರಿ ತೋರಿದ್ದಾರೆ. ತಾಲೂಕಿನ ಗ್ರಾಮವೊಂದರಲ್ಲಿ ಅಪ್ರಾಪ್ತ ಬಾಲಕಿಯನ್ನು ಅಪ್ರಾಪ್ತ ಬಾಲಕನೊಬ್ಬ ಗರ್ಭಿಣಿ ಮಾಡಿದ್ದರೆ, ಮತ್ತೊಂದು ಗ್ರಾಮದಲ್ಲಿ ತಂದೆಯೇ ಮಗಳನ್ನು ಅತ್ಯಾಚಾರ ಮಾಡಿದ್ದ ಎನ್ನಲಾದ ಎರಡು ಪ್ರಕರಣಗಳು ಬೆಳಕಿಗೆ ಬಂದಿದ್ದವು.

ತಾಲೂಕಿನಲ್ಲಿ ಇತ್ತೀಚೆಗೆ ನಡೆದ ಈ ಎರಡು ಪ್ರಕರಣಗಳಲ್ಲಿ ಪೊಲೀಸರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಆರೋಗ್ಯ ಇಲಾಖೆ ತಮ್ಮ ವ್ಯಾಪ್ತಿಯಲ್ಲಿ ಕ್ರಮ ಕೈಗೊಂಡಿದ್ದರೂ, ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಪ್ರಮುಖ ಪಾತ್ರವಹಿಸಬೇಕಾದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ತ್ವರಿತ ಸ್ಪಂದನೆ ಕಾಣದಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಪೋಕ್ಸೊ ಕಾಯ್ದೆಯಡಿ ದಾಖಲಾಗುವ ಪ್ರಕರಣಗಳಲ್ಲಿ ಸಂತ್ರಸ್ತ ಮಕ್ಕಳಿಗೆ ಮಾನಸಿಕ ಧೈರ್ಯ ತುಂಬುವುದು, ಅಗತ್ಯ ಸಮಾಲೋಚನೆ, ಪುನರ್ವಸತಿ ಮತ್ತು ಪರಿಹಾರ ಯೋಜನೆಗಳ ಬಗ್ಗೆ ಮಾರ್ಗದರ್ಶನ ನೀಡುವುದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಮುಖ ಜವಾಬ್ದಾರಿಯಾಗಿದೆ. ಈ ಹಿನ್ನೆಲೆ, ಪ್ರಕರಣ ಬೆಳಕಿಗೆ ಬಂದ ಕೂಡಲೇ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಅಗತ್ಯ ಕ್ರಮ ಕೈಗೊಳ್ಳಬೇಕಾಗಿತ್ತು ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

### ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಸಾನ್ನಿಧ್ಯ

## ಅಪೋಲೊ ಬಿಜಿಎಸ್ ಆಸ್ಪತ್ರೆ ರಜತ ಮಹೋತ್ಸವ



ಮೈಸೂರು: ಆರೋಗ್ಯ ಸೇವೆ, ಮಾನವೀಯ ಕಾಳಜಿ ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ನವೀನ ಮಾದರಿಯ ಸೇವೆ ನೀಡುವ ಮೂಲಕ 25 ವರ್ಷ ಪೂರೈಸಿದ ಮೈಸೂರಿನ ಅಪೋಲೊ ಬಿಜಿಎಸ್ ಆಸ್ಪತ್ರೆಯು ರಜತಮಹೋತ್ಸವ ಆಚರಿಸಿಕೊಂಡಿತು.

2001ರಲ್ಲಿ ಆಸ್ಪತ್ರೆ ಆರಂಭವಾದಾಗಿನಿಂದಲೂ ವಿಶ್ವದರ್ಜೆಯ ವೈದ್ಯಕೀಯ ಸೇವೆ ಹಾಗೂ ಸಮುದಾಯಕ್ಕೆ ಸಮರ್ಪಣಾ ಮನೋಭಾವದಿಂದ ಸೇವೆ ಸಲ್ಲಿಸಿರುವ ಆಸ್ಪತ್ರೆಯ ಅಚಲ ಬದ್ಧತೆಗೆ ಈ ಸಂಭ್ರಮಾಚರಣೆ ಸಾಕ್ಷಿಯಾಗಿದೆ. ಮೈಸೂರಿನ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಶಾಖಾ ಮಠದ ಪೀಠಾಧ್ಯಕ್ಷ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಸಾನ್ನಿಧ್ಯದಲ್ಲಿ ನಡೆದ ಬೆಳ್ಳಿಹಬ್ಬದ ಕಾರ್ಯಕ್ರಮವನ್ನು ಸಾಂಪ್ರದಾಯಿಕವಾಗಿ ದೀಪ ಬೆಳಗಿಸುವ ಮೂಲಕ ನೀಡಲಾಯಿತು. ಅಪೋಲೊ ಆಸ್ಪತ್ರೆ ಹಿರಿಯ ಉಪಾಧ್ಯಕ್ಷ ರೆಸ್ಟ್ ಆಫ್ ಕರ್ನಾಟಕ ಎನ್.ಜಿ. ಭರತೀಶ ರೆಡ್ಡಿ, ಅಪೋಲೊ ಹಾರ್ಟ್ ಇನ್‌ಸ್ಟಿಟ್ಯೂಟ್ಸ್‌ನ ಮುಖ್ಯಸ್ಥ ಹಾಗೂ ಮುಖ್ಯ ಹೃದ್ರೋಗ ತಜ್ಞ ಡಾ.ಅರುಣ್ ಶ್ರೀನಿವಾಸ್, ಅಪೋಲೋ ಇನ್‌ಸ್ಟಿಟ್ಯೂಟ್ಸ್ ಆಫ್ ನ್ಯೂರೋಸೈನ್ಸ್‌ನ ಮುಖ್ಯಸ್ಥ ಹಾಗೂ ಮುಖ್ಯ ನರರೋಗ ತಜ್ಞ ಡಾ.ಸೋಮನಾಥ ವಾಸುದೇವ್, ಪ್ರಸೂತಿ, ಸ್ತ್ರೀರೋಗ, ಗೈನಕಾಲಜಿಕಲ್ ರೋಬೋಟಿಕ್ ಶಸ್ತ್ರಚಿಕಿತ್ಸೆ ವಿಭಾಗದ ಕನ್ಸಲ್ಟೆಂಟ್ ಡಾ.ಎಲ್.ವಿ. ವನಿತಾ, ಮೈಸೂರಿನ ಅಪೋಲೋ ಬಿಜಿಎಸ್ ಆಸ್ಪತ್ರೆಯ ಹಿರಿಯ ಕನ್ಸಲ್ಟೆಂಟ್?ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞೆ ಡಾ.ಸೌಭಾಗ್ಯಲಕ್ಷ್ಮಿ ಪಾಲ್ಗೊಂಡಿದ್ದರು.

ನಂತರ ಮಾತನಾಡಿದ ಮೈಸೂರಿನ ಅಪೋಲೊ ಬಿಜಿಎಸ್ ಆಸ್ಪತ್ರೆಯ ಹಿರಿಯ ಕನ್ಸಲ್ಟೆಂಟ್?ಜನರಲ್ ಮೆಡಿಸಿನ್ ಡಾ. ಜಾವೀದ್ ನಯೀಮ್, ಆಸ್ಪತ್ರೆಯ ಪ್ರಮುಖ ಮೈಲುಗಲ್ಲುಗಳು, ವೈದ್ಯಕೀಯ ಕ್ಷೇತ್ರದಲ್ಲಿ ಮಾಡಿದ ಸಾಧನೆಗಳು ಹಾಗೂ ಭವಿಷ್ಯದ ಯೋಜನೆಗಳ ಕುರಿತು ವಿವರಿಸಿದರು. ಆಸ್ಪತ್ರೆಯ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಿದ ವೈದ್ಯರು, ಶುಶ್ರೂಷಕರು, ಸಿಬ್ಬಂದಿ ಹಾಗೂ ಸಹಾಯಕ ಸಿಬ್ಬಂದಿಯ ಸಮರ್ಪಣಾ ಸೇವೆಯನ್ನು ಅವರು ಈ ಸಂದರ್ಭದಲ್ಲಿ ಸ್ಮರಿಸಿದರು.

ಮಾಜಿ ಮೇಯರ್ ಶಿವಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಬಾಲು, ಪತ್ರಕರ್ತ ಕೆ.ಜಿ.ವಿಕ್ರಂ ಮುತ್ತಣ್ಣ, ಎಂಎಂಸಿ ಮುಖ್ಯಸ್ಥ ಡಾ.ರಂಗನಾಥಯ್ಯ, ಮಧುಮೇಹ ತಜ್ಞ ಡಾ.ಲಕ್ಷ್ಮಿನಾರಾಯಣ್, ವಿವೇಕಾನಂದ ಮೆಮೊರಿಯಲ್ ಆಸ್ಪತ್ರೆ ನಿರ್ದೇಶಕ ಡಾ.ಎಸ್. ಎಂ.ರವೀಂದ್ರನಾಥ್ ಠಾಕೂರ್ ಸೇರಿ ಅನೇಕರನ್ನು ಇದೇ ವೇಳೆ ಸನ್ಮಾನಿಸಲಾಯಿತು.

# ಬರ ನಿರ್ವಹಣೆಯಲ್ಲಿ ರಾಜ್ಯಸರ್ಕಾರ ವಿಫಲ

## ರಾಜ್ಯದಲ್ಲಿ ಘೋರ ಸ್ಥಿತಿಯಲ್ಲಿ ಸರ್ಕಾರ ಸೋನಿಯಾ ಗಾಂಧಿ ಮನೆ ಬಾಗಿಲು ಕಾಯುತ್ತಿದೆ: ಛಲವಾದಿ ನಾರಾಯಣಸ್ವಾಮಿ



ಚಾಮರಾಜನಗರ: ರಾಜ್ಯದಲ್ಲಿ ಭೀಕರ ಬರಗಾಲ ಆವರಿಸಿದ್ದು ಜಲಮೂಲಗಳೇ ಸಂಪೂರ್ಣವಾಗಿ ಬತ್ತಿಹೋಗಿವೆ. ಆದರೂ ರಾಜ್ಯ ಸರ್ಕಾರ ಬರ ನಿರ್ವಹಣೆ ಮಾಡುವಲ್ಲಿ ಸಂಪೂರ್ಣ ವಿಫಲವಾಗಿದ್ದು, ಆಡಳಿತವನ್ನು ಬದಿಗೊತ್ತಿ ದೆಹಲಿಯಲ್ಲಿ ಸೋನಿಯಾ ಗಾಂಧಿ ಅವರ ಮನೆ ಬಾಗಿಲು ಕಾಯುತ್ತಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ತೀವ್ರವಾಗಿ ವಾಗ್ದಾಳಿ ನಡೆಸಿದ್ದಾರೆ.

ನಗರದ ಪ್ರವಾಸಿ ಮಂದಿರದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದರೂ ಸರ್ಕಾರ ಬರ ಅಧ್ಯಯನ ನಡೆಸದೆ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು.

**ಕನಕಪುರ–ಮಂಡ್ಯದಲ್ಲಿ ಭೀಕರ ಬರ**

ತಮ್ಮ ಬರ ಅಧ್ಯಯನ ತಂಡವು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಕ್ಷೇತ್ರವಾದ ಕನಕಪುರಕ್ಕೆ ಭೇಟಿ ನೀಡಿದ್ದಾಗ ಅಲ್ಲಿನ ಎಲ್ಲ ಕೆರೆಗಳು, ಬೋರ್ವೆಲ್ಲಗಳು ಬತ್ತಿ ಹೋಗಿರುವುದು ಕಂಡುಬಂದಿದೆ. ಅಂತರ್ಜಲ ಮಟ್ಟ ಕುಸಿದ ಕಾರಣ ಕಬ್ಬು, ಅಡಿಕೆ, ರೇಷ್ಮೆ ಹಾಗೂ ಕಟಾವಿನ ಹಂತದಲ್ಲಿದ್ದ ಬಾಳೆ ಬೆಳೆಗಳು ಸಂಪೂರ್ಣವಾಗಿ ಒಣಗಿ ಹೋಗಿವೆ. ಆದರೆ ಅಲ್ಲಿ ರಿಯಲ್ ಎಸ್ಟೇಟ್ ಮತ್ತು ಅಕ್ರಮ ಗಣಿಗಾರಿಕೆ ದಂಧೆ ಮಾತ್ರ ಜೋರಾಗಿ ನಡೆಯುತ್ತಿದೆ ಎಂದು ದೂರಿದರು. ಇನ್ನು ಮಂಡ್ಯ ಜಿಲ್ಲೆಯ ಮಳವಳ್ಳಿಗೆ ಭೇಟಿ ನೀಡಿದಾಗಲೂ ಇದೇ ಪರಿಸ್ಥಿತಿ ಕಂಡುಬಂದಿದ್ದು, ನೀರಿನ ಅಭಾವದಿಂದಾಗಿ ಕಳೆದ 145 ವರ್ಷಗಳ ಇತಿಹಾಸದಲ್ಲೇ ಮೊದಲ ಬಾರಿಗೆ ಶಿಂಷಾ ವಿದ್ಯುತ್ ಉತ್ಪಾದನಾ ಘಟಕ ಸ್ಥಗಿತಗೊಂಡಿದೆ. ಇದು ರಾಜ್ಯದ ಬರ ಪರಿಸ್ಥಿತಿಯ ಗಂಭೀರತೆಗೆ ಹಿಡಿದ ಕನ್ನಡಿಯಾಗಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಶಾಸಕ ಶ್ರೀವತ್ಸ, ವಿಧಾನ ಪರಿಷತ್ ಸದಸ್ಯರಾದ ಗೋಪಿನಾಥ್ ರೆಡ್ಡಿ, ಕೇಶವ ಪ್ರಸಾದ್, ರಘುಕೌಟಿಲ್ಯ, ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಸೇರಿದಂತೆ ಹಲವು ಬಿಜೆಪಿ ನಾಯಕರು, ಪ್ರಮುಖರು ಉಪಸ್ಥಿತರಿದ್ದರು.

### ತಮಿಳುನಾಡಿಗೆ ನೀರು ಹರಿಸಲು ವಿರೋಧ

**ಇತ್ತೀಚೆಗೆ ವಿಪಕ್ಷ ನಾಯಕ ಆರ್.ಅಶೋಕ್, ಶಾಸಕ ಶ್ರೀವತ್ಸ ಹಾಗೂ ತಾವು ಕೆಆರ್‌ಎಸ್ ಜಲಾಶಯಕ್ಕೆ ಭೇಟಿ ನೀಡಿದ್ದಾಗ ಅಧಿಕಾರಿಗಳು ಕೇವಲ 10 ಟಿಎಂಸಿ ನೀರಿರುವುದಾಗಿ ತಿಳಿಸಿದ್ದರು. ಅದರಲ್ಲಿ 6 ಟಿಎಂಸಿ ನೀರು ಕೇವಲ ಮುಂದಿನ ಎರಡು ತಿಂಗಳ ಕುಡಿ ಯುವ ನೀರಿಗೆ ಮಾತ್ರ ಸಾಲುತ್ತದೆ. ಈಗ ಕೆಆರ್‌ಎಸ್‌ನಲ್ಲಿ ಕೇವಲ 3 ಟಿಎಂಸಿ ನೀರು ಮಾತ್ರ ಉಳಿದಿದ್ದು, ರಾಜ್ಯದ ರೈತರ ಕಬ್ಬು ಮತ್ತು ಜೋಳದ ಬೆಳೆಗಳಿಗೆ ನೀರಿಲ್ಲದೆ ನಷ್ಟ ಉಂಟಾಗಿದೆ. ಇಂತಹ ಸಂಕಷ್ಟದ ಪರಿಸ್ಥಿತಿ ಯಲ್ಲಿ ಕಾವೇರಿ ನ್ಯಾಯಾಧಿಕರಣವು ತಮಿಳುನಾಡಿಗೆ 3.5 ಟಿಎಂಸಿ ನೀರು ಬಿಡು ವಂತೆ ಆದೇಶಿಸಿದೆ. ಆದರೆ ಯಾವುದೇ ಕಾರ ಣಕ್ಕೂ ರಾಜ್ಯ ಸರ್ಕಾರ ತಮಿಳುನಾಡಿಗೆ ನೀರು ಹರಿಸಬಾರದು ಎಂದು ಕಟ್ಟುನಿಟ್ಟಾಗಿ ಆಗ್ರಹಿಸಿದರು.**

### ವಿಪಕ್ಷದಿಂದಲೇ ಬರ ವರದಿ ಸಲ್ಲಿಕೆ

**ರಾಜ್ಯ ಸರ್ಕಾರವೇ ತಕ್ಷಣವೇ ಬರ ಅಧ್ಯಯನ ನಡೆಸಿ, ಬೆಳೆ ನಷ್ಟದ ಪಟ್ಟಿ ಮಾಡಿ ಪೀಡಿತ ತಾಲೂಕು ಮತ್ತು ಜಿಲ್ಲೆಗಳನ್ನು ಅಧಿಕೃತವಾಗಿ ಘೋಷಣೆ ಮಾಡಬೇಕಿತ್ತು. ಆದರೆ ಸರ್ಕಾರ ಈ ಜವಾಬ್ದಾರಿಯಿಂದ ನುಣುಚಿಕೊಂಡಿದೆ. ಹೀಗಾಗಿ ವಿರೋಧ ಪಕ್ಷವೇ ಮುಂದಾಳತ್ವ ವಹಿಸಿ ರಾಜ್ಯದಾದ್ಯಂತ ಬರ ಅಧ್ಯಯನ ನಡೆಸಿದ್ದು, ಶೀಘ್ರದಲ್ಲೇ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ ಸಮಗ್ರ ವರದಿ ಸಲ್ಲಿಸಿ ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಪರಿಹಾರ ಕೊಡಿಸುವ ಕೆಲಸ ಮಾಡಲಿದೆ ಎಂದರು.**

## ವಿವಿಧ ಗ್ರಾಮಗಳಿಗೆ ಭೇಟಿ ನೀಡಿದ ಬಿಜೆಪಿ ಬರ ಅಧ್ಯಯನ ಸಮಿತಿಗೆ ಒಣಗಿದ ಜೋಳ, ಹತ್ತಿ, ಬಾಳೆ ದರ್ಶನ

**ಚಾಮರಾಜನಗರ,** ತಾಲೂಕಿನ ವಿವಿಧ ಗ್ರಾಮಗಳಿಗೆ ಬಿಜೆಪಿ ಬರ ಅಧ್ಯಯನ ಸಮಿತಿಯ ಸದಸ್ಯರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತಾಲೂಕಿನ ಬೇಡರಪುರ, ಹೆಗ್ಗೋಠಾರ, ಹರವೆ, ಮೂಡ್ನಾಕೂಡು, ಕಾವುದವಾಡಿ ಸೇರಿದಂತೆ ಇನ್ನಿತರ ಗ್ರಾಮಗಳಿಗೆ ಭೇಟಿ ನೀಡಿದ ಸಮಿತಿ ಅಲ್ಲಿ ರೈತರು ಬೆಳೆದಿದ್ದ ಜೋಳ, ಹತ್ತಿ, ಬಾಳೆ ಸೇರಿದಂತೆ ಇನ್ನಿತರ ಫಸಲನ್ನು ವೀಕ್ಷಣೆ ಮಾಡಿದರು.

ಹೆಗ್ಗೋಠಾರ ಗ್ರಾಮದಲ್ಲಿ ಸ್ವಾಮಿ ಎಂಬುವವರು ಬೆಳೆದಿದ್ದ ಹತ್ತಿ ಹಾಗೂ ಜೋಳ ಬೆಳೆಯು ಒಣಗಿ ನಿಂತಿದ್ದನ್ನು ನೋಡಿದ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು, ಜೋಳ ಫಸಲಿಗೆ ಎಷ್ಟು ಖರ್ಚು ಮಾಡಿದ್ದೀರಾ, ನಿಮಗೆ ಇದರಿಂದ ಎಷ್ಟು ನಷ್ಟವಾಗಿದೆ ಎಂದು ಕೇಳಿದರು.

ಇದಕ್ಕೆ ಉತ್ತರಿಸಿದ ರೈತ ಸ್ವಾಮಿ ಅವರು, ಜೋಳ ಫಸಲನ್ನು ಬೆಳೆಯಲು 25 ಸಾವಿರ ರೂ. ಖರ್ಚು ಮಾಡಿದ್ದೆ. ಸಮರ್ಪಕವಾಗಿ ಮಳೆ ಬಾರದೇ ಹಾಗೂ ಕೆರೆಗಳಿಗೆ ನೀರು ತುಂಬಿಸದ ಕಾರಣ ಸಾಲದ ಸುಳಿಯಲ್ಲಿ ಸಿಲುಕುವಂತಾಗಿದೆ ಎಂದರು.

ಆದ್ದರಿಂದ ಸೂಕ್ತವಾದ ಪರಿಹಾರವನ್ನು ನೀಡಲು ಸರ್ಕಾರಕ್ಕೆ ಚಾಟಿ ಬೀಸಬೇಕು ಎಂದು ನಾರಾಯಣಸ್ವಾಮಿ ಅವರ ಬಳಿ ಮನವಿ ಮಾಡಿದರು. ಇದೇ ವೇಳೆ ಸಮೀಪದಲ್ಲೇ ಇದ್ದ ಬಾಳೆ ಫಸಲನ್ನು ನೋಡಿದರು. ನಂತರ ವಿವಿಧ ಗ್ರಾಮಗಳಿಗೆ ತೆರಳಿ ಜೋಳ ಸೇರಿದಂತೆ ಇನ್ನಿತರ ಫಸಲನ್ನು ವೀಕ್ಷಣೆ ಮಾಡಿದರು.

ಬರ ಸಮಿತಿಯ ಸದಸ್ಯರಾದ ಎನ್.ಮಹೇಶ್, ಶಾಸಕ ಶ್ರೀವತ್ಸ, ವಿಧಾನ ಪರಿಷತ್ ಸದಸ್ಯರಾದ ಗೋಪಿನಾಥ ರೆಡ್ಡಿ, ಕೇಶವಪ್ರಸಾದ್, ರಘು ಕೌಟಿಲ್ಯ, ಸಂಯೋಜಕ ಫಣೀಶ್, ಜಿಲ್ಲಾಧ್ಯಕ್ಷ ನಿರಂಜನ್ ಕುಮಾರ್, ವಿಧಾನಪರಿಷತ್ ಮಾಜಿ ಸದಸ್ಯ ಪ್ರೊ. ಕೆ.ಆರ್.ಮಲ್ಲಿಕಾರ್ಜುನಪ್ಪ, ಕೇಂದ್ರ ಬರ ಪರಿಹಾರ ಸಮಿತಿ ಸದಸ್ಯ ಎಂ. ರಾಮಚಂದ್ರ, ಜಿ.ಪಂ.ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಮಾಜಿ ಸದಸ್ಯ ಬಾಲರಾಜು, ಎಸ್ ಟಿ ಮೋರ್ಚಾದ ರಾಜ್ಯ ಕಾರ್ಯದರ್ಶಿ ಜಯಸುಂದರ್, ಸಾಹಿತಿ ಕೋಡಿಉಗನೆ ಮಂಜು, ಅರಕಲ ವಾಡಿ ನಾಗೇಂದ್ರ, ರಾಮಸಮುದ್ರ ಶಿವಣ್ಣ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೃಷಭೇಂದ್ರಪ್ಪ, ಮೂಡ್ನಾಕೂಡು ಪ್ರಕಾಶ್,ಜಿಲ್ಲಾ ವಕ್ತಾರ ಮನೋಜ್ ಪಟೇಲ್ ಹಾಜರಿದ್ದರು..



# ಗ್ರಾಮಗಳಿಗೆ ಕುಡಿಯುವ ನೀರಿಗೆ ಅಭಾವ ಬಾರದಂತೆ ಎಚ್ಚರ ವಹಿಸಿ: ಶಾಸಕ ಕೆ.ವೆಂಕಟೇಶ್

## ತಾಲೂಕಿನ ಹಲವು ಗ್ರಾಮಗಳಿಗೆ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ

ಪಿರಿಯಾಪಟ್ಟಣ : ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬರುವ ಚಿಕ್ಕ ಪುಟ್ಟ ಸಮಸ್ಯೆಗಳಿಗೆ ಹಾಗೂ ಗ್ರಾಮಗಳಿಗೆ ಕುಡಿಯುವ ನೀರಿಗೆ ಅಭಾವ ಬಾರದಂತೆ ಎಚ್ಚರ ವಹಿಸುವುದು ಪಿಡಿಒಗಳದ್ದೇ ಜವಾಬ್ದಾರಿ ಎಂದು ಶಾಸಕ ಕೆ ವೆಂಕಟೇಶ್ ಸೂಚನೆ ನೀಡಿದರು.

ತಾಲೂಕಿನ ಹಲವು ಗ್ರಾಮಗಳಿಗೆ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು ಹಬಟೂರು ಗ್ರಾಮದ ಜನರಿಗೆ ಕುಡಿಯುವ ನೀರು ಅಗತ್ಯವಾಗಿ ಪೂರೈಕೆ ಮಾಡುವುದು ಪಂಚಾಯತಿ ಅಧಿಕಾರಿಗಳ ಕರ್ತವ್ಯವಾಗಿದ್ದು,ಈಗಾಗಲೇ ಬಳಕೆಯಲ್ಲಿರುವ ಕೊಳವೆ ಬಾವಿಗಳಲ್ಲಿ ಸಾಕಷ್ಟು ನೀರು ಪೂರೈಕೆ ಮಾಡಲು ಸಾಧ್ಯವಾಗದಿದ್ದರೆ,ಪರ್ಯಾಯವಾಗಿ ಹೊಸದಾಗಿ ಬೋರ್ ಕೊರೆಸಿ, ಬೋರ್ ಕೊರೆಸುವ ಮುನ್ನ ಸರಿಯಾದ ಜಾಗ ಗುರುತಿಸಿ ಕೊರೆಸಿ ನೀರು ಪೂರೈಸುವುದು ನಿಮ್ಮದೇ ಜವಾಬ್ದಾರಿಯಾಗಿದೆ ಎಂದರು.



ಈ ಸಂದರ್ಭದಲ್ಲಿ ತಾಲೋಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಕಾಂಗ್ರೆಸ್ ಮುಖಂಡ ಬಿ ಜೆ ವಿಜಯಕುಮಾರ್, ಮಾಜಿ ತಾ.ಪಂ. ಅಧ್ಯಕ್ಷೆ ನಿರೂಪ ರಾಜೇಶ್,ಬ್ಲಾಕ್ ಕ್ಯಾಂಗ್ರೆಸ್ ಅಧ್ಯಕ್ಷ ರೆಹಮಾತ್ ಜಾನ್ ಬಾಬು, ಮುಖಂಡ ಭುಜಂಗ, ವಿವಿಧ ಇಲಾಖೆ ಅಧಿಕಾರಿಗಳಾದ ಇ ಒ ಸುನೀಲ್ ಕುಮಾರ್, ಸೋಮಯ್ಯ, ಪದ್ಮಶ್ರೀ,ರವಿ ಪ್ರಸನ್ನ, ಚಂದ್ರಶೇಖರ್,ಲವ,ವಿಜಯ್ ಕುಮಾರ್ ಸುಗಂಧರಾಜ, ಚಂದ್ರೇಗೌಡ,ಪ್ರಶಾಂತ್,ಹುಣಸೆ ಕುಪ್ಪೆ ಗ್ರಾಮದ ಗ್ರಾಮದ ಮುಖಂಡರು ಗಿರೀಶ್,ತಂಬಾಕು ಬೆಳೆ ಸಮಿತಿ ಮಾಜಿ ಅಧ್ಯಕ್ಷ ಚಂದ್ರು, ರಮೇಶ್ ಚಂದ್ರೇಗೌಡ, ಸಾಲುಕೊಪ್ಪಲು ಪುಟ್ಟರಾಜು, ರಾಮಚಂದ್ರು, ನಜೀರ್,ಸೇರಿದಂತೆ ಇತರಿರದ್ದರು.

### ಗ್ರಾಮಸ್ಥರ ಮನವಿ

**ಹಬಟೂರು ಗ್ರಾಮದ ರೂಪಿಣಿ ಪ್ರತಾಪ್ ರ ಮನೆಯ ತಾರಸಿ ಮೇಲೆ ಹಾದುಹೋಗಿರುವ ವಿದ್ಯುತ್ ಲೈನ್ ನ್ನು ತೆರವುಗೊಳಿಸಿ ಸುರಕ್ಷತೆಗಾಗಿ ಬದಲಿ ಲೈನ್ ಎಳೆದುಕೊಡಿ ಎಂದು ಸೆಸ್ಕ್ ಅಧಿಕಾರಿಗಳಿಗೆ ಎಷ್ಟೋ ಬಾರಿ ಮನವಿ ಮಾಡಿದರೂ ಸಹ ಇತ್ತ ಕಡೇ ಗಮನ ಹರಿಸುತ್ತಿಲ್ಲ ಎಂದು ಶಾಸಕರ ಮುಂದೆ ಗ್ರಾಮಸ್ಥರು ತಮ್ಮ ನೋವು ತೋಡಿಕೊಂಡರು. ಇದಕ್ಕೆ ಸಮಜಾಯಿಸಿ ಉತ್ತರಿಸಿದ ಸೆಸ್ಕ್ ಎಇಇ ಮಲ್ಲಿಕಾರ್ಜುನ್ ಉತ್ತರಿಸಿ ಈ ಮೊದಲೇ ಇದ್ದ ಲೈನ್ ಕೆಳಗಡೆ ಮನೆ ನಿರ್ಮಾಣ ಮಾಡಿ ಸಮಸ್ಯೆಯನ್ನು ಅವರೇ ಮಾಡಿಕೊಂಡಿದ್ದಾರೆ ಹೊರೆತು ಮನೆ ಕಟ್ಟಿದ ಬಳಿಕ ಮನೆ ಮೇಲೆ ಲೈನ್ ಹಾದುಹೋಗುವಂತೆ ನಾವು ಮಾಡಿಲ್ಲ ಎಂದರು.ಅಲ್ಲದೆ ಆದಷ್ಟು ಬೇಗ ಈಗಿರುವ ಹಳೇ ವಿದ್ಯುತ್ ಲೈನ್ ಬದಲಾಯಿಸಿ ಹೊಸ ಲೈನ್ ನ್ನು ಶೀಘ್ರದಲ್ಲೇ ಕೈಗೊಳ್ಳುತ್ತೇವೆ ಎಂದರು.**

### ಕೋಳಿ ತ್ಯಾಜ್ಯ ತೆರವುಗೊಳಿಸಲು ಇಓ ಸುನಿಲ್ ಕುಮಾರ್‌ಗೆ ಸೂಚನೆ

**ಪುರಸಭೆ ವ್ಯಾಪ್ತಿ ಹಾಗೂ ಅಂಕನಹಳ್ಳಿ ಗ್ರಾಮದ ಕೋಳಿ ಅಂಗಡಿಗಳ ತ್ಯಾಜ್ಯವನ್ನು ಗೋಣಿಕೊಪ್ಪ ಮುಖ್ಯ ರಸ್ತೆಯ ಬದಿಗಳಲ್ಲಿ,ಸುರಿಯುತ್ತಿದ್ದಾರೆ. ಗಬ್ಬೆದ್ದು ನಾರುವ ವಾಸನೆಗೆ ಸಂಚಾರದ ವೇಳೆ ಸಾರ್ವಜನಿಕರಿಗೆ ಕಿರಿಕಿರಿ ಉಂಟಾಗುತ್ತಿದ್ದು,ಬ್ಲಾಕ್ ಸ್ಪಾಟ್ ಗುರುತಿಸಿ ಅಲ್ಲಲ್ಲಿ ಸಿ ಸಿ ಕ್ಯಾಮರಾ ಅಳವಡಿಸಿ ದಾರಿಹೋಕರು ಅಲ್ಲಲ್ಲಿ ತ್ಯಾಜ್ಯ ಎಸೆಯುವುದನ್ನು ತಪ್ಪಿಸಿ ಎಂದು ಗ್ರಾಮಸ್ಥರು ದೂರಿದರು.ಈ ಬಗ್ಗೆ ಶೀಘ್ರ ಕ್ರಮ ಕೈಗೊಳ್ಳುವಂತೆ ತಾ.ಪಂ.ಇ ಒ ಸುನಿಲ್ ಕುಮಾರ್ ಗೆ ಶಾಸಕ ವೆಂಕಟೇಶ್ ಸೂಚಿಸಿದರು.**

### ನಿರ್ಲಕ್ಷ್ಯ ತೋರಿದರೆ ಒಪ್ಪಂದ ರದ್ದುಗೊಳಿಸಿ

**ಒಂದು ವೇಳೆ ಬೋರ್ವೆಲ್ ಕೊರೆಸುವ ಸಮಯದಲ್ಲಿ ಗುತ್ತಿಗೆದಾರರು ವಿಳಂಬ ದೋರಣೆ ಮಾಡುತ್ತಿದ್ದರೆ ತಕ್ಷಣವೇ ಬೇರೆ ಗುತ್ತಿಗೆದಾರರೊಂದಿಗೆ ಒಪ್ಪಂದ ಮಾಡಿಕೊಂಡು ಕೂಡಲೇ ಕೆಲಸ ಪ್ರಾರಂಭಿಸಿ ಪೂರ್ಣಗೊಳಿಸಿ ಎಂದು ಪಿಡಿಒ ಮಹೇಶ್ ರವರಿಗೆ ಸೂಚಿಸಿದರು.**

### ಅಧಿಕಾರಿಗಳ ಧೋರಣೆಗೆ ಶಾಸಕರ ತರಾಟೆ

**ಅಬ್ಬಳತಿ ಗ್ರಾಮದ ಕೆಲವು ಜಮೀನುಗಳ ಸಾಗುವಳಿಗಾಗಿ ಅರ್ಜಿ ಹಾಕಿ 5 ವರ್ಷಗಳೇ ಕಳೆದಿವೆ ಅಧಿಕಾರಿಗಳು ಮಾತ್ರ ನಮ್ಮನ್ನು ಸತಾಯಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದರು.ಇದಕ್ಕೆ ಉತ್ತರಿಸಿದ ಆರ್ ಐ ಪಾಂಡು ಇವು ರಾಜರ ಕಾಲದ ಭೂದಾನ ಜಮೀನುಗಳೆಂದು ಉಲ್ಲೆಖಿಸಿದ್ದು ಸಾಗುವಳಿ ನೀಡಲು ಸಾಧ್ಯವಾಗುತ್ತಿಲ್ಲ ಎಂದು ಸ್ಪಷ್ಟನೆ ನೀಡಿದರು.ಇದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಶಾಸಕ ಕೆ ವೆಂಕಟೇಶ್ ಹಿಂದೆ ನನ್ನ ಆಡಳಿತ ಅವಧಿಯಲ್ಲಿ ಅನುಭವಿಗಳಿಗೆ ಭೂದಾನ ಜಮೀನುಗಳಿಗೆ ಸಾಗುವಳಿ ನೀಡಲಾಗಿತ್ತು.ಈಚೆಗೆ ಸಾಗುವಳಿ ನೀಡಲು ಯಾವುದೇ ತಾಂತ್ರಿಕ ದೋಷಗಳಿಲ್ಲ.ಸುಖಾಸುಮ್ಮನೆ ಕಚೇರಿಯಲ್ಲಿ ಸಾಗುವಳಿ ಫೈಲುಗಳನ್ನು ಬಾಕಿ ಇಟ್ಟುಕೊಂಡು ರೈತರನ್ನೇಕೆ ಅಲೆಸುತ್ತಿದ್ದೀರಿ. ಮುಂದಿನ ಕಮಿಟಿ ಸಭೆಯಲ್ಲಿ ಎಲ್ಲಾ ಫೈಲುಗಳನ್ನು ಕಡ್ಡಾಯವಾಗಿ ಮಂಡಿಸಿ,ಅಪ್ಲೋಡ್ ಮಾಡಿ ಎಂದು ತಾಕೀತು ಮಾಡಿದರು.**

# ಬಾಂಧವ್ಯ ಬೆಸೆಯುತ್ತಿರುವ ಲಯನ್ಸ್




ಪಿರಿಯಾಪಟ್ಟಣ: ಲಯನ್ಸ್ ಸಂಸ್ಥೆಯು ಸಮುದಾಯ ಸೇವೆಯ ಜೊತೆಗೆ ಪರಸ್ಪರ ಬಾಂಧವ್ಯ ಬೆಸೆ ಯುವ ಅದ್ಭುತ ಕಾರ್ಯವನ್ನು ಸಹ ಮಾಡುತ್ತಿದೆ ಎಂದು ಲಯನ್ಸ್ ಸಂಸ್ಥೆಯ ಜಿಲ್ಲಾ ಮುಖ್ಯ ಕೋಆರ್ಡಿನೇಟರ್ ಟಿವಿ ಅನಿಲ್ ಕುಮಾರ್ ತಿಳಿಸಿದರು.

ಪಟ್ಟಣದ ಮಂಜುನಾಥ ಸಮುದಾಯ ಭವನದಲ್ಲಿ ಬುಧವಾರ ಪಿರಿಯಾಪಟ್ಟಣ ಲೈನ್ಸ್ ಕ್ಲಬ್ ಸಂಸ್ಥೆ ವತಿಯಿಂದ ಏರ್ಪಡಿಸಿದ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದರು. ಉತ್ತಮ ಸೇವ ಕಾರ್ಯ ಮಾಡುವುದರೊಂದಿಗೆ, ನಾವು ಸಮಸ್ಯೆಗೆ ಸಿಲುಕಿದಾಗ ಪ್ರಪಂಚದಾತ್ಯಂತ ಇರುವ ಲಯನ್ಸ್ ಕ್ಲಬ್ ನ ಸದಸ್ಯರ ಸಂಪರ್ಕದಿಂದ ನಮಗೆ ನೆರವು ದೊರೆಯುತ್ತದೆ ಎಂಬುದು ಅನೇಕ ಉದಾಹರಣೆಗಳಿಂದ ನಮಗೆ ತಿಳಿದು ಬರುತ್ತಿದೆ ಎಂದರು.

ಜೋನಲ್ ಅಧ್ಯಕ್ಷ ಪುಟ್ಟಪ್ಪ ಮಾತನಾಡಿ ಪದಗ್ರಹಣ ಮೂಲಕ ಅಧಿಕಾರ ಸ್ವೀಕರಿಸುವುದು ಕೇವಲ ಬ್ಯಾಡ್ಜ್ ಮತ್ತು ಹುದ್ದೆಗಾಗಿ ಅಲ್ಲ ಉತ್ತಮ ಸಮಾಜ ಸೇವೆ ಮಾಡುವ ಮೂಲಕ ಕ್ಲಬ್ನ ಕೀರ್ತಿ ಹೆಚ್ಚಿಸಬೇಕು ಎಂದು ಸಲಹೆ ನೀಡಿದರು. ಕ್ಲಬ್ ವತಿಯಿಂದ ಬಡ ಕುಟುಂಬಕ್ಕೆ ವಿದ್ಯುತ್ ಸಂಪರ್ಕ ಪಡೆಯಲು ? 15 ಸಾವಿರ ದೇಣಿಗೆ ನೀಡಲಾಯಿತು. ಜಿಲ್ಲಾ ಪ್ರಾಂತ್ಯಾಧ್ಯಕ್ಷ ಬಾಲಕೃಷ್ಣ, ನೂತನಣ ಅಧ್ಯಕ್ಷ ಪಿ. ಕೆ.ವಿಜಯಕುಮಾರ್, ನೂತನ ಕಾರ್ಯದರ್ಶಿ ಕೆ. ಎ. ಮಹದೇವಪ್ಪ ಮಾತನಾಡಿದರು. ನೂತನ ಪದಾಧಿಕಾರಿಗಳಾಗಿ ಸುಬ್ರಹ್ಮಣ್ಯ, ಮಂಜುನಾಥ್ ಸಿಂಗ್, ಪಿ.ಕೆ.ಕುಮಾರ್, ಆನಂದ್, ಸ್ವಾಮಿ,ನವನೀತ್, ದೊಡ್ಡೇಗೌಡ, ಲವಕುಮಾರ್ ಅಧಿಕಾರ ಸ್ವೀಕರಿಸಿದರು.

# ಅಣುಕು ಯಶಸ್ವಿ ಸ್ಪರ್ಧಾತ್ಮಕ ಪರೀಕ್ಷೆ




ಮೈಸೂರು: ಭಾನುವಾರ ಆ.2ರಂದು ರಾಜ್ಯಾದ್ಯಂತ ಸಿವಿಲ್ ಪೊಲೀಸ್ ಕಾನ್ಸ್ ಟೇಬಲ್ ನೇಮಕಾತಿಗಾಗಿ ಸರ್ಕಾರದಿಂದ ಲಿಖಿತ ಪರೀಕ್ಷೆ ನಡೆಸಲಾಗುತ್ತಿರುವ ಹಿನ್ನೆಲೆಯಲ್ಲಿ ನಗರ ಕೇಂದ್ರ ಗ್ರಂಥಾಲಯ ಪೀಪಲ್ಸ್ ಪಾರ್ಕ್ ಗ್ರಂಥಾಲಯ ಹಾಗೂ ಬೆಂಗಳೂರಿನ ಜ್ಞಾನಗಂಗೋತ್ರಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಸಹಯೋಗದೊಂದಿಗೆ ಉಚಿತವಾಗಿ 8 ನೇ ಸಮಗ್ರ ಅಣುಕು ಪರೀಕ್ಷೆಯನ್ನು ಉದ್ಯೋಗಾಕಾಂಕ್ಷಿಗಳ ಲಾಭಕ್ಕಾಗಿ ನಗರ ಕೇಂದ್ರ ಗ್ರಂಥಾಲಯದ ಸಭಾಂ ಗಣದಲ್ಲಿ ನಡೆಸಲಾಯಿತು. 150 ಉದ್ಯೋಗಾಕಾಂಕ್ಷಿಗಳು ಹಾಜರಾಗಿದ್ದರು. ಪರೀಕ್ಷೆ ಮುಕ್ತಾಯಗೊಂಡ ನಂತರ ಕಾರ್ಯಕ್ರಮಕ್ಕೆ ಆಗಮಿಸಿದ್ದ ಪ್ರಾದೇಶಿಕ ಆಯುಕ್ತ ನಿತೀಶ್ ಪಾಟೀಲ್ ಮಾತನಾಡಿ, ಉದ್ಯೋಗಾಕಾಂಕ್ಷಿಗಳು ಶಿಸ್ತಿನಿಂದ ಪರೀಕ್ಷೆ ಎದುರಿಸಿದ್ದನ್ನು ಪ್ರಶಂಸಿಸಿದರು. ಅಂತಿಮ ಅಣುಕು ಪರೀಕ್ಷೆಯು ಇಷ್ಟು ಶಿಸ್ತಿನಿಂದ ನಡೆ ಯುವುದೇ ಎಂದು ಸೋಜಿಗ ಪಟ್ಟರು. ಮುಂದುವರೆದು, ಶ್ರಮ, ಶಿಸ್ತು ಮತ್ತು ಪ್ರಾಮಾಣಿಕತೆ ವ್ಯಕ್ತಿಯೊಬ್ಬರ ಜೀವನವನ್ನು ರೂಪಿಸಲು ಬಹುಅಗತ್ಯ. ಉದ್ಯೋಗಾಕಾಂಕ್ಷಿಗಳು ಯಾವುದೇ ಸ್ಪರ್ಧಾತ್ಮಕ ಪರೀಕ್ಷೆಯನ್ನು ಎದುರಿಸುವಾಗ ಉತ್ತಮ ಸ್ನೇಹಿತ ವೃಂದವನ್ನು ಹೊಂದಿರಬೇಕು. ಹಇತ್ತೀಚಿನ ದಿನಗಳಲ್ಲಿ ರೈಲ್ವೆ ಇಲಾಖೆ ಮತ್ತು ಇತರೆ ಕೇಂದ್ರ ಸರ್ಕಾರಿ ಹುದ್ದೆಗಳಲ್ಲಿ ಹೆಚ್ಚು ಕನ್ನಡಿಗರು ಬರದಿರುವುದು ವಿಷಾದನೀಯ ಎಂದರು.

ಸಮಾರಂಭದಲ್ಲಿ ಗ್ರಂಥಾಲಯ ಉಪನಿರ್ದೇಶಕ ಬಿ.ಮಂಜುನಾಥ್ ಮಾತನಾಡಿ, ನಗರ ಕೇಂದ್ರ ಗ್ರಂಥಾಲಯದಲ್ಲಿ ಮುಂದಿನ ದಿನಗಳಲ್ಲಿ ನಡೆಯಲಿರುವ ಗ್ರಾಮ ಸಹಾಯಕ ಅಧಿಕಾರಿ ಪರೀಕ್ಷೆ, ಗ್ರಾಮ ಲೆಕ್ಕಾಧಿಕಾರಿ ಪರೀಕ್ಷೆ, ಪೋಲೀಸ್ ಸಬ್ ಇನ್ಸ್ ಪೆಕ್ಟರ ಪರೀಕ್ಷೆ ಮುಂತಾದವುಗಳಿಗೂ ಸಹ ತರಬೇತಿ ನೀಡುವ ವ್ಯವಸ್ಥೆ ಮಾಡಲಾಗುವುದು ಎಂದರು. ಬೆಂಗಳೂರಿನ ಜ್ಞಾನಗಂಗೋತ್ರಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಶೈಕ್ಷಣಿಕ ನಿರ್ದೇಶಕಿ ವೈ.ವಿ.ಗಾಯತ್ರಿ ಮಾತನಾಡಿದರು. ಅಣುಕು ಪರೀಕ್ಷೆ ಮತ್ತು ತರಬೇತಿ ಕೇಂದ್ರದ ಮುಖ್ಯಸ್ಥ ರಮೇಶ್ ನರಸಯ್ಯ ಇದ್ದರು.

## ತಮಿಳುನಾಡಿಗೆ ಕಾವೇರಿ ಹರಿಸಿದರೆ ಕರ್ನಾಟಕ ಬಂದ್ : ಕ್ವಾಲಿಟಿ ನವೀನ್ ಎಚ್ಚರಿಕೆ

# ತಮಿಳುನಾಡಿಗೆ ಹರಿದ ಕಾವೇರಿ: ಬುಗಿಲೆದ್ದ ಆಕ್ರೋಶ

ಚಾಮರಾಜನಗರ, ಕಾವೇರಿ ನೀರು ನಿಯಂತ್ರಣ ಸಮಿತಿಯು ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಆದೇಶಿಸಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಕುಮಾರ್ ಶೆಟ್ಟಿ ಬಣದ ತಾಲೂಕು ಘಟಕದ ಕಾರ್ಯಕರ್ತರು ಹಣೆಗೆ ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀಚಾಮ ರಾಜೇಶ್ವರ ಉದ್ಯಾನದ ಮುಂಭಾಗದಲ್ಲಿ ತಾಲೂಕು ಅಧ್ಯಕ್ಷ ನವೀನ್ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾನಿರತರು ಹಣೆಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಅಲ್ಲಿಂದ ಮೆರವಣಿಗೆ ಯಲ್ಲಿ ಭುವನೇಶ್ವರಿ ವೃತ್ತಕ್ಕೆ ತೆರಳಿ ಕೆಲಕಾಲ ಪ್ರತಿಭಟನೆಕಾವೇರಿ ನೀರು ನಿಯಂತ್ರಣ ಸಮಿತಿ ವಿರುದ್ದ, ತಮಿಳುನಾಡು ಸರ್ಕಾರ ವಿರುದ್ಧ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಕುಮಾರ್ ಶೆಟ್ಟಿ ಬಣದ ತಾಲೂಕು ಘಟಕದ ಅಧ್ಯಕ್ಷ ನವೀನ್



ಮಾತನಾಡಿ, ದೆಹಲಿಯಲ್ಲಿ ನಡೆದ ಕಾವೇರಿ ನೀರು ನಿಯಂತ್ರಣ ಸಮಿತಿಯು ಜು. 29 ರಿಂದ ಜಾರಿಗೆ ಬರುವಂತೆ ಮುಂದಿನ 15 ದಿನಗಳ ಕಾಲ ದಿನಕ್ಕೆ 3,500 ಕ್ಯೂಸೆಕ್ ನೀರನ್ನು ತಮಿಳುನಾಡಿಗೆ ಹರಿಸಲು ಕರ್ನಾಟಕಕ್ಕೆ ನಿರ್ದೇಶನ ನೀಡಿರುವುದನ್ನು ಖಂಡನೀಯ. ಕಾವೇರಿನ್ಯಾಯಾಧೀಕರಣ ಮಂಡಳಿ ಕರ್ನಾಟಕ ಪರವಾಗಿ ತೀರ್ಪು ನೀಡಿಲ್ಲ. ರಾಜ್ಯದಲ್ಲಿ ಬರಗಾಲ ಅವರಿಸಿ ಜನ,ಜಾನುವಾರುಗಳ ಕುಡಿಯುವ ನೀರಿಗೂ ಪರಿತಪಿಸುವ ವಾತಾವರಣ ಸೃಷ್ಟಿಯಾಗಿದೆ. ಯಾವುದೇ ಕಾರಣಕ್ಕೂ ಕಾವೇರಿ ನೀರು ಹರಿಸಬಾರದು. ಒಂದು ವೇಳೆ ತಮಿಳುನಾಡಿಗೆ ಕಾವೇರಿ ನೀರು ಹರಿಸಿದರೆ ರಾಜ್ಯಾಧ್ಯಕ್ಷ ರಾದ ಪ್ರವೀಣ್ ಕುಮಾರ್ ಶೆಟ್ಟಿ ಕರ್ನಾಟಕ ಬಂದ್ ಮಾಡುವುದಾಗಿ ಕರೆ ನೀಡಿದ್ದಾರೆ. ಗಡಿ ಜಿಲ್ಲೆ ಚಾಮರಾಜನಗರದಿಂದ ಸಂಪೂರ್ಣ ಬೆಂಬಲ ನೀಡಿ ಬಂದ್ ಯಶಸ್ವಿಗೊಳಿಸಲಾಗುವುದು ಎಂದರು.

ಪ್ರತಿಭಟನೆಯಲ್ಲಿ ವೇದಿಕೆ ಜಿಲ್ಲಾ ಗೌರವಾಧ್ಯಕ್ಷ ಕೃಷ್ಣನಾಯಕ, ಕಾರ್ಯಾಧ್ಯಕ್ಷ ಉಮ್ಮತ್ತೂರು ಚಂದ್ರು, ತಾಲೂಕು ಪ್ರಧಾನ ಕಾರ್ಯದರ್ಶಿ ಅರ್ಜುನ್, ಉಪಾಧ್ಯಕ್ಷರಾದ ಉಮೇಶ್, ರಾಮಸಮುದ್ರ ಬಾಬು, ಅವಿನಾಶ್, ಟೌನ್ ಅಧ್ಯಕ್ಷ ಮಹೇಂದ್ರ ಉಪ್ಪಾರ್, ಉಪಾಧ್ಯಕ್ಷ ಅಫ್ಸನ್, ಸಂಘಟನಾ ಕಾರ್ಯದರ್ಶಿ ರಿಜ್ವಾನ್, ಉಪಾಧ್ಯಕ್ಷ ಮಹಮದ್ ಫೈರಾಜ್ ತಾಲ್ಲೂಕು ಗೌರವ ಅಧ್ಯಕ್ಷ ಪುರುಷೋತ್ತಮ್ , ಕೇಶವ್ ನಲ್ಲೂರ್, ನಟರಾಜು, ಬಸವಪುರ ಮಹಾದೇವಸ್ವಾಮಿ, ಕಾಡಳ್ಳಿ ಕುಮಾರ್ ,ಅಬ್ದುಲ್ ಮುಂನ್ಸಿಫ್, ಅಬ್ಬುಸರ್, ಪೃಥ್ವಿ, ಆಟೋ ಮನೋಜ್, ಮಧು, ದೊರೆ , ಆ?ಯಂಬುಲೆನ್ಸ್ ಚಂದ್ರು ಇತರರು ಭಾಗವಹಿಸಿದ್ದರು.

# ಕೆಸರೆಯಲ್ಲಿ ಗುರುಪೂರ್ಣಿಮೆ

ಮೈಸೂರು: ನಗರದ ಹಳೆ ಕೆಸರೆಯ ಶ್ರೀ ದತ್ತ ಸಾಯಿವಿಭೂತಿ ಕ್ಷೇತ್ರದಿಂದ 9ನೇ ವರ್ಷದ ಗುರುಪೂರ್ಣಿಮಾ ಮಹೋತ್ಸವ ಅದ್ದೂರಿಯಾಗಿ ಜರುಗಿತು.

ಕ್ಷೇತ್ರ ಆವರಣದಲ್ಲಿ ಬೆಳಿಗ್ಗೆ 5ಕ್ಕೆ ಶ್ರೀ ಸಿರಡಿ ಸಾಯಿಬಾಬಾ ಅವರಿಗೆ ಫಂಚಾಮೃತ ಅಭಿಷೇಕ ಸೇರಿ ವಿವಿಧ ಕಾರ್ಯಗಳು ಜರುಗಿದವು. ಬೆ.6ಕ್ಕೆ ವಿಶೇಷ ಪೂಜೆ ಕಾಕಾಡಾರತಿ, ದಕ್ಷಿಣಾಮೂರ್ತಿ ಯಾಗ ನಡೆಯಿತು. ಸಂಜೆ 5.30ಕ್ಕೆ



ನಾಯ್ಡು ನಗರದ ಬಸ್ ನಿಲ್ದಾಣ ಮುಂಭಾಗದ ಅಭಯ ಆಂಜನೇಯ, ಪಸನ್ನ ಗಣಪತಿ ದೇವಾಲಯದಿಂದ ಹೊರಟ ಮೆರವಣಿಗೆ ವಿವಿಧ ಕಡೆಗಳಲ್ಲಿ ಸಂಚರಿಸಿ ದೇವಾಲಯದಲ್ಲೇ ಅಂತ್ಯವಾಯಿತು. ವೀರಗಾಸೆ ಕುಣಿತ, ಪಂಚಾಲಿ, ಅಗೋರಿ ಕಲಾತಂಡ, ಬೆಳ್ಳಿ ಪಲ್ಲಕ್ಕಿ ಉತ್ಸವ, ಭಜನೆ ತಂಡ ಮೆರವಣಿಗೆಯಲ್ಲಿ ಗಮನ ಸೆಳೆದವು. ಕ್ಷೇತ್ರದ ವ್ಯವಸ್ಥಾಪಕರಾದ ಗೀತಾ ಮತ್ತು ಬಸವರಾಜು ಮಾತನಾಡಿ, ಕಳೆದ ಒಂಭತ್ತು ವರ್ಷಗಳಿಂದ ಗುರುಪೂರ್ಣಿಮೆಯನ್ನು ವೈಭದಿಂದ ಆಚರಿಸಿಕೊಂಡು ಬರಲಾಗುತ್ತಿದೆ. ದೂರದ ಊರಿಂದ ಅನೇಕ ಭಕ್ತರು ಸಹ ಆಗಮಿಸಿ ವೈಭವವನ್ನು ಕಣ್ತುಂಬಿಕೊಳ್ಳುತ್ತಿದ್ದಾರೆ. ಆಗಮಿಸಿದ ಭಕ್ತರಿಗೆ ಕೇಸರಿಬಾತ್, ಬಾತ್, ಮೊಸರನ್ನ ಪೊಂಗಲ್, ಪೂಳಿಯೊಗರೆ ಚಿತ್ರಾನ್ನ ಹಲವು ಪ್ರಸಾದವನ್ನು ಸಹ ಸಮಿತಿ ನಿರಂತರವಾಗಿ ನೀಡಿದೆ. ಭಕ್ತರ ಅನೂಕೂಲಕ್ಕಾಗಿ ಮಂದಿರ ಸದಾ ಸೇವೆ ನೀಡುತ್ತಿದೆ ಎಂದು ಹೇಳಿದರು.

# ಮೆಡಿಕಲ್ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ



ರಾಮನಗರ: ಇಂಜಿನಿಯರಿಂಗ್, ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡುತ್ತಿರುವ ಐದು ವಿದ್ಯಾರ್ಥಿಗಳಿಗೆ ಇಲ್ಲಿನ ನಗರ ಸಭೆವತಿಯಿಂದ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಯಿತು.

ಈ ವೇಳೆ ಮಾತನಾಡಿದ ನಗರಸಭಾಧ್ಯಕ್ಷ ಕೆ. ಶೇಷಾದ್ರಿ, 2025–26ನೇ ಸಾಲಿನಿಂದ ಉನ್ನತ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತಮ್ಮ ವ್ಯಾಸಂಗಕ್ಕೆ ಅನುಕೂಲವಾಗುವಂತೆ ನಗರಸಭೆವತಿಯಿಂದ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಉದ್ದೇಶಿಸಲಾಗಿತ್ತು. ಈಗ ಎಂಟು ಮಂದಿಯ ಪೈಕಿ ಐದು ಮಂದಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ, ಅವರೆಲ್ಲ ಸಮಾಜದ ಮುಖ್ಯವಾಹಿನಿಯಲ್ಲಿ ಸಾಗಲಿ ಎಂಬುದು ನಮ್ಮ ಮುಖ್ಯ ಉದ್ದೇಶ ಎಂದು ತಿಳಿಸಿದರು.

**ಭಕ್ತಿ ಮತ್ತು ಶ್ರದ್ಧೆಯಿಂದ ಕರಗ ನೆರವೇರಲಿ**

ಮುಂದಿನ ಮಂಗಳವಾರ ನಗರದಲ್ಲಿ ಶ್ರೀ ಚಾಮುಂಡೇಶ್ವರಿ ಅಮ್ಮನವರು, ಶ್ರೀ ಭಂಡಾರಮ್ಮ ದೇವಿ, ಬಿಸಿಲು ಮಾರಮ್ಮ ದೇವಿ, ಮಗ್ಗದಕೇರಿ ಮಾರಮ್ಮ ದೇವಿ ಸೇರಿದಂತೆ ಒಂಬತ್ತು ಶಕ್ತಿ ದೇವತೆಗಳ ಕರಗಗಳು ನಡೆಯಲಿವೆ. ಲಕ್ಷಾಂತರ ಮಂದಿ ಅಂದು ರಾಮನಗರಕ್ಕೆ ಬಂದು ದೇವಾಲಯಗಳನ್ನು ದರ್ಶಿಸುತ್ತಾರೆ. ಕರಗ ಮಹೋತ್ಸವಕ್ಕೆ ಇಲ್ಲಿನ ನಿವಾಸಿಗಳು ತಮ್ಮ ಬಂಧು–ಬಳಗವನ್ನು ಆಹ್ವಾನಿಸುವುದು ವಾಡಿಕೆ. ಬಹುತೇಕ ಎಲ್ಲಾ ಕರಗಗಳು ನಗರದ ಎಲ್ಲಾ ಪ್ರಮುಖ ಬಡಾವಣೆಗಳಲ್ಲಿ ಸಂಚರಿಸಿ ಭಕ್ತರಿಗೆ ದರ್ಶನ ಕೊಟ್ಟು ಪೂಜೆ ಸ್ವೀಕರಿಸುವುದು ಸಂಪ್ರದಾಯ. ಎಲ್ಲಾ ಧರ್ಮೀಯರು ಈ ಮಹೋತ್ಸವದಲ್ಲಿ ಭಾಗವಹಿಸಿ ಶಾಂತಿಯನ್ನ ಕಾಪಾಡಬೇಕು ಎಂದು ಕರೆ ಕೊಟ್ಟರು. ಈ ವೇಳೆ ನಗರಸಭೆ ಉಪಾಧ್ಯಕ್ಷೆ ಗಿರಿಜಮ್ಮ ಗುರುವೇಗೌಡ, ಸದಸ್ಯರಾದ ಬಿ.ಸಿ. ಪಾರ್ವತಮ್ಮ, ರಮೇಶ್, ಆಯಿಷಾಬಾನು, ಮೊಯಿನ್ ಖುರೇಷಿ, ಸಮದ್, ವಿಜಯಕುಮಾರಿ, ನಾಗಮ್ಮ, ಪವಿತ್ರ ಲಕ್ಮೀಕಾಂತ್, ಅಜ್ಮತ್, ಅಧಿಕಾರಿಗಳಾದ ಆರ್. ನಾಗರಾಜು, ಪುಟ್ಟಸ್ವಾಮಿ ಹಾಜರಿದ್ದರು.

# ಸುಗ್ಗನಹಳ್ಳಿಯಲ್ಲಿ ಚೆನ್ನಮ್ಮ ಸ್ಮರಣೆ




ರಾಮನಗರ: ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಪತ್ನಿ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ತಾಯಿ ಶ್ರೀಮತಿ ಚೆನ್ನಮ್ಮ ಅವರ ಉತ್ತರ ಕ್ರಿಯಾದಿ ಕಾರ್ಯದ ಹಿನ್ನಲೆಯಲ್ಲಿ ತಾಲ್ಲೂಕಿನ ಸುಗ್ಗನಹಳ್ಳಿ ಗ್ರಾಮದಲ್ಲಿ ಪುಣ್ಯ ಸ್ಮರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಸುಗ್ಗನಹಳ್ಳಿ ಗ್ರಾಮದ ವೃತ್ತದಲ್ಲಿ ಆಯೋಜನೆಯಾಗಿದ್ದ ಈ ಕಾರ್ಯಕ್ರಮದಲ್ಲಿ ಕಸಬಾ ಹೋಬಳಿಯ ಎಲ್ಲಾ ಗ್ರಾಮಗಳ ಪ್ರಮುಖರು, ನಾಗರೀಕರು ಭಾಗವಹಿಸಿ ಚೆನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಇದೇ ವೇಳೆ ಅನ್ನ ಸಂತರ್ಪಣೆ ಕಾರ್ಯ ನಡೆಯಿತು. ನೂರಾರು ಜನ ಚೆನ್ನಮ್ಮ ಅವರ ನಿಧನಕ್ಕೆ ಸಂತಾಪ ವ್ಯಕ್ತಪಡಿಸಿ, ಮೃತರ ಕುಟುಂಬಕ್ಕೆ ಇವರ ಅಗಲಿಕೆಯನ್ನು ಸಹಿಸುವ ಶಕ್ತಿ ಕರುಣಿಸುವಂತೆ ತಮ್ಮ ಇಷ್ಟ ದೇವರುಗಳಲ್ಲಿ ಪ್ರಾರ್ಥಿಸಿದರು. ಪ್ರಮುಖರಾದ ಹೋಟೆಲ್ ಉಮೇಶ್, ರಾಮಕೃಷ್ಣಯ್ಯ, ಕೃಷ್ಣಮೂರ್ತಿ (ಕಿಟ್ಟಣ್ಣ), ಮೂರ್ತಿ, ಕರಿಯಪ್ಪ, ಬೋರಪ್ಪ, ಮಹದೇವ, ಶಾಂತಣ್ಣ, ಕುಮಾರ್, ಸಿದ್ದಲಿಂಗಯ್ಯ, ಬಾಲು, ಗಂಗಾಧರ, ಶಿವಭದ್ರ, ಖಾನ್ ಮುಂತಾದವರು ಭಾಗವಹಿಸಿದ್ದರು.

## ಮಾನವ ಕಳ್ಳ ಸಾಗಾಣಿಕೆ ನಿರ್ಮೂಲನೆಗೆ ಎಲ್ಲರೂ ಕೈ ಜೋಡಿಸಿ: ಸವಿತಾ



ರಾಮನಗರ: ಮಾನವ ಕಳ್ಳ ಸಾಗಾಣಿಕೆಯು ಜಾಗತಿಕವಾಗಿ ಸಮಾಜವನ್ನು ಪೀಡಿಸುತ್ತಿರುವ ಸಂಕೀರ್ಣ ಸಮಸ್ಯೆಯಾಗಿದ್ದು, ಇದು ಆಧುನಿಕ ಸಮಾಜದ ಗುಲಾಮಗಿರಿಯ ಸಂಕೇತವಾಗಿದೆ. ಸಮಾಜದ ಈ ಪಿಡುಗನ್ನು ಸಂಪೂರ್ಣವಾಗಿ ನಾಶ ಮಾಡಲು ಪ್ರತಿಯೊಬ್ಬ ಜವಾಬ್ದಾರಿಯುತ ನಾಗರಿಕರು ಕೈಜೋಡಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ.ಆರ್. ಅವರು ಕರೆ ನೀಡಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವಿವಿಧ ಇಲಾಖೆಗಳು ಹಾಗೂ ಸಂಸ್ಥೆಗಳ ಜಂಟಿ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ 'ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಾನವ ಕಳ್ಳಸಾಗಾಣಿಕೆಯು ಮಾನವ ಹಕ್ಕುಗಳ ಸ್ಪಷ್ಟ ಉಲ್ಲಂಘನೆಯಾಗಿದ್ದು, ಇದನ್ನು ತಡೆಗಟ್ಟುವುದು ಕೇವಲ ಸರ್ಕಾರಿ ನೌಕರರ ಜವಾಬ್ದಾರಿಯಷ್ಟೇ ಅಲ್ಲ, ಸಾರ್ವಜನಿಕರೂ ಜಾಗೃತರಾಗಿ ಮಾಹಿತಿ ನೀಡುವ ಮೂಲಕ ಶೋಷಣೆಗೆ ಒಳಗಾದವರನ್ನು ಬಿಡುಗಡೆಗೊಳಿಸಲು ಸಹಕರಿಸಬೇಕು ಎಂದರು.

**ಜಾಗೃತಿ ಮತ್ತು ಕಟ್ಟುನಿಟ್ಟಿನ ತಪಾಸಣೆಗೆ ಸೂಚನೆ**

ಕಾಣೆಯಾದ ಮಕ್ಕಳ ಪ್ರಕರಣಗಳಲ್ಲಿ ತಕ್ಷಣವೇ ಪೊಲೀಸ್ ಇಲಾಖೆಗೆ ದೂರು ನೀಡಿ ಎಫ್‌ಐಆರ್ ದಾಖಲಿಸುವುದು ಅತ್ಯಗತ್ಯ ಎಂದು ಜಡ್ಜ್ ಸವಿತಾ ತಿಳಿಸಿದರು. ವಿಶೇಷವಾಗಿ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಕೂಲಿ ಕಾರ್ಮಿಕರ ಕೆಲಸದ ಸ್ಥಳಗಳಿಗೆ ಭೇಟಿ ನೀಡಿ, ಅಲ್ಲಿ ಮಕ್ಕಳ ದುಡಿಮೆ ಅಥವಾ ಕಳ್ಳಸಾಗಾಣಿಕೆಯ ಅನುಮಾನ ಕಂಡುಬಂದಲ್ಲಿ ತಕ್ಷಣವೇ ಸ್ಥಳದ ಮಾಲೀಕರನ್ನು ವಿಚಾರಣೆಗೊಳಪಡಿಸಿ ಮಕ್ಕಳನ್ನು ರಕ್ಷಿಸುವ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು. ಸಮಾಜದ ಪ್ರತಿಯೊಂದು ಇಲಾಖೆಯೂ ತಮ್ಮ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದಾಗ ಮಾತ್ರ ಈ ಪಿಡುಗನ್ನು ನಿಯಂತ್ರಿಸಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

**ಮಾನವ ಕಳ್ಳಸಾಗಾಣಿಕೆಯ ಸ್ವರೂಪ, ಕಾನೂನು ಅರಿವು**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಮಂಜುನಾಥ್ ಅವರು ಮಾತನಾಡಿ, ಬಲವಂತವಾಗಿ ಅಥವಾ ವಂಚನೆಯ ಮೂಲಕ ಪುರುಷ, ಮಹಿಳೆ ಅಥವಾ ಮಕ್ಕಳನ್ನು ಕರೆದೊಯ್ಯುವುದು, ವರ್ಗಾವಣೆ ಮಾಡುವುದು, ಆಶ್ರಯ ನೀಡುವುದು ಅಥವಾ ಹಣ ನೀಡಿ ಖರೀದಿ–ಮಾರಾಟ ಮಾಡುವುದನ್ನು ಮಾನವ ಕಳ್ಳಸಾಗಾಣಿಕೆ ಎಂದು ಪರಿಗಣಿಸಲಾಗುತ್ತದೆ ಎಂದರು. ಮಕ್ಕಳನ್ನು ಜೀತ ಪದ್ಧತಿಗೆ ತಳ್ಳುವುದು, ಅಂಗಾಂಗ ಕಳ್ಳಸಾಗಾಣಿಕೆಗೆ ಬಳಸುವುದು, ಲೈಂಗಿಕ ವೃತ್ತಿ ಹಾಗೂ ಇತರೆ ಶೋಷಣೆಗೆ ಒಳಪಡಿಸುವುದು ಗಂಭೀರ ಅಪರಾಧವಾಗಿದೆ. ಭಾರತದ ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ ಹಾಗೂ ಘನತೆಯಿಂದ ಬದುಕುವ ಹಕ್ಕನ್ನು ನೀಡಿದೆ. ಆದ್ದರಿಂದ ಗ್ರಾಮ ಮಟ್ಟದಲ್ಲಿ ಕಾಣೆಯಾಗಿರುವ ಮಕ್ಕಳು, ಕೂಲಿ ಮಾಡುತ್ತಿರುವವರು, ಶಾಲೆ ಬಿಟ್ಟವರು ಹಾಗೂ ಬಾಲ್ಯ ವಿವಾಹದ ಅಪಾಯದಲ್ಲಿರುವ ಮಕ್ಕಳ ಮಾಹಿತಿಯನ್ನು ದಾಖಲಿಸಿ ಅವರ ಸುರಕ್ಷತೆಗೆ ಸೂಕ್ತ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

**ಜಾಗೃತಿ ಕರಪತ್ರ ಬಿಡುಗಡೆ ಮತ್ತು ಗಣ್ಯರ ಉಪಸ್ಥಿತಿ**

ಕಾರ್ಯಕ್ರಮದ ಅಂಗವಾಗಿ ಮಾನವ ಕಳ್ಳಸಾಗಾಣಿಕೆ ತಡೆಗೆ ಸಂಬಂಧಿಸಿದ ಜಾಗೃತಿ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು. ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಮೋಹನ್ ಕುಮಾರ್ ಅವರು ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿದರು. ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಲಕ್ಷ್ಮೀದೇವಿ ಅವರು ಸ್ವಾಗತಿಸಿ, ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಶಿವಕುಮಾರ್, ಶಾಂತ ಜೀವ ಜ್ಯೋತಿ ಕಾರ್ಯದರ್ಶಿ ಷಣ್ಮುಗಂ ಸುಂದರಂ, ಟೌನ್ ಇನ್ಸ್ಪೆಕ್ಟರ್ ರಮೇಶ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಪ್ರಮಿಳ, ಕಾಂತರಾಜು, ವೇಣುಗೋಪಾಲ್, ನಾರಾಯಣ್ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಆಶಾ, ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆ

## ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದ ತಾಲೂಕು ಅಧ್ಯಕ್ಷ ಎಂ.ಜಿ.ಮೋಹನ್‌ದಾಸ್

ಮಡಿಕೇರಿ: ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸಭೆಯು ತಾಲೂಕು ಅಧ್ಯಕ್ಷ ಎಂ.ಜಿ.ಮೋಹನ್‌ದಾಸ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಸಭೆಯಲ್ಲಿ ಸರ್ಕಾರದ ವಿವಿಧ ಗ್ಯಾರಂಟಿ ಯೋಜನೆಗಳ ಪ್ರಗತಿ ಹಾಗೂ ಅನುಷ್ಠಾನದ ಕುರಿತು ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದು ಪರಿಶೀಲಿಸಲಾಯಿತು.

**ಗೃಹಲಕ್ಷ್ಮಿ ಯೋಜನೆ ಮತ್ತು ಮರುಪರಿಶೀಲನೆ**

ಮಡಿಕೇರಿ ತಾಲೂಕಿನಲ್ಲಿ ಮೇ ತಿಂಗಳಿನಲ್ಲಿ ಗೃಹ ಲಕ್ಷ್ಮಿ ಯೋಜನೆಯಡಿ 1,05,392 ಫಲಾನುಭವಿಗಳಿಗೆ ಒಟ್ಟು 2,10,78,400 ರೂಪಾಯಿ ಬಿಡುಗಡೆಯಾಗಿದೆ. ತಾಲೂಕಿನಲ್ಲಿ ಒಟ್ಟು 711 ಗೃಹಲಕ್ಷ್ಮಿ ಫಲಾನುಭವಿಗಳು ಮರಣ ಹೊಂದಿದ್ದು, ಅವರ ಬ್ಯಾಂಕ್ ಖಾತೆಗಳಿಗೆ ಜಮೆಯಾಗಿರುವ ಹಣವನ್ನು ಮರಳಿ ಸರ್ಕಾರದ ಖಾತೆಗೆ ಜಮೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಮೃತ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ಜಮೆಯಾಗುವುದನ್ನು ಸ್ಥಗಿತಗೊಳಿಸಿ, ಆ ಕುಟುಂಬದಲ್ಲಿರುವ ಅರ್ಹ ಮಹಿಳಾ ಸದಸ್ಯರಿಗೆ ಯೋಜನೆ ತಲುಪಿಸಲು ಗೂಗಲ್ ಶೀಟ್ ರಚಿಸಿ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಅಲ್ಲದೆ, ಪ್ರಧಾನ ಕಚೇರಿಯ ನಿರ್ದೇಶನದಂತೆ ಮಾಸ್ಟರ್ ಟ್ರೇನರ್‌ಗಳಿಗೆ ತರಬೇತಿ ನೀಡಿ, ಫಲಾನುಭವಿಗಳ ಮನೆಗೆ ತೆರಳಿ ಫೇಸ್ ಕ್ಯಾಪ್ಚರ್ ಮೂಲಕ ಮರುಪರಿಶೀಲನೆ ನಡೆಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಯೋಜನೆಯು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಗ್ರಾಮೀಣ ಭಾಗದಲ್ಲಿ ಜಾಗೃತಿ ಕಾರ್ಯಕ್ರಮಗಳು ಹಾಗೂ ಗಿಡ ನೆಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು.



### ಗೃಹಜ್ಯೋತಿ ಯೋಜನೆ ಮೂಲಸೌಕರ್ಯ ನಿರ್ವಹಣೆ

ಗೃಹಜ್ಯೋತಿ ಯೋಜನೆಯಡಿ ಮಡಿಕೇರಿ ತಾಲೂಕಿನ 52,713 ಅರ್ಹ ವಿದ್ಯುತ್ ಸ್ಥಾವರಗಳ ಪೈಕಿ 52,121 ಸ್ಥಾವರಗಳು ನೋಂದಣಿಯಾಗಿದ್ದು, ಶೇಕಡಾ 98.88 ರಷ್ಟು ಸಾಧನೆಯಾಗಿದೆ. ಪ್ರಸ್ತುತ 17,250 ಫಲಾನುಭವಿಗಳ ಮರುಪರಿಶೀಲನೆ ಪೂರ್ಣಗೊಂಡಿದ್ದು, ಲೈನ್ಮ್ಯಾನ್ ಹಾಗೂ ಮೀಟರ್ ರೀಡರ್‌ಗಳು ಮನೆ ಮನೆಗೆ ಭೇಟಿ ನೀಡಿ ಪರಿಶೀಲಿಸುತ್ತಿದ್ದಾರೆ. ಇತ್ತೀಚೆಗೆ ಸುರಿದ ಭಾರಿ ಮಳೆಯಿಂದಾಗಿ ಹಾನಿಗೊಳಗಾಗಿದ್ದ 599 ವಿದ್ಯುತ್ ಕಂಬಗಳ ಜಾಗದಲ್ಲಿ ಹೊಸ ಕಂಬಗಳನ್ನು ಅಳವಡಿಸಲಾಗಿದೆ. ಸಭೆಯಲ್ಲಿದ್ದ ಸಮಿತಿ ಸದಸ್ಯ ಪ್ರಭು ರೈ ಅವರು ಮಾತನಾಡಿ, ಮಡಿಕೇರಿ ನಗರ ವ್ಯಾಪ್ತಿಯಲ್ಲಿ ಗೃಹಜ್ಯೋತಿ ಮರುಪರಿಶೀಲನೆ ವೇಗಗೊಳಿಸಬೇಕು ಹಾಗೂ ನಗರದ ಕೋಟೆ ರಸ್ತೆ, ರಾಜರಾಜೇಶ್ವರಿ ಶಾಲೆ ಮತ್ತು ಹೊಸ ತಹಸೀಲ್ದಾರ್ ಕಚೇರಿ ಬಳಿ ತೆರವುಗೊಳಿಸಲಾದ ಹಳೆಯ ವಿದ್ಯುತ್ ಕಂಬಗಳನ್ನು ರಸ್ತೆ ಬದಿಯಿಂದ ಸಂಪೂರ್ಣವಾಗಿ ತೆರವು ಮಾಡಬೇಕೆಂದು ಮನವಿ ಮಾಡಿದರು.

### ಅನ್ನಭಾಗ್ಯ ಯೋಜನೆ, ಪಡಿತರ ಚೀಟಿ ಪ್ರಕ್ರಿಯೆ

ಅನ್ನಭಾಗ್ಯ ಯೋಜನೆಯಡಿ ತಾಲೂಕಿನಲ್ಲಿ ಒಟ್ಟು 38,226 ಪಡಿತರ ಚೀಟಿಗಳಿದ್ದು, 1,21,005 ಫಲಾನುಭವಿಗಳಿದ್ದಾರೆ. ಇದರಲ್ಲಿ 1,388 ಅನರ್ಹ ಫಲಾನುಭವಿಗಳನ್ನು ಗುರುತಿಸಲಾಗಿದೆ. ಪ್ರಸ್ತುತ ಹೊಸ ಪಡಿತರ ಚೀಟಿ ಅರ್ಜಿ ಸಲ್ಲಿಕೆಯನ್ನು ಸ್ಥಗಿತಗೊಳಿಸಲಾಗಿದ್ದರೂ, ತುರ್ತು ಆಸ್ಪತ್ರೆ ಚಿಕಿತ್ಸೆಗಾಗಿ ಹೊಸ ಅರ್ಜಿ ಸಲ್ಲಿಕೆ ಹಾಗೂ ಚಾಲ್ತಿಯಲ್ಲಿರುವ ಕಾರ್ಡ್‌ಗಳಿಗೆ ಸದಸ್ಯರ ಹೆಸರು ಸೇರ್ಪಡೆ ಅಥವಾ ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಬಿಪಿಎಲ್ ಕಾರ್ಡ್‌ದಾರರ ಜಾತಿ ಪ್ರಮಾಣಪತ್ರವನ್ನು ಮ್ಯಾಪಿಂಗ್ ಮಾಡುವ ಕಾರ್ಯ ನಡೆಯುತ್ತಿದ್ದು, ಇದರಿಂದ ಅನ್ನಭಾಗ್ಯ ಯೋಜನೆಯ ಸೌಲಭ್ಯಕ್ಕೆ ಯಾವುದೇ ತೊಂದರೆಯಾಗುವುದಿಲ್ಲ. ಆದ್ದರಿಂದ ಸಾರ್ವಜನಿಕರು ಹಾಗೂ ಫಲಾನುಭವಿಗಳು ಯಾವುದೇ ಗೊಂದಲಕ್ಕೆ ಒಳಗಾಗುವ ಅಗತ್ಯವಿಲ್ಲ ಎಂದು ಆಹಾರ ಇಲಾಖೆ ಅಧಿಕಾರಿಗಳು ಸ್ಪಷ್ಟಪಡಿಸಿದರು.

### ಶಕ್ತಿ ಮತ್ತು ಯುವನಿಧಿ ಯೋಜನೆಯ ಪ್ರಗತಿ

ಶಕ್ತಿ ಯೋಜನೆಯಡಿ ಮಡಿಕೇರಿ ತಾಲೂಕಿನಲ್ಲಿ ಇದುವರೆಗೆ 1,85,14,504 ವಯಸ್ಕ ಮಹಿಳೆಯರು ಹಾಗೂ 4,54,103 ಹೆಣ್ಣು ಮಕ್ಕಳು ಸೇರಿದಂತೆ ಒಟ್ಟು ಅಪಾರ ಸಂಖ್ಯೆಯ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದುಕೊಂಡಿದ್ದಾರೆ. ಪ್ರತಿದಿನ ಸರಾಸರಿ 16,747 ಮಹಿಳಾ ಪ್ರಯಾಣಿಕರು ಸಂಸ್ಥೆಯ ವಾಹನಗಳಲ್ಲಿ ಸಂಚರಿಸುತ್ತಿದ್ದು, ಈ ಯೋಜನೆಯಿಂದ ಕೆಎಸ್‌ಆರ್‌ಟಿಸಿಗೆ ಒಟ್ಟು 81.68 ಕೋಟಿ ರೂಪಾಯಿಗೂ ಅಧಿಕ ಆದಾಯ ಬಂದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಇನ್ನು ಯುವನಿಧಿ ಯೋಜನೆಯಡಿ ಜೂನ್ ಮಾಹೆಯವರೆಗೆ 639 ನಿರುದ್ಯೋಗಿ ಪದವೀಧರರು ಹಾಗೂ ಡಿಪ್ಲೊಮಾಧಾರಿಗಳು ನೋಂದಾಯಿಸಿಕೊಂಡಿದ್ದು, ಒಟ್ಟು 1.59 ಕೋಟಿ ರೂಪಾಯಿಗೂ ಅಧಿಕ ಹಣವನ್ನು ಡಿಬಿಟಿ ಮೂಲಕ ನೇರವಾಗಿ ಅವರ ಖಾತೆಗಳಿಗೆ ವರ್ಗಾಯಿಸಲಾಗಿದೆ. ಯೋಜನೆಯ ಸೌಲಭ್ಯ ಮುಂದುವರಿಯಲು ಫಲಾನುಭವಿಗಳು ಪ್ರತಿ ತಿಂಗಳ25 ರೊಳಗೆ ಸ್ವಯಂ ಘೋಷಣೆ ಮಾಡಿಕೊಳ್ಳುವುದು ಕಡ್ಡಾಯವಾಗಿದೆ.

## ಅಲ್ಪಸಂಖ್ಯಾತರ ಇಲಾಖೆ ಮೇಲೆ ಲೋಕಾಯುಕ್ತ ದಾಳಿ, ಇಬ್ಬರು ಬಲೆಗೆ

ಚಾಮರಾಜನಗರ, ಜಿಲ್ಲೆ ಅಲ್ಪಸಂಖ್ಯಾತರ ಇಲಾಖೆ ಕಚೇರಿಯ ಮೇಲೆ ಗುರುವಾರ ಲೋಕಾಯುಕ್ತ ದಾಳಿ ನಡೆಸಿದ್ದು, ಇಬ್ಬರು ಬಲೆಗೆ ಬಿದ್ದಿದ್ದಾರೆ.



ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಕಚೇರಿ ಜಿಲ್ಲಾ ವ್ಯವಸ್ಥಾಪಕರಾದ ನಾಗೇಂದ್ರ ಮತ್ತು ಕೇಸ್ ವರ್ಕರ್ ಸರ್ವಮಂಗಳ ಅವರು 15 ಸಾವಿರ ಲಂಚ ಪಡೆಯುವ ವೇಳೆ ಲೋಕಾಯುಕ್ತ ಡಿವೈಎಸ್ಪಿ ಗಜೇಂದ್ರ ಪ್ರಸಾದ್ ಮತ್ತು ತಂಡದವರ ಬಲೆಗೆ ಬಿದ್ದಿದ್ದಾರೆ. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಲ್ಲಿ ದೂರುದಾರ ಮೊಹಮ್ಮದ್ ಜುಬೇರ್ ಎಂಬುವವರು ಕಾರು ಲೋನ್ ಸಹಾಯಧನವನ್ನು ಪಡೆಯಲು ಅರ್ಜಿ ಸಲ್ಲಿಸಿದ್ದರು. ಈ ವೇಳೆ ಅಧಿಕಾರಿಗಳು 15 ಸಾವಿರ ರೂ, ಲಂಚ ಕೊಡುವಂತೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ತನಿಖೆ ಮುಂದುವರಿದಿದೆ.

# ಮಾನವ ಕಳ್ಳಸಾಗಣೆ ತಡೆಗೆ ಜಾಗೃತಿ ಜಾಥಾ

## ನಿರ್ಮಲ ಕಾನ್ವೆಂಟ್ ಶಾಲೆಯ ವಿನೂತನ ಕಾರ್ಯಕ್ರಮಕ್ಕೆ ಸಾರ್ವಜನಿಕರ ಮೆಚ್ಚುಗೆ



**ಗುಂಡ್ಲುಪೇಟೆ, :–** ವಿಶ್ವಮಾನವ ಕಳ್ಳಸಾಗಣೆ ವಿರೋಧಿ ದಿನದ ಅಂಗವಾಗಿ ಅರ್ಸುಲೈನ್ ಫ್ರಾನ್ಸಿಸ್ಕನ್ ಸಂಸ್ಥೆಯ ಆಶಯದಲ್ಲಿ ಗುಂಡ್ಲುಪೇಟೆಯ ನಿರ್ಮಲ ಕಾನ್ವೆಂಟ್ ಆಂಗ್ಲ ಮಾಧ್ಯಮ ಶಾಲೆ ವತಿಯಿಂದ ಜಾಗೃತಿ ಜಾಥಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಶಾಲಾ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ವ್ಯವಸ್ಥಾಪಕಿ ಸಿಸ್ಟರ್ ಕೋಸೆಸ್ ಹಾಗೂ ಶಿಕ್ಷಕರಾದ ಮಂಜುನಾಥ್ ಅವರು ವಿದ್ಯಾರ್ಥಿಗಳಿಗೆ ಮಾನವ ಕಳ್ಳಸಾಗಣೆಯ ಅಪಾಯಗಳು, ಮಕ್ಕಳ ಸುರಕ್ಷತೆ, ಎಚ್ಚರಿಕೆ ವಹಿಸಬೇಕಾದ ಅಂಶಗಳು ಹಾಗೂ ಸಮಾಜದ ಜವಾಬ್ದಾರಿಗಳ ಕುರಿತು ಮಾಹಿತಿ ನೀಡಿದರು.

ಬಳಿಕ ವಿದ್ಯಾರ್ಥಿಗಳು ಫಲಕಗಳು ಮತ್ತು ಘೋಷಣೆಗಳೊಂದಿಗೆ ಗುಂಡ್ಲುಪೇಟೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ನಡೆಸಿ, ಮಾನವ ಕಳ್ಳಸಾಗಣೆ ಎಂಬ ಸಾಮಾಜಿಕ ಪಿಡುಗಿನ ವಿರುದ್ಧ ಜನರಲ್ಲಿ ಅರಿವು ಮೂಡಿಸಿದರು. ಜಾಥಾ ಸಾರ್ವಜನಿಕರ ಗಮನ ಸೆಳೆದರು

ಕಾರ್ಯಕ್ರಮದ ನೇತೃತ್ವವನ್ನು ಕನ್ನಡ ಮಾಧ್ಯಮ ವಿಭಾಗದ ಮುಖ್ಯ ಶಿಕ್ಷಕಿ ಸಿಸ್ಟರ್ ಆರೋಗ್ಯ ಮೇರಿ, ಆಂಗ್ಲ ಮಾಧ್ಯಮ ವಿಭಾಗದ ಮುಖ್ಯ ಶಿಕ್ಷಕಿ ಸಿಸ್ಟರ್ ಸಿಲ್ವಿಯ ರೀಟಾ ಲೋಬೊ ಹಾಗೂ ನಿರ್ಮಲ ಸೇವಾ ಕೇಂದ್ರದ ಮುಖ್ಯಸ್ಥೆ ಸಿಸ್ಟರ್ ಹೆಲನ್ ವಹಿಸಿದ್ದರು. ಶಾಲೆಯ ಕನ್ನಡ ಮತ್ತು ಆಂಗ್ಲ ಮಾಧ್ಯಮ ವಿಭಾಗದ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

ಗುಂಡ್ಲುಪೇಟೆ ಪುರಸಭೆಯ ಮುಖ್ಯಾಧಿಕಾರಿ ಶರವಣ ಅವರು ಕಾರ್ಯಕ್ರಮವನ್ನು ಶ್ಲಾಘಿಸಿ, ವಿದ್ಯಾರ್ಥಿಗಳ ಸಾಮಾಜಿಕ ಕಳಕಳಿ ಹಾಗೂ ಜಾಗೃತಿ ಕಾರ್ಯವನ್ನು ಪ್ರಶಂಸಿಸಿದರು. ಜಾಥಾ ಯಶಸ್ವಿಯಾಗಿ ನಡೆಯಲು ಪೊಲೀಸ್ ಇಲಾಖೆಯ ಸಿಬ್ಬಂದಿ ಅಗತ್ಯ ಭದ್ರತೆ ಮತ್ತು ಸಹಕಾರ ಒದಗಿಸಿದರು. ಸಮಾಜದಲ್ಲಿ ಮಾನವ ಕಳ್ಳಸಾಗಣೆ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮ ಸಾರ್ವಜನಿಕರಲ್ಲಿ ಉತ್ತಮ ಅರಿವು ಮೂಡಿಸುವಲ್ಲಿ ಯಶಸ್ವಿಯಾಯಿತು.

# ನಾಳೆ ಕನ್ನಡ, ಸಂಸ್ಕೃತಿ ಉತ್ಸವ

ಮೈಸೂರು: ಟಿ. ನರಸೀಪುರ ತಾಲ್ಲೂಕಿನ ಯಾಚೇನಹಳ್ಳಿಯ ನೆನ್ನವ್ವ ಸಾಂಸ್ಕೃತಿಕ ಕಲಾ ತಂಡದ ವತಿಯಿಂದ ಆ. 1 ರ ಬೆಳಗ್ಗೆ 10ಕ್ಕೆ ಬಲ್ಲಾಳ್ ವೃತ್ತ ಬಳಿಯ ಪಂಚವಟಿ ಗಾರ್ಡೇನಿಯಾ ಹೋಟೆಲ್‌ನಲ್ಲಿ ಕನ್ನಡ ಮತ್ತು ಸಂಸ್ಕೃತಿ ಉತ್ಸವ ಹಾಗೂ ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯದರ್ಶಿ ಜಿ.ಎಚ್. ಸಂಕಪ್ಪ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಉದ್ಘಾಟಿಸುವರು, ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸುವರು, ವೈ.ಎನ್. ಶಂಕರೇಗೌಡ, ನಾಗರಾಜ್ ವಿ. ಭೈರಿ, ನಿರ್ಮಲಾ ಮಠಪತಿ, ಜಯಪ್ಪ ಹೊನ್ನಾಳಿ, ಮ.ನ. ಲತಾ ಮೋಹನ್ ಇನ್ನಿತರರು ವೇದಿಕೆಯಲ್ಲಿರುವರು. ಕಾರ್ಯಕ್ರಮದಲ್ಲಿ ಕಂಸಾಳೆ, ಕಹಳೆ, ವೀರಗಾಸೆ, ಮಂಗಳವಾದ್ಯ, ನಾಡಗೀತೆ, ನಾಡು ನುಡಿ ನೃತ್ಯ, ಜಾನಪದ ನೃತ್ಯ ಮೊದಲಾದವು ಇರಲಿವೆ. ಈ ವೇಳೆ ಮಹದೇವು ಅವರಿಗೆ ಕನ್ನಡ ಕಣ್ಮಣಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

ಪ್ರಭಾಶಾಸ್ತ್ರಿ ಜೋಶ್ಯುಲ, ನಾ. ಗಂಗಾಧರಪ್ಪ, ಸುಮಾ ಪಂಚವಳ್ಳಿ, ಸಲ್ಮಾಬಾನು, ಸಿ. ಚೌಡಯ್ಯ, ಡಾ.ಸಿ.ವಿ. ರವೀಂದ್ರ, ಎನ್. ವೈರಮುಡಿ, ನರಸಿಂಹಾಚಾರ ಇದ್ದರು.




**ಕರವೇ ನಾರಾಯಣ ಬಣದ**

# ಸಿಡಬ್ಲ್ಯೂಆರ್‌ಸಿ ಆದೇಶ ಖಂಡಿಸಿ ಪ್ರತಿಭಟನೆ



ಚಾಮರಾಜನಗರ, ಕಾವೇರಿ ನೀರು ನಿಯಂತ್ರಣ ಸಮಿತಿಯು ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಆದೇಶಿಸಿರುವ ಕ್ರಮ ವನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಟಿ.ಎ.ನಾರಾಯಣಗೌಡ ಬಣದ ಜಿಲ್ಲಾ ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀಚಾಮರಾಜೇಶ್ವರ ಉದ್ಯಾನ ದ ಮುಂಭಾಗದಲ್ಲಿ ಜಿಲ್ಲಾಧ್ಯಕ್ಷ ಎಚ್.ಎನ್.ಮಂಜೇಶ್ ಅವರ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆಯಲ್ಲಿ ಭುವನೇಶ್ವರಿ ವೃತ್ತಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ, ಕಾವೇರಿ ನೀರು ನಿಯಂತ್ರಣ ಸಮಿತಿ ವಿರುದ್ದ, ತಮಿಳುನಾಡು ಸರ್ಕಾರ ವಿರುದ್ದ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಜಿಲ್ಲಾಧ್ಯಕ್ಷ ಎಚ್.ಎನ್.ಮಂಜೇಶ್ ಮಾತನಾಡಿ, ತಮಿಳುನಾಡಿಗೆ ನಿತ್ಯ 3500 ಕ್ಯೂಸೆಕ್ಸ್ ಕಾವೇರಿ ನೀರನ್ನು ಬಿಡುಗಡೆ ಮಾಡುವಂತೆ ಸಿ.ಡಬ್ಲ್ಯೂ.ಆರ್.ಸಿ. ಹೊರಡಿಸಿರುವ ಆದೇಶವನ್ನು ಮರುಪರಿಶೀಲಿಸಿ ರಾಜ್ಯದ ಹಿತಾಸಕ್ತಿಯನ್ನು ಕಾಪಾಡಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಕಾವೇರಿ ಜಲ ನಿಯಂತ್ರಣ ಸಮಿತಿಯ ತಮಿಳುನಾಡು ರಾಜ್ಯಕ್ಕೆ ನಿತ್ಯ 3500 ಕ್ಯೂಸೆಕ್ಸ್ ನೀರನ್ನು ಬಿಡುಗಡೆ ಮಾಡುವಂತೆ ನೀಡಿರುವ ಆದೇಶವು ಕರ್ನಾಟಕ ರಾಜ್ಯದ ಹಿತಾಸಕ್ತಿ, ರೈತರ ಕೃಷಿ ಚಟುವಟಿಕೆಗಳು ಹಾಗೂ ಭವಿಷ್ಯದ ಕುಡಿಯುವ ನೀರಿನ ಅಗತ್ಯತೆಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಸಾಧ್ಯತೆ ಇದೆ. ಕರ್ನಾಟಕ ರಾಜ್ಯದ ಜಲಾಶಯಗಳಲ್ಲಿನ ನೀರಿನ ಸಂಗ್ರಹಣೆ, ರಾಜ್ಯದ ವಿವಿಧ ಭಾಗಗಳಲ್ಲಿನ ಕೃಷಿ ಚಟುವಟಿಕೆಗಳು, ರೈತರ ಅವಲಂಬನೆ, ಸಾರ್ವಜನಿಕರ ಕುಡಿಯುವ ನೀರಿನ ಅಗತ್ಯತೆಗ ಳನ್ನು ಪರಿಗಣಿಸಿ ರಾಜ್ಯದ ಹಿತಾಸಕ್ತಿಯನ್ನು ಪ್ರಥಮ ಆದ್ಯತೆಯಾಗಿ ಪರಿಗಣಿಸುವುದು ಅತ್ಯಗತ್ಯವಾಗಿದೆ. ರಾಜ್ಯದ ರೈತ ಸಮುದಾಯವು ಈಗಾಗಲೇ ಅನೇಕ ಸವಾಲುಗಳನ್ನು ಎದುರಿ ಸುತ್ತಿರುವ ಸಂದರ್ಭದಲ್ಲಿ ಇಂತಹ ಆದೇಶಗಳು ರೈತರಲ್ಲಿ ಹಾಗೂ ಸಾರ್ವಜನಿಕರಲ್ಲಿ ಆತಂಕವನ್ನು ಉಂಟುಮಾಡಿವೆ. ಅಗಾಗಿ ರಾಜ್ಯ ಸರ್ಕಾರ ತಮಿಳುನಾಡಿಗೆ ಕಾವೇರಿ ನೀರು ಹರಿಸಬಾರದು ಎಂದು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಉಪಾಧ್ಯಕ್ಷ ರಾಜೇಂದ್ರ ನಾಯಕ, ಮಹಿಳಾ ಜಿಲ್ಲಾಧ್ಯಕ್ಷೆ ಭಾಗ್ಯಲಕ್ಷ್ಮೀ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗಳಾದ ಹೇಮಂತ್ ನಾಗ'ರಾಜು, ಸಹ ಕಾರ್ಯದರ್ಶಿ ಅರ್ಜುನ್, ಚನ್ನಪ್ಪ, ತಾಲೂಕು ಅಧ್ಯಕ್ಷ ರಾದ ರಮೇಶ್ ನಾಯಕ, ಮಹಾದೇ ವಸ್ವಾಮಿ, ಸಂತೋಷ, ಪಾಷ,

ಯುವ ಘಟಕದ ಅಧ್ಯಕ್ಷ ಮೋನಿಷ, ಮಹಿಳಾ ತಾಲೂಕು ಅಧ್ಯಕ್ಷೆ ಸುಮಾ, ತಾಲೂಕು ಉಪಾಧ್ಯಕ್ಷ ಶ್ರೀಕಾಂತ್ ಇತರರು ಭಾಗವಹಿಸಿದ್ದರು.

## ಮಂಡ್ಯ ಜಿಲ್ಲಾ ಮಟ್ಟದ ಮಹಿಳಾ ವೈಜ್ಞಾನಿಕ ಜಾಗೃತಿ ಸಮಾವೇಶ-2026

# ವಿಜ್ಞಾನ,ಶಿಕ್ಷಣ ಮತ್ತು ಮಾನವೀಯತೆಯಿಂದಲೇ ಸಮಾಜದ ಬೆಳವಣಿಗೆ




**ಮಂಡ್ಯ:**"ಪ್ರಪಂಚ ಬೆಳೆಯುತ್ತಿರುವುದು ವಿಜ್ಞಾನ ಮತ್ತು ತಂತ್ರಜ್ಞಾನದಿಂದ. ಆದರೆ ಅದನ್ನು ಮಾನವೀಯತೆಯೊಂದಿಗೆ ಬೆಸೆದಾಗ ಮಾತ್ರ ನಿಜವಾದ ಸಮಾಜ ನಿರ್ಮಾಣವಾಗುತ್ತದೆ" ಎಂದು ಪದ್ಮಶ್ರೀ ಪುರಸ್ಕೃತೆ ಡಾ.ವಿಜಯಲಕ್ಷ್ಮಿ ದೇಶಮಾನೆ ಅಭಿಪ್ರಾಯಪಟ್ಟರು.

ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಮಂಡ್ಯ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಮಂಡ್ಯ ಜಿಲ್ಲಾ ಮಟ್ಟದ ಮಹಿಳಾ ವೈಜ್ಞಾನಿಕ ಜಾಗೃತಿ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿಯವರು ಪ್ರತಿದಿನ ವಿಜ್ಞಾನಕ್ಕೆ ಒತ್ತು ನೀಡುತ್ತಿದ್ದಾರೆ. ವಿಜ್ಞಾನಿಗಳು ಮುಂದೆ ಬರಬೇಕು ಎನ್ನುವುದು ಅವರ ಕನಸು ಎಂದು ಹೇಳಿದ ಡಾ. ದೇಶಮಾನೆ, ರಾಜಸ್ಥಾನದ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಇನ್‌ಫರ್ಮೇಷನ್ ಟೆಕ್ನಾಲಜಿ ಜವಾಬ್ದಾರಿಯನ್ನು ಕೇಂದ್ರ ಸರ್ಕಾರ ನೀಡಿದೆ. ಅಲ್ಲಿ ವಿಜ್ಞಾನದ ಸಂಶೋಧನೆಗಳು ನಡೆಯುತ್ತಿವೆ ಎಂದು ಮಾಹಿತಿ ನೀಡಿದರು. ತಮಗೆ ಪದ್ಮಶ್ರೀ ದೊರೆಯಲು ಕಾರಣರಾದ ಪ್ರಧಾನಿಯವರಿಗೆ ಕೃತಜ್ಞತೆ ತಿಳಿಸಿದರು. ಪುರುಷ-ಮಹಿಳೆ ಇಬ್ಬರೂ ಮುಖ್ಯ

ಸಮಾಜ ನಿರ್ಮಾಣದ ಬಗ್ಗೆ ಮಾತನಾಡಿದ ಅವರು, "ಬರಿ ಹೆಣ್ಣು ಮಕ್ಕಳಿಗೆ ಮಾತ್ರ ಜವಾಬ್ದಾರಿ ಅಲ್ಲ. ಪುರುಷರು ಮತ್ತು ಮಹಿಳೆಯರಿಬ್ಬರ ಪಾಲ್ಗೊಳ್ಳುವಿಕೆಯೂ ಅತ್ಯಂತ ಮುಖ್ಯ. ಇಬ್ಬರು ಸೇರಿದಾಗಲೇ ಉತ್ತಮ ಸಮಾಜ ನಿರ್ಮಾಣವಾಗುವುದು" ಎಂದು ಅಭಿಪ್ರಾಯಪಟ್ಟರು.

"ದೇವರು ಕೊಟ್ಟಿರುವ ಮಾನವ ಜನ್ಮವನ್ನು ಸುಮ್ಮನೆ ಖಾಲಿ ಮಾಡಿಕೊಂಡು ಹೋಗಬಾರದು. ಏನಾದರೂ ಸಾಧನೆ ಮಾಡಿಕೊಂಡು ಹೋಗಬೇಕು. ಕೋವಿಡ್‌ನಿಂದ ಬದುಕುಳಿದಿದ್ದೇವೆ ಎಂದರೆ ದೇವರು ನಮಗೆ ಜೀವನದಲ್ಲಿ ಆಸಕ್ತಿಯಿಂದ ಏನಾದರೂ ಮಾಡಬೇಕೆಂದು ಬಯಸಿರಬೇಕು" ಎಂದು ಯುವಕರಿಗೆ ಕರೆ ನೀಡಿದರು.

ತಾವು ಐದನೇ ತರಗತಿಯಲ್ಲಿದ್ದಾಗಲೇ ಅಪ್ಪ ನಾನು ಸರ್ಜನ್ ಆಗುವ ಕನಸು ಕಂಡಿದ್ದರು. ಮನೆಯಲ್ಲಿ ಮೂಲಭೂತ ಸೌಲಭ್ಯಗಳೇ ಇಲ್ಲದಿದ್ದರೂ ಆ ಕನಸೇ ತನ್ನನ್ನು ಈ ಸ್ಥಾನಕ್ಕೆ ತಂದಿದೆ ಎಂದು ತಮ್ಮ ಜೀವನಾನುಭವ ಹಂಚಿಕೊಂಡರು.

ಪರಿಷತ್ತಿನ ಜಿಲ್ಲಾಧ್ಯಕ್ಷ ಚಿಕ್ಕರಸಿನಕೆರೆ ಶಿವಲಿಂಗಯ್ಯ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮ ಆರಂಭಕ್ಕೂ ಮುನ್ನ ಗಾಯಕ ಹುರುಗಲವಾಡಿ ರಾಮಯ್ಯ ಮತ್ತು ತಂಡದವರು ವೈಚಾರಿಕ ಗೀತಗಾಯನ ನಡೆಸಿಕೊಟ್ಟರು.ರಾಷ್ಟ್ರಕವಿ ಕುವೆಂಪು ಮತ್ತು ವಿಚಾರವಾದಿ ಹೆಚ್.ನರಸಿಂಹಯ್ಯನವರ ಚಿತ್ರಪಟಗಳಿಗೆ ಗಣ್ಯರು ಪುಷ್ಪಾರ್ಚನೆ ಸಲ್ಲಿಸಿದರಲ್ಲದೇ,ರಾಸಾಯನಿಕ ಪ್ರಕ್ರಿಯೆ ಮೂಲಕ ದೀಪ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿದರು.

### ಮೌಢ್ಯ ಕೆಸರು-ವಿಚಾರ ಎಳನೀರು:ಎಂ.ಸಿ.ಬಸವರಾಜು

ಪರಿಷತ್ತಿನ ಗೌರವ ಮಾರ್ಗದರ್ಶಕರಾದ ಎಂ.ಸಿ. ಬಸವರಾಜು ಮಾತನಾಡಿ ಪ್ರಪಂಚ ಬೆಳೆಯುತ್ತಿರುವುದು ಜ್ಞಾನ ಮತ್ತು ವಿಜ್ಞಾನದಿಂದ. ಉಳಿದಿರುವುದು ಪ್ರೀತಿಯಿಂದ ಎಂದು ಅಭಿಪ್ರಾಯಪಟ್ಟರು. "ಮೌಢ್ಯ ಕೆಸರು, ವಿಚಾರ ಎಳನೀರು. ತಮಗೆ ಎಳನೀರು ಬೇಕೋ ಕೆಸರು ಬೇಕೋ? ಎಂದು ವಿದ್ಯಾರ್ಥಿಗಳನ್ನು ಅವರು ಪ್ರಶ್ನಿಸಿದರು. ಕುವೆಂಪು ಅವರ ಒಂದು ಸಾಲನ್ನು ಉಲ್ಲೇಖಿಸಿದ ಅವರು,"ಮತದಿಂದ ದೂರಾಗು, ಆಧ್ಯಾತ್ಮಕ್ಕೆ ಶರಣಾಗು, ಮೌಢ್ಯಕ್ಕೆ ಮರೆಯಾಗು, ವಿಜ್ಞಾನಮತಿಯಾಗು" ಎಂದು ಹೇಳಿದರು. ಇಂದು ನಾವೆಲ್ಲರೂ ವಿಜ್ಞಾನಮತಿಗಳಾಗಬೇಕು ಎಂಬುದು ತಮ್ಮ ಕಳಕಳಿಯಾಗಿದೆ ಎಂದು ಅವರು ತಿಳಿಸಿದರು. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದ ವಿಧಿಯೊಂದನ್ನು ಉಲ್ಲೇಖಿಸಿದ ಅವರು ಪ್ರತಿಯೊಬ್ಬ ಭಾರತೀಯನೂ ಕೂಡ ವಿಚಾರವಂತನಾಗಿ, ವೈಜ್ಞಾನಿಕ ಮಾರ್ಗದಲ್ಲಿ ಸುಧಾರಣೆಯ ಮೂಲಕ ಮುಂದೆ ಹೋಗಬೇಕು ಎಂದು ಸ್ಪಷ್ಟವಾಗಿ ಹೇಳಿದೆ.ಆದರೆ ದುರಾದೃಷ್ಟವಶಾತ್ ಇನ್ನೂ ಅದು ಸಾಧ್ಯವಾಗಿಲ್ಲ. ಅಧಿಕಾರಸ್ಥರು ಆ ನಿಟ್ಟಿನಲ್ಲಿ ಪ್ರಯತ್ನ ಮಾಡುತ್ತಿಲ್ಲ. ಆದ್ದರಿಂದ ನಾವೇ ಅದನ್ನು ಬೆಳೆಸಿಕೊಳ್ಳಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಪರಿಷತ್ತಿನ ಗೌರವ ಮಾರ್ಗದರ್ಶಕಿ ಸುನಂದ ಜಯರಾಂ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮುಖ್ಯ ಅತಿಥಿಗಳಾಗಿ ಮೂಡಾ ಅಧ್ಯಕ್ಷ ಬಿ.ಪಿ. ಪ್ರಕಾಶ್, ಸಾಮಾಜಿಕ ಪರಿವರ್ತನಾ ಹೋರಾಟಗಾರ ಹೆಚ್. ಕೆ.ವಿವೇಕಾನಂದ,ಕಲಬುರ್ಗಿಯ ಸಾಹಿತಿ ಹಾಗೂ ಚಿಂತಕಿ ಡಾ.ಜಯದೇವಿ ಗಾಯಕ್ವಾಡ್,ಪರಿಷತ್‌ನ ಗೌರವಾಧ್ಯಕ್ಷೆ ವಸಂತಮ್ಮ ಪರಿಷತ್ತಿನ ಪದಾಧಿಕಾರಿಗಳಾದ ಎಂ.ವಿನಯ್ ಕುಮಾರ್, ಜಿ.ಎನ್.ಕೆಂಪರಾಜು, ದೇವರಾಜ್ ಕೊಪ್ಪ ಉಪಸ್ಥಿತರಿದ್ದರು. ಉದ್ಘಾಟನಾ ಸಮಾರಂಭದ ನಂತರ ನಡೆದ ಗೋಷ್ಠಿ 1 ರಲ್ಲಿ 'ವೈಜ್ಞಾನಿಕ ಚಿಂತನೆಯಲ್ಲಿ ಮಹಿಳೆಯ ಪಾತ್ರ 'ಕುರಿತು ಸಾಹಿತಿ ಡಾ.ಜಯದೇವಿ ಗಾಯಕ್ವಾಡ್ ವಿಷಯ ಮಂಡನೆ ಮಾಡಿದರು. ರಾಜ್ಯ ಘಟಕದ ನಿರ್ದೇಶಕರಾದ ಪುಷ್ಪಲತಾ ಅಧ್ಯಕ್ಷತೆ ವಹಿಸಿದ್ದರು. ಗೋಷ್ಠಿ-2 ರಲ್ಲಿ 'ಮೌಢ್ಯಾಚರಣೆ ಮತ್ತು ಸಾಮಾಜಿಕ ದುಷ್ಪರಿಣಾಮಗಳು' ಕುರಿತು ಸಾಮಾಜಿಕ ಪರಿವರ್ತನಾ ಹೋರಾಟಗಾರ ಹೆಚ್. ಕೆ.ವಿವೇಕಾನಂದ ವಿಷಯ ಮಂಡನೆ ಮಾಡಿದರು. ಪರಿಷತ್‌ನ ಗೌರವಾಧ್ಯಕ್ಷೆ ವಸಂತಮ್ಮ ಅಧ್ಯಕ್ಷತೆ ವಹಿಸಿದ್ದರು.

ಪರಿಷತ್ತಿನ ಜಿಲ್ಲಾಧ್ಯಕ್ಷ ಚಿಕ್ಕರಸಿನಕೆರೆ ಶಿವಲಿಂಗಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಮಾರೋಪ ಸಮಾರಂಭದಲ್ಲಿ ಮಳವಳ್ಳಿ ಭಗವಾನ್ ಬುದ್ಧ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಯಮದೂರು ಸಿದ್ಧರಾಜು ಸಮಾರೋಪ ಭಾಷಣ ಮಾಡಿದರು.

# ನಕಲಿ ಅಂಗವಿಕಲ ಪ್ರಮಾಣ ಪತ್ರ ನೀಡಿ ಗ್ರಾಮ ಲೆಕ್ಕಾಧಿಕಾರಿ ಹುದ್ದೆ ಪಡೆದವರ ವಜಾಕ್ಕೆ ಆಗ್ರಹ




**ಮಂಡ್ಯ:** ನಕಲಿ ಅಂಕಪಟ್ಟಿ ಹಾಗೂ ನಕಲಿ ಅಂಗವಿಕಲರ ಪ್ರಮಾಣ ಪತ್ರ ನೀಡಿ ಗ್ರಾಮ ಲೆಕ್ಕಾಧಿಕಾರಿ ಹುದ್ದೆ ಪಡೆದವರುನ್ನು ಸೇವೆಯಿಂದ ವಜಾಗೊಳಿಸುವಂತೆ ಕರ್ನಾಟಕ ಸಂವಿಧಾನ ಸೇನೆಯ ರಾಜ್ಯಾಧ್ಯಕ್ಷ ಎಚ್. ಎನ್.ನರಸಿಂಹಮೂರ್ತಿ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಗವೈಕಲ್ಯತೆ ಇಲ್ಲದಿದ್ದರೂ ದಾವಣಗೆರೆಯ ಚಿಗಟೇರಿ ಜಿಲ್ಲಾಸ್ಪತ್ರೆಯಿಂದ ಪ್ರದೀಪ್, ಗಣೇಶ, ಪ್ರಿಯ, ಸಿದ್ದಪ್ಪ, ಅರ್ಚನಾ ಮತ್ತು ರಘು ವರು ನಕಲಿ ಅಂಗವಿಕಲರ ಪ್ರಮಾಣ ಪತ್ರ ಪಡೆದಿದ್ದಾರೆ. ಇದನ್ನು ನೀಡಿ ನಾಗಮಂಗಲ ತಾಲೂಕಿನ ಆಡಳಿತ ಸೌಧದಲ್ಲಿ 2011-12ನೇ ಸಾಲಿನಲ್ಲಿ ಗ್ರಾಮ ಲೆಕ್ಕಾಧಿಕಾರಿ ಹುದ್ದೆ ಪಡೆಯಲಾಗಿದೆ ಎಂದು ಎಂದು ಹೇಳಿದರು.

ಇದನ್ನು 2017ರಿಂದಲೇ ಪ್ರಶ್ನಿಸಲಾಗಿದ್ದು, ಅಂದಿನ ಜಿಲ್ಲಾಧಿಕಾರಿಗಳು ಇದನ್ನು ಪರಿಶೀಲಿಸುವಂತೆ ಮಿಮ್ಸ್‌ಗೆ ಸೂಚನೆ ನೀಡಿದ್ದರು. ಪರಿಶೀಲನೆ ನಡೆಸಲಾಗಿ ಇವರು ಅಂಗವಿಕಲರಲ್ಲ ಎಂಬ ಸತ್ಯ ಹೊರ ಬಂದಿದೆ. ಜಿಲ್ಲಾಧಿಕಾರಿಗಳು 3 ವರ್ಷಗಳ ಹಿಂದೆಯೇ ದೋಷಾರೋಪ ಸಲ್ಲಿಸಿದ್ದರೂ ಕಂದಾಯ ಇಲಾಖೆಯ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ ಎಂದು ಆರೋಪಿಸಿದರು.

ಕಳೆದ 15 ವರ್ಷಗಳಿಂದ ಸರಕಾರಕ್ಕೆ 8ರಿಂದ 10 ಕೋಟಿ ರೂ. ನಷ್ಟವಾಗಿದ್ದು, ವಸೂಲಿ ಮಾಡಬೇಕು. ಕೂಡಲೇ ನಕಲಿ ಗ್ರಾಮ ಲೆಕ್ಕಾಧಿಕಾರಿಗಳ ವಿರುದ್ಧ ಪೊಲೀಸ್ ದೂರು ನೀಡಿ ಎಫ್‌ಐಆರ್ ದಾಖಲಿಸಿ ಬಂಧಿಸಬೇಕು. ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ರಚಿಸಿ ತನಿಕೆ ನಡಸಬೇಕು. ನಕಲಿ ಪ್ರಮಾಣ ಪತ್ರ ನೀಡಿದ ದಾವಣಗೆರೆ ಜಿಲ್ಲಾಸ್ಪತ್ರೆಯ ಆಗಿನ ವೈದ್ಯರ ಮೇಲೆ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಜಿಲ್ಲಾಡಳಿತ ಹಾಗೂ ಸರಕಾರ 15 ದಿನಗಳ ಒಳಗಾಗಿ ಕ್ರಮ ವಹಿಸದೇ ಹೋದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟಾವಧಿ ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಗೋಷ್ಠಿಯಲ್ಲಿ ಸಂಘಟನೆಯ ರಾಜ್ಯ ಸಂಯೋಜಕ ಸಿದ್ದರಾಮು, ರಾಜ್ಯ ಕಾರ್ಯದರ್ಶಿ ಕೆ.ಸಿ.ಲೋಕೇಶ್, ರಾಜ್ಯ ಸಂಪನ್ಮೂಲ ವ್ಯಕ್ತಿ ಲೋಕೇಶ್, ಜಿಲ್ಲಾಧ್ಯಕ್ಷ ಜಿ.ಕೆ.ಕುಮಾರ್, ಪ್ರಧಾನ ಕಾರ್ಯದರ್ಶಿ ಎಚ್.ಡಿ.ಪ್ರದೀಪ್ ಇದ್ದರು.

# ತಮಿಳುನಾಡಿಗೆ ಕಾವೇರಿ ನೀರು: ರೈತರ ಪ್ರತಿಭಟನೆ

- ಬೆಂಗಳೂರು ಮೈಸೂರು ರಸ್ತೆ ತಡೆ ನಡೆಸಿ ಪ್ರತಿಭಟನೆ
- ಸಿ.ಡಬ್ಲ್ಯು.ಆರ್.ಸಿ ಆದೇಶಕ್ಕೆ ತೀವ್ರ ಅಸಮಾಧಾನ
- ರಾಜ್ಯ ಮತ್ತು ತಮಿಳುನಾಡು ಸಿಎಂಗಳ ಸಭೆಗೆ ಅವಕಾಶ ನೀಡದಿರುವ ಎಚ್ಚರಿಕೆ

**ರಾಮನಗರ:** ತಮಿಳುನಾಡಿಗೆ ಕಾವೇರಿ ನದಿಯಿಂದ ನೀರು ಬಿಡುವಂತೆ ಸಿ.ಡಬ್ಲು. ಆರ್.ಸಿ ಆದೇಶ ನೀಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘದ ಆಶ್ರಯದಲ್ಲಿ ರೈತರು ನಗರದಲ್ಲಿ ಬೆಂಗಳೂರು ಮೈಸೂರು ರಸ್ತೆ ತಡೆ ಮಾಡಿ ಪ್ರತಿಭಟನೆ ನಡೆಸಿದರು.

ನಗರದ ಐಜೂರು ವೃತ್ತದಲ್ಲಿ ಜಮಾಯಿಸಿದ ರೈತರು, ಈ ಆದೇಶ ಅವೈಜ್ಞಾನಿಕ, ರಾಜ್ಯದ ಹಿತಕ್ಕೆ ಮಾರಕವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಐಜೂರು ವೃತ್ತದಲ್ಲಿ ಬೆಂಗಳೂರು ಮೈಸೂರು ಹೆದ್ದಾರಿ ರಸ್ತೆಯನ್ನು ಸುಮಾರು 20 ನಿಮಿಷಗಳ ಕಾಲ ರಸ್ತೆ ತಡೆ ನಡೆಸಿದ ರೈತರನ್ನು ಪೊಲೀಸರು ಮನವೊಲಿಸಿ ರಸ್ತೆ ಮಧ್ಯ ನಿಂತು ಪ್ರತಿಭಟನೆ ಮಾಡಲು ಯಶಸ್ವಿಯಾದರು. ತದ ನಂತರ ವಾಹನ ಸಂಚಾರ ಸುಗಮವಾಯಿತು.

**ತಮಿಳುನಾಡು ಸಿಎಂ ಸಭೆ ನಡೆಯಲು ಬಿಡೋಲ್ಲ - ಕುಮಾರಸ್ವಾಮಿ**

ಪ್ರತಿಭಟನೆಯ ವೇಳೆ ರೈತ ಸಂಘದ ಮುಖಂಡ ಕುಮಾರಸ್ವಾಮಿ ಮಾತನಾಡಿ, ರಾಜ್ಯ ಸರ್ಕಾರ ತಮಿಳುನಾಡಿಗೆ ಕಾವೇರಿ ನದಿಯಿಂದ ನೀರು ಹರಿಸಬಾರದು. ಹಾಗೊಮ್ಮೆ ತಮ್ಮ ಆಗ್ರಹಕ್ಕೆ ಮಣಿಯದಿದ್ದರೆ, ಇದೇ ಆಗಸ್ಟ್ 3 ರಂದು ತಮಿಳುನಾಡು ಮುಖ್ಯಮಂತ್ರಿಗಳನ್ನು ರಾಜ್ಯದೊಳಗೆ ಪ್ರವೇಶಿಸಲು ಬಿಡುವುದಿಲ್ಲ. ಎರಡೂ ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ನಡೆಯಲು ಬಿಡುವುದಿಲ್ಲ ಎಂದು ಎಚ್ಚರಿಸಿದರು. ತಮಿಳುನಾಡಿಗೆ ನೀರು ಹರಿಸಿದರೆ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದರು.

ಈಗಾಗಲೇ ಕರ್ನಾಟಕದ ಮಂಡ್ಯ, ಮೈಸೂರು, ಚಾಮರಾಜನಗರ, ರಾಮನಗರ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಉಂಟಾಗಿದೆ. ಕೆರೆಗಳು, ಕೊಳವೆ ಬಾವಿಗಳು ಬತ್ತಿದ್ದು, ಬೆಳೆಗಳು ಒಣಗುತ್ತಿವೆ. ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಸಂಗ್ರಹ ಒಂದು ಬೆಳೆಗೂ ನೀರು ಸಾಕಾಗುವುದಿಲ್ಲ. ಹೀಗಿರುವಾಗ ತಮಿಳುನಾಡಿಗೆ ರಾಜ್ಯದಿಂದ ನೀರು ಬಿಡುವಂತೆ ಹೇಳುವುದು ರೈತರ ಬದುಕಿನೊಂದಿಗೆ ಚೆಲ್ಲಾಟವಾಡಿದಂತಾಗುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ರಾಜ್ಯದ ಪಾಲಿನ ಲೂಟಿ - ಕೆ.ಮಲ್ಲಯ್ಯ**

ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ಮಲ್ಲಯ್ಯ ಮಾತನಾಡಿ ತಮಿಳುನಾಡು ರಾಜ್ಯ ಕಾವೇರಿ ನೀರನ್ನು ಕೃಷಿಗೆ ಮಾತ್ರವಲ್ಲದೆ ಉದ್ಯಮಗಳಿಗೂ ಬಳಸಿಕೊಂಡು ಕರ್ನಾಟಕದ ಪಾಲನ್ನು ಲೂಟಿ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಿಡಬ್ಲ್ಯುಆರ್‌ಸಿ ಆದೇಶದಲ್ಲಿ ಕರ್ನಾಟಕದ ಕುಡಿಯುವ ನೀರು, ಜಾನುವಾರುಗಳ ನೀರು, ಪರಿಸರದ ಅಗತ್ಯವನ್ನು ಪರಿಗಣಿಸಿಯೇ ಇಲ್ಲ. ನ್ಯಾಯಾಧಿಕರಣದ ತೀರ್ಪಿನಲ್ಲಿ ಕರ್ನಾಟಕದ ಮೊದಲು ಕುಡಿಯುವ ನೀರು ಎಂಬ ಸ್ಪಷ್ಟ ನಿಬಂಧನೆ ಇದ್ದರೂ ಅದನ್ನು ಗಾಳಿಗೆ ತೂರಲಾಗಿದೆ ಎಂದು ದೂರಿದರು.

ಈ ಅವೈಜ್ಞಾನಿಕ ಆದೇಶವನ್ನು ಕರ್ನಾಟಕ ಸರ್ಕಾರ ತಕ್ಷಣ ವಿರೋಧಿಸಿ, ಸುಪ್ರೀಂಕೋರ್ಟ್‌ನ ಮೊರೆ ಹೋಗಬೇಕು ಎಂದು ಸಲಹೆ ನೀಡಿದರು.

**ಕಾವೇರಿ ಉಳಿಸಿ ಚಳವಳಿ - ಚೀಲೂರು ಮುನಿರಾಜು:** ರೈತ ಸಂಘದ ಸಂಚಾಲಕ ಚೀಲೂರು ಮುನಿರಾಜು ಮಾತನಾಡಿ ಅಗತ್ಯ ಬಿದ್ದರೆ ಕಾವೇರಿ ಉಳಿಸಿ ಕರ್ನಾಟಕ ಉಳಿಸಿ ಚಳವಳಿ ಮೂಲಕ ಬೃಹತ್ ಹೋರಾಟಕ್ಕೆ ರೈತ ಸಂಘ ಸಿದ್ಧವಿದೆ. ಸಿಡಬ್ಲ್ಯುಆರ್‌ಸಿ ಮತ್ತು ಕೇಂದ್ರ ಸರ್ಕಾರ ಕರ್ನಾಟಕದ ರೈತರ ಕಣ್ಣೀರಿಗೆ ಬೆಲೆ ಕೊಡದಿದ್ದರೆ ಅದರ ಪರಿಣಾಮವನ್ನು ಅನುಭವಿಸಬೇಕಾಗುತ್ತದೆ ಸರ್ಕಾರ ಕದ್ದು ಮುಚ್ಚಿ ನೀರು ಹರಿಸಿದರೆ ಸರ್ಕಾರಕ್ಕೆ ರೈತರು ತಕ್ಕ ಪಾಠ ಕಲಿಸುತ್ತಾರೆ ಮುಖ್ಯಮಂತ್ರಿಗಳು ರೈತರಿಗೆ ಬೆಳೆ ಹಾಕಬೇಡಿ ಅಂತ ಏಳ್ತಾರೆ ಯಾವುದೇ ಬರ ಪರಿಯಾರದ ಘೋಷಣೆ ಮಾಡದೆ ಈ ಹೇಳಿಕೆ ನೀಡುವುದು ಎಷ್ಟು ಸರಿ ಎಂದು ಕಿಡಿ ಕಾರಿದರು.

ರೈತ ಸಂಘದ ಮುಖಂಡರುಗಳಾದ ಚಂದ್ರಶೇಖರ್, ಕೃಷ್ಣಯ್ಯ, ತಿಮ್ಮೇಗೌಡ, ನಾಗರಾಜು, ಪುಟ್ಟಸ್ವಾಮಿ, ಶಿವಲಿಂಗಯ್ಯ, ರವಿಕುಮಾರ್, ರತ್ನಮ್ಮ, ಕುಮಾರ್, ಕುಮಾರ್, ವಿಜಯ್ ಕುಮಾರ್, ಲೋಕೇಶ್, ಜಾಲಮಂಗಲ ಕುಮಾರ್, ಪುಟ್ಟಮಾದೇಗೌಡ, ರಮ್ಯಾ ರಾಮಣ್ಣ, ಚಿಕ್ಕವೆಂಕಟಯ್ಯ, ರಾಜು, ಪ್ರಶಾಂತ್‌ಕುಮಾರ್, ರಾಜೇಂದ್ರ, ಅನಿಲ್, ರಾಮಲಿಂಗಯ್ಯ, ಮಾರುತಿ, ವೆಂಕಟೇಶ್ ಮುಂತಾದವರಿದ್ದರು.



# ಕಾವೇರಿ ವಿಷಯದಲ್ಲಿ ರಾಜಕೀಯ ಮಾಡದಂತೆ ವಿಪಕ್ಷಗಳಿಗೆ ಚಲುವರಾಯಸ್ವಾಮಿ ಸಲಹೆ

**ಬೆಂಗಳೂರು:** ಕಾವೇರಿ ನದಿ ನೀರು ನಿರ್ವಹಣಾ ಸಮಿತಿಯು (CWRC) ತಮಿಳುನಾಡಿಗೆ ಪ್ರತಿದಿನ 3,500 ಕ್ಯೂಸೆಕ್ಸ್ ನೀರು ಬಿಡುಗಡೆ ಮಾಡುವಂತೆ ನೀಡಿರುವ ಆದೇಶದ ಹಿನ್ನೆಲೆಯಲ್ಲಿ, ಮಾಜಿ ಸಚಿವ ಎನ್. ಚಲುವರಾಯಸ್ವಾಮಿ ಅವರು ತುರ್ತು ಸುದ್ದಿಗೋಷ್ಠಿ ನಡೆಸಿ ರಾಜ್ಯದ ಪ್ರಸ್ತುತ ಪರಿಸ್ಥಿತಿಯ ಕುರಿತು ಸ್ಪಷ್ಟನೆ ನೀಡಿದ್ದಾರೆ.



ಈ ವೇಳೆ ಮಾತನಾಡಿದ ಚಲುವರಾಯಸ್ವಾಮಿ ಅವರು,"ಪ್ರಸಕ್ತ ತಿಂಗಳಿನಲ್ಲಿ ಕಾವೇರಿ ಜಲಾನಯನ ಪ್ರದೇಶದಲ್ಲಿ ನಿರೀಕ್ಷಿತ ಮಳೆಯಾಗಿಲ್ಲ ಹಾಗೂ ಮುಂದೆ ಕೂಡ ಹೆಚ್ಚು ಮಳೆಯಾಗುವ ಸಾಧ್ಯತೆಗಳು ವಿರಳವಾಗಿವೆ. ನಮ್ಮ ರಾಜ್ಯದಲ್ಲಿ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಿಗೆ ಕುಡಿಯುವ ನೀರಿನ ಅಭಾವ ತೀವ್ರವಾಗಿದೆ. ಆದರೆ ತಮಿಳುನಾಡಿನಲ್ಲಿ ಈಗಾಗಲೇ ಶೇಕಡಾ 40 ರಷ್ಟು ಕುಡಿಯುವ ನೀರಿನ ಸಂಗ್ರಹವಿದ್ದು, ಅಲ್ಲಿ ಮಳೆಯಾಗುವ ಸಾಧ್ಯತೆಯೂ ಇದೆ. ಈ ಎಲ್ಲಾ ವಾಸ್ತವಾಂಶಗಳು ಹಾಗೂ ಜಲಾಶಯಗಳ ನೀರಿನ ಸಂಗ್ರಹಣೆಯ ನಿಖರ ಮಾಹಿತಿಯನ್ನು ಮುಖ್ಯಮಂತ್ರಿಗಳು ಈಗಾಗಲೇ ಕಾವೇರಿ ನದಿ ನಿಯಂತ್ರಣ ಪ್ರಾಧಿಕಾರದ ಮುಂದೆ ಸಮರ್ಥವಾಗಿ ಮಂಡಿಸಿದ್ದಾರೆ. ಈ ವಿಚಾರವಾಗಿ ಸಂಸದರು ಮತ್ತು ಕೇಂದ್ರ ಸಚಿವರೊಂದಿಗೂ ಮಾತುಕತೆ ನಡೆಸಲಾಗಿದ್ದು, ಇಂದಿನ ಸಭೆಯಲ್ಲಿ ನಮಗೆ ಸೂಕ್ತ ನ್ಯಾಯ ಸಿಗುವ ಸಂಪೂರ್ಣ ನಿರೀಕ್ಷೆಯಿದೆ," ಎಂದು ಭರವಸೆ ವ್ಯಕ್ತಪಡಿಸಿದರು.

ರಾತ್ರೋರಾತ್ರಿ ತಮಿಳುನಾಡಿಗೆ ನೀರು ಹರಿಸಲಾಗುತ್ತಿದೆ ಎಂಬ ರೈತರ ಆರೋಪವನ್ನು ತಳ್ಳಿಹಾಕಿದ ಅವರು, "ಕೆಲವರು ರೈತರಿಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆ. ನಾವೇನಾದರೂ ನೀರು ಬಿಟ್ಟಿದ್ದರೆ ಪ್ರಾಧಿಕಾರದ ಮುಂದೆ ಹೋಗಿ ಹೋರಾಡುವ ಅಗತ್ಯವಿರಲಿಲ್ಲ. ನೀರು ಬಿಡಲು ಸಾಧ್ಯವೇ ಇಲ್ಲ ಎಂಬ ಗಟ್ಟಿ ನಿಲುವಿನಿಂದಲೇ ಸರ್ಕಾರ ಹೋರಾಡುತ್ತಿದೆ," ಎಂದರು.

ಮುಂದುವರಿದು ಮಾತನಾಡುತ್ತಾ, "ಸಾಮಾನ್ಯವಾಗಿ ಎರಡೂವರೆ ಅಥವಾ ಮೂರು ವರ್ಷಕ್ಕೊಮ್ಮೆ ಇಂತಹ ಬರಗಾಲದ ಪರಿಸ್ಥಿತಿ ತಲೆದೋರುತ್ತದೆ. ದೇವೇಗೌಡರು, ಎಸ್.ಎಮ್. ಕೃಷ್ಣ, ಯಡಿಯೂರಪ್ಪ ಹಾಗೂ ಸಿದ್ದರಾಮಯ್ಯ ಅವರ ಆಡಳಿತಾವಧಿಯಲ್ಲೂ ಇಂತಹ ಕಷ್ಟಕರ ಸನ್ನಿವೇಶಗಳು ಎದುರಾಗಿದ್ದವು. ಪ್ರಸ್ತುತ ಬೆಳೆಗೆ ನೀರು ಕೊಡುವುದಕ್ಕಿಂತ ಕುಡಿಯುವ ನೀರನ್ನು ಕಾಯ್ದುಕೊಳ್ಳುವುದೇ ಆದ್ಯತೆಯಾಗಿದೆ," ಎಂದು ತಿಳಿಸಿದರು.

ಬಿಜೆಪಿ ಹಾಗೂ ವಿಪಕ್ಷಗಳ ಪ್ರತಿಭಟನೆಯ ಬಗ್ಗೆ ಪ್ರತಿಕ್ರಿಯಿಸಿದ ಅವರು, "ಈ ಸೂಕ್ಷ್ಮ ಸಂದರ್ಭದಲ್ಲಿ ವಿಪಕ್ಷಗಳು ಅನಗತ್ಯ ರಾಜಕೀಯ ಮಾಡಬಾರದು. ಬೆಂಕಿ ಬಿದ್ದಾಗ ರಾಜಕೀಯ ಲಾಭಕ್ಕೆ ಯತ್ನಿಸದೆ, ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಸರ್ಕಾರಕ್ಕೆ ಕೈಜೋಡಿಸಬೇಕು. ವಾಸ್ತವವಾಗಿ ಕೇಂದ್ರ ಸರ್ಕಾರವೇ ಮುಂದೆ ನಿಂತು ಈ ವಿವಾದದಲ್ಲಿ ಮಧ್ಯಸ್ಥಿಕೆ ವಹಿಸಬೇಕಿತ್ತು. ಮುಖ್ಯಮಂತ್ರಿಗಳು ಈಗಾಗಲೇ ಈ ವಿಷಯವನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸುತ್ತಿದ್ದು, ಆಯೋಜಿಸಲಾಗುವ ಸರ್ವಪಕ್ಷ ಸಭೆಯಲ್ಲಿ ವಿಪಕ್ಷಗಳು ಉತ್ತಮ ಸಲಹೆಗಳನ್ನು ನೀಡಲಿವೆ ಎಂಬ ನಂಬಿಕೆ ಇದೆ. ಜೊತೆಗೆ, ತಮಿಳುನಾಡಿನ ಮುಖ್ಯಮಂತ್ರಿಗಳೂ ಕೂಡ ಮಾತುಕತೆಗೆ ಒಪ್ಪಿಗೆ ಸೂಚಿಸಿದ್ದು, ಆಗಸ್ಟ್ 3 ರಂದು ವಿಧಾನಸೌಧಕ್ಕೆ ಆಗಮಿಸುತ್ತಿದ್ದಾರೆ. ಹೀಗಾಗಿ, ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ತಾಳ್ಮೆಯಿಂದ ಸರ್ಕಾರದೊಂದಿಗೆ ಸಹಕರಿಸಬೇಕು," ಎಂದು ಚಲುವರಾಯಸ್ವಾಮಿ ಅವರು ಮನವಿ ಮಾಡಿದರು.

ಮಂಡ್ಯ ಜಿಲ್ಲೆಯ ಶಾಸಕರಾದ ಉದಯ್ ಕೆ.ಎಮ್., ರವಿ ಗಣಿಗ ಹಾಗೂ ಎಂಎಲ್‌ಸಿ ದಿನೇಶ್ ಗೂಳಿಗೌಡ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಮೈಸೂರಲ್ಲಿ ಸಂಭ್ರಮದ ಗುರುಪೂರ್ಣಿಮಾ

**ಮೈಸೂರು:** ಜಾಥಾ, ಧಾರ್ಮಿಕ ಪ್ರವಚನ, ವಿಶೇಷ ಪ್ರಾರ್ಥನೆ ಹೀಗೆ ಸಾಂಸ್ಕೃತಿನ ನಗರಿ ಮೈಸೂರಿನಾದ್ಯಂತ ಭಕ್ತ ಭಾವದ ಗುರು ಪೂರ್ಣಿಮಾ ಆಚರಣೆ ನಡೆಯಿತು.

ನಗರದ ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಶ್ರೀ ದತ್ತವಿಜಯಾನಂದ ತೀರ್ಥ ಸ್ವಾಮೀಜಿಯವರ 23ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ ಪ್ರಾರಂಭವಾಯಿತು. ವ್ಯಾಸ ಪೂರ್ಣಿಮೆ ಅಂಗವಾಗಿ ಗುರು ದತ್ತಾತ್ರೇಯ ಸ್ವಾಮಿ ಹಾಗೂ ವ್ಯಾಸರು, ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಗುರುಗಳ ಮಾತೃಶ್ರೀ ಮತ್ತು ಶಂಕರಾಚಾರ್ಯರಿಗೆ ಅರ್ಚನೆ ಮಹಾಪೂಜೆ ಮಂಗಳರಾತಿ ಮಾಡಲಾಯಿತು. ಗುರುಪೂರ್ಣಿಮೆ ಅಂಗವಾಗಿ ಇಂದು ಗುರುಪರಂಪರಾ ಪೂಜೆ, ವ್ಯಾಸ ಪೂಜೆ, ಪೂಜ್ಯ ಸ್ವಾಮೀಜಿಯವರ ಪಾದುಕಾ ಪೂಜೆ, ಪವಮಾನ ಹೋಮ ಹಾಗೂ ದತ್ತ ಹೋಮ ವನ್ನು ನೆರವೇರಿಸಲಾಯಿತು.



ಅವಧೂತ ದತ್ತಪೀಠದ ಕಿರಿಯ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಪೂಜಾ ಕಾರ್ಯ ನೆರವೇರಿಸಿದರು.


ಪೂಜಾ ನಂತರ ಭಕ್ತರನ್ನುದ್ದೇಶಿಸಿ ಮಾತನಾಡಿ ಲೋಕ ಕಲ್ಯಾಣ ಹಾಗೂ ವಿಶ್ವ ಶಾಂತಿಗಾಗಿ ಪ್ರಾರ್ಥಿಸಿ ಚಾತುರ್ಮಾಸ್ಯ ವ್ರತ ಪ್ರಾರಂಭಿಸಲಾಗಿದೆ. ನಾನು ಮಹಾಜ್ಞಾನಿ ಎಂದು ಮನುಷ್ಯರು ಮರೆಯುತ್ತಾರೆ. ಆದರೆ, ಆತ್ಮ ಜ್ಞಾನವೇ ಮುಖ್ಯ, ಆತ್ಮಜ್ಞಾನ ಬೋಧಿಸುವ ಗುರುವಿಗಿಂತ ಬೇರೊಬ್ಬ ಈ ಸೃಷ್ಟಿಯಲ್ಲಿ ಇಲ್ಲ ಹಾಗಾಗಿ ನೀವು ಹೇಳಿದ ಹಾಗೆ ಮಾಡುತ್ತೇನೆ ಎಂದು ಶ್ರೀರಾಮನು ಗುರು ವಶಿಷ್ಠರಿಗೆ ಹೇಳಿದ್ದನ್ನು ಎಂದು ಗುರುಪೂರ್ಣಿಮೆಯ ಮಹತ್ವವನ್ನು ಶ್ರೀಗಳು ಸಣ್ಣ ಕಥೆಯೊಂದಿಗೆ ತಿಳಿಸಿದರು. ಸಂಜೆ ಶ್ರೀ ಗಂಡೂರಿ ದತ್ತಾತ್ರೇಯ ಶರ್ಮಗೆ ಶ್ರೀ ಗಣಪತಿ ಸಚ್ಚಿದಾನಂದ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸೆ.26ರವರೆಗೂ ವಿವಿಧ ಕಾರ್ಯಕ್ರಮಗಳೊಂದಿಗೆ ಶ್ರೀಗಳ ಚಾತುರ್ಮಾಸ್ಯ ವ್ರತ ಅರ್ಥಪೂರ್ಣವಾಗಿ ನೆರವೇರಲಿದೆ.

ಬಾಬಾಸಾಹೇಬ್ ಬಿ.ಆರ್.ಅಂಬೇಡ್ಕರ್ ಸ್ನೇಹ ಸೌಹಾರ್ದ ಸಂಘ ಮತ್ತು ಬೋಧಿಸತ್ವ ಶೈಕ್ಷಣಿಕ ಹಾಗೂ ಆಧ್ಯಾತ್ಮಿಕ ಟ್ರಸ್ಟ್ ಸಹಯೋಗದಲ್ಲಿ ಬೆಳಿಗ್ಗೆ 7ಕ್ಕೆ ಸಿದ್ಧಾರ್ಥನಗರದ ಬುದ್ಧ ವೃತ್ತದಲ್ಲಿ ಉರಿಲಿಂಗಿಪೆದ್ದಿಮಠದ ಜ್ಞಾನಪ್ರಕಾಶ ಸ್ವಾಮೀಜಿ ಸಾನಿಧ್ಯದೊಂದಿಗೆ ಜಾಥಾ ಆಯೋಜಿಸಲಾಗಿತ್ತು.

# ಸೂಲಗಿತ್ತಿ ನರಸಮ್ಮ: ಸೇವೆಯೇ ಧರ್ಮವಾದ ಜೀವ



ಸ್ಫೂರ್ತಿ ಸುಧೆ - 83



ಡಾ.ಸುಧಾಕರ.ಜಿ.ಲಕ್ಕವಳ್ಳಿ


ಪದವಿಯ ಕಾಗದವಿಲ್ಲದೆ ಸಾವಿರಾರು ಜೀವಗಳನ್ನು ಉಳಿಸಬಹುದು. ಆಧುನಿಕ ಉಪಕರಣಗಳಿಲ್ಲದೆ ತಾಯಿಯ ಕಣ್ಣೀರನ್ನು ಒರೆಸಬಹುದು. ಇದಕ್ಕೆ ಸಾಕ್ಷಿ ಕರ್ನಾಟಕದ ಪಾವಗಡದ ಸೂಲಗಿತ್ತಿ ನರಸಮ್ಮ. ಅಕ್ಷರ ಕಲಿಯದಿದ್ದರೂ ಮಾನವೀಯತೆಯ ಮಹಾಪಾಠವನ್ನು ಜಗತ್ತಿಗೆ ಕಲಿಸಿದ ಮಹಾತಾಯಿ ಅವರು.

ಅಜ್ಜಿಯಿಂದ ಹೆರಿಗೆ ಕಲೆಯನ್ನು ಕಲಿತ ನರಸಮ್ಮ ಅವರು ಏಳು ದಶಕಗಳ ಕಾಲ ದೂರದ ಹಳ್ಳಿಗಳಲ್ಲಿ ಸಂಚರಿಸಿದರು. ರಾತ್ರಿ-ಹಗಲು, ಮಳೆ-ಬಿಸಿಲಿನ ಭೇದವಿಲ್ಲ. ಆಸ್ಪತ್ರೆ ತಲುಪಲಾಗದ ತಾಯಂದಿರ ಬಳಿಗೆ ಕಾಲ್ನಡಿಗೆಯಲ್ಲಿ ತೆರಳಿ ಆಸರೆಯಾದರು. "ಸೂಲಗಿತ್ತಿ" ಎಂಬ ಪದಕ್ಕೆ ಅವರು ಹೊಸ ಘನತೆ ತಂದುಕೊಟ್ಟರು. ಸುಮಾರು 15,000 ಮಕ್ಕಳನ್ನು ತಮ್ಮ ಕೈಯಿಂದ ಈ ಭೂಮಿಗೆ ಸ್ವಾಗತಿಸಿದರು. ಒಂದೇ ಒಂದು ರೂಪಾಯಿ ಕೇಳಲಿಲ್ಲ. "ಸೇವೆ ಮಾಡುವುದು ನನ್ನ ಧರ್ಮ, ವೃತ್ತಿಯಲ್ಲ" ಎಂಬುದು ಅವರ ದೃಢ ನಂಬಿಕೆಯಾಗಿತ್ತು.

ಅನುಭವೇ ಅವರ ವೈದ್ಯಕೀಯ ಪಠ್ಯ. ತಾಯಿಯ ಹೊಟ್ಟೆಯನ್ನು ಸ್ಪರ್ಶಿಸಿ ಮಗುವಿನ ಸ್ಥಾನವನ್ನು ನಿಖರವಾಗಿ ಹೇಳುವ ಅಪೂರ್ವ ಕೌಶಲ್ಯ ಅವರದಾಗಿತ್ತು. ಅವರ ಕೈಯೇ ಸ್ಟೆತಸ್ಕೋಪ್, ಅವರ ಪ್ರೀತಿಯೇ ಮದ್ದು. ಈ ನಿಸ್ವಾರ್ಥ ಸೇವೆಗೆ 2014ರಲ್ಲಿ ತುಮಕೂರು ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಿತು. 2018ರಲ್ಲಿ ಭಾರತ ಸರ್ಕಾರ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿತು. ನಿಧನರಾಗುವ ಮೊದಲು ತಮ್ಮ ಮಗಳೂ ಸೇರಿದಂತೆ 180 ಮಹಿಳೆಯರಿಗೆ ಈ ಪವಿತ್ರ ಕಲೆಯನ್ನು ಕಲಿಸಿ ಹೋದರು. ನರಸಮ್ಮ ಅವರ ಬದುಕು ಹೇಳುವುದು ಒಂದೇ ಸತ್ಯ. ದೊಡ್ಡ ಸಾಧನೆಗೆ ದೊಡ್ಡ ಪದವಿ ಅಗತ್ಯವಿಲ್ಲ. ದೊಡ್ಡ ಹೃದಯವಿದ್ದರೆ ಸಾಕು. ಸೇವೆಯೇ ನಿಜವಾದ ಆರಾಧನೆ.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



# ಟ್ರೇಲರ್ ನಲ್ಲೇ ಎಲ್ಲರ ಗಮನ ಸೆಳೆದಿರುವ ಪಿಚ್ಚರ್ ಆಗಸ್ಟ್ 7 ರಿಂದ ಚಿತ್ರಮಂದಿರಗಳಲ್ಲಿ



ಕನ್ನಡ ಹಾಗೂ ತುಳು ಭಾಷೆಗಳಲ್ಲಿ ನಿರ್ಮಾಣವಾಗಿದೆ ಶಿಲ್ಪಾ ಗಣೇಶ್ ನಿರ್ಮಾಣ ಹಾಗೂ ಸಂದೀಪ ಬೆದ್ರ ನಿರ್ದೇಶನದ ಈ ಚಿತ್ರ. ಗೋಲ್ಡನ್ ಮೂವೀಸ್ ಲಾಂಛನದಲ್ಲಿ ಸದಭಿರುಚಿ ಚಿತ್ರಗಳ ನಿರ್ಮಾಪಕಿ ಶಿಲ್ಪಾ ಗಣೇಶ್ ಅವರು ನಿರ್ಮಿಸಿರುವ, ಸಂದೀಪ ಬೆದ್ರ ಚೊಚ್ಚಲ ನಿರ್ದೇಶನದ ಹಾಗೂ ನಿತ್ಯಪ್ರಕಾಶ್ ಬಂಟ್ವಾಳ ನಾಯಕನಾಗಿ ನಟಿಸಿರುವ "ಪಿಚ್ಚರ್" ಚಿತ್ರ ಆರಂಭದಿಂದಲೂ ಸಾಕಷ್ಟು ನಿರೀಕ್ಷೆ ಹುಟ್ಟಿಸಿದೆ. ಕನ್ನಡ ಹಾಗೂ ತುಳು ಎರಡು ಭಾಷೆಗಳಲ್ಲೂ ನಿರ್ಮಾಣವಾಗಿರುವ ಈ ಚಿತ್ರದ ಟ್ರೇಲರ್ ಇತ್ತೀಚೆಗೆ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದ್ದು, ಟ್ರೇಲರ್ ಗೆ ನಿರೀಕ್ಷೆಗೂ ಮೀರಿ ಮೆಚ್ಚುಗೆ ದೊರಕಿದೆ ಹಾಗೂ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯೂ ಆಗುತ್ತಿದೆ. ಈಗಾಗಲೇ ಹಾಡುಗಳು ಹಾಗೂ ಟ್ರೇಲರ್ ಮೂಲಕ ಎಲ್ಲರ ಗಮನ ಸೆಳೆದಿರುವ ಈ ಚಿತ್ರ ಆಗಸ್ಟ್ 7 ರಂದು ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ.

ಕೌಟುಂಬಿಕ, ಕಾಮಿಡಿ ಕಥಾಹಂದರದ ಜೊತೆಗೆ ಮನೋರಂಜನೆಯೇ ಪ್ರಧಾನವಾಗಿರುವ ಈ ಚಿತ್ರವನ್ನು ಸಂದೀಪ್ ಬೆದ್ರ ನಿರ್ದೇಶಿಸಿದ್ದಾರೆ. ಇದು ಅವರ ಚೊಚ್ಚಲ ನಿರ್ದೇಶನದ ಚಿತ್ರ. ಸಂತೋಷ್ ರೈ ಪಾತಾಜೆ ಹಾಗೂ ಚಂದ್ರಶೇಖರ್ ಕೆ.ಎಸ್ ಅವರ ಛಾಯಾಗ್ರಹಣ, ರಾಜು ಆರ್ಯನ್ ಸಂಕಲನ, ಧನಂಜಯ್.ಬಿ – ಶ್ರೀರಾಜು ನೃತ್ಯ ನಿರ್ದೇಶನ, ರಾಧೇಶ್ – ಸಂತೋಷ್ ಪೂಜಾರಿ ಕಲಾ ನಿರ್ದೇಶನ ಹಾಗೂ ಥ್ರಿಲ್ಲರ್ ಮಂಜು ಅವರ ಸಾಹಸ ನಿರ್ದೇಶನವಿರುವ ಈ ಚಿತ್ರಕ್ಕೆ ಮೋಹನ್ ಭಟ್ಕಳ್ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸಿದ್ದಾರೆ. ಸ್ಯಾಮುಯೆಲ್ ಅಭಿ ಸಂಗೀತ ನೀಡಿರುವ ಈ ಚಿತ್ರದಲ್ಲಿ ನಾಲ್ಕು ಹಾಡುಗಳಿದೆ. ನಿರ್ಮಾಪಕಿ ಶಿಲ್ಪಾ ಗಣೇಶ್ ಅವರು ಈ ಚಿತ್ರದ "ಗೋಕುಲದ ರಾಧೆ" ಹಾಡನ್ನು ಹಾಡಿರುವುದು ವಿಶೇಷ.

ನಿತ್ಯಪ್ರಕಾಶ್ ಬಂಟ್ವಾಳ "ಪಿಚ್ಚರ್" ಚಿತ್ರದ ನಾಯಕನಾಗಿದ್ದು, ನಾಯಕಿಯಾಗಿ ಅಮೃತ ಸುದು ಅಭಿನಯಿಸಿದ್ದಾರೆ. ದೇವದಾಸ್ ಕಾಪಿಕಾಡ್, ನವೀನ್ ಡಿ ಪಡೀಲ್, ಅರವಿಂದ್ ಬೋಳಾರ್, ಭೋಜರಾಜ್ ವಾಮಂಜೂರ್, ಸಾಯಿಕೃಷ್ಣ, ವಜ್ರಧೀರ್ ಜೈನ್, ಸದಾಶಿವ ಅಮಿನ್, ಪ್ರಸನ್ನ ಶೆಟ್ಟಿ ಬೈಲೂರ್, ಸಂದೀಪ್ ಶೆಟ್ಟಿ ಮಾಣಿ, ಉಮೇಶ್ ಪೂಜಾರ್, ಜಯಶೀಲ ಮರೋಲಿ, ರೂಪ ವರ್ಕಾಡಿ ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ.

# ಶಬರಿ ಚಿತ್ರದ `ತಂದಾನಿ ತಾನೋ' ವೀಡಿಯೋ ಸಾಂಗ್ ಅನಾವರಣ!



ಒರಟ ಶ್ರೀ ನಿರ್ದೇಶನದಲ್ಲಿ ಮೂಡಿ ಬಂದಿರುವ 'ಶಬರಿ' ಚಿತ್ರದ ಟೀಸರ್ ಕೆಲ ದಿನಗಳ ಹಿಂದಷ್ಟೇ ಬಿಡುಗಡೆಗೊಂಡಿತ್ತು. ಈ ಮೂಲಕ ಪ್ರೇಕ್ಷಕರ ವಲಯದಲ್ಲಿ ಕುತೂಹಲ ಮೂಡಿಕೊಂಡಿರುವ ಹೊತ್ತಿನಲ್ಲಿಯೇ ಚಿತ್ರತಂಡ "ತಂದಾನಿ ತನನೋ"ಎಂಬ ವೀಡಿಯೋ ಸಾಂಗ್ ಒಂದನ್ನು ಪ್ರೇಕ್ಷಕರಿಗೆ ತಲುಪಿಸಿದೆ. ನಿರ್ದೇಶಕ ಓಂ ಪ್ರಕಾಶ್ ರಾವ್, ರಘು ರಾಮ್, ಬಾಲಾಜಿ ವೀರಾಸ್ವಾಮಿ ಮತ್ತು ಉದ್ಯಮಿ ವಿ. ಬಾಬು ಈ ವೀಡಿಯೋ ಸಾಂಗ್ ಅನ್ನು ಬಿಡುಗಡೆಗೊಳಿಸಿ ಚಿತ್ರತಂಡಕ್ಕೆ ಶುಭ ಹಾರೈಸಿದ್ದಾರೆ.ಈ ಸಂಬಂಧವಾಗಿ ನಡೆದ ಪತ್ರಿಕಾಗೋಷ್ಠಿಯಲ್ಲಿ 'ಈ ವೀಡಿಯೋ ಸಾಂಗ್ ಅದ್ಭುತವಾಗಿ ಮೂಡಿ ಬಂದಿದೆ. ಬಿ ಆರ್. ಹೇಮಂತ್ ಕುಮಾರ್ ಅವರ ಸಂಗೀತ ಸಂಯೋಜನೆ ಮನಮುಟ್ಟುವಂತಿದೆ. ಸರೆಗಮಪ ಖ್ಯಾತಿಯ ಅಶ್ವಿನ್ ಶರ್ಮಾ ಕೂಡಾ ಚೆಂದವಾಗಿ ಹಾಡಿದ್ದಾರೆ. ಈ ಹಾಡಿನಲ್ಲಿ ಸಮರ್ಥ್ ಹಾಗೂ ಧನ್ವಿ ಎಲ್ಲಿಯೂ ಹೊಸಬರೆನ್ನಿಸದಂತೆ ಆ ಪಾತ್ರಗಳಿಗೆ ಜೀವ ತುಂಬಿದ್ದಾರೆ' ಎಂಬ ಮೆಚ್ಚುಗೆಯನ್ನು ಓಂಪ್ರಕಾಶ್ ರಾವ್ ಮತ್ತು ಬಾಲಾಜಿ ವೀರಾಸ್ವಾಮಿ ವ್ಯಕ್ತಪಡಿಸಿದರು. ರಘುರಾಮ್ ಹೊಸಬರ ಈ ಪ್ರಯತ್ನವನ್ನು ಮೆಚ್ಚಿಕೊಳ್ಳುತ್ತಲೇ ಚಿತ್ರತಂಡಕ್ಕೆ ಶುಭ ಹಾರೈಸಿದರು.

ನಿರ್ದೇಶಕ ಒರಟ ಶ್ರೀ ಅವರೇ ಈ ಹಾಡನ್ನು ಬರೆದಿದ್ದಾರೆ. ಸ್ಥಳದಲ್ಲಿಯೇ ಹಾಡನ್ನು ಸೃಷ್ಟಿಸಿದ ಬಗೆಯನ್ನು ವಿವರಿಸಿದ ಒರಟ ಶ್ರೀ, 'ನಮ್ಮ ಸಿನಿಮಾದಲ್ಲಿ ಸಮರ್ಥ್ ಮತ್ತು ಧನ್ವಿ ಮಾತ್ರವಲ್ಲದೇ ಜೀಪ್ ಕೂಡಾ ಪ್ರಧಾನ ಪಾತ್ರವಾಗಿದೆ. ಸಸ್ಪೆನ್ಸ್ ಥ್ರಿಲ್ಲರ್ ಸೇರಿದಂತೆ ನಾನಾ ಅಂಶಗಳನ್ನು ಈ ಕಥೆ ಒಳಗೊಂಡಿದೆ' ಎಂಬ ವಿವರಣೆಯನ್ನೂ ನೀಡಿದರು.

ಸಿವಿಲ್ ಇಂಜಿನಿಯರ್ ಆಗಿರುವ ರಮೇಶ್ , ಸುಧಾಕರ್ ರೆಡ್ಡಿ ಯಾಕಸಿರಿ ಮತ್ತು ವಿಷ್ಣುಕಾಂತ್ ಎ ಜೊತೆಗೂಡಿ ಬರವಿ ಫಿಲಂಸ್ ಬ್ಯಾನರಿನಡಿಯಲ್ಲಿ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಒರಟ ಶ್ರೀ ನಿರ್ದೇಶನವಿರುವ ಈ ಚಿತ್ರದಲ್ಲಿ ಸಮರ್ಥ್ ಮತ್ತು ಕೃತಿಕಾ ಗೌಡ ನಾಯಕ ನಾಯಕಿಯರಾಗಿ ನಟಿಸಿದ್ದಾರೆ. ಧನ್ವಿ, ಎಂ.ಕೆ ಮಠ, ನೀನಾಸಂ ಅಶ್ವತ್, ಸೀತಾ ಹರ್ಷವರ್ಧನ್, ಯೋಗೇಶ್ ವೀರ್, ಮಂಡ್ಯ ಸಿದ್ದು ಮುಂತಾದವರ ತಾರಾಗಣವಿದೆ. ಬಿ.ಆರ್ ಹೇಮಂತ್ ಕುಮಾರ್ ಸಂಗೀತ ನಿರ್ದೇಶನ, ಸಾಮ್ರಾಟ್ ನಾಗರಾಜ್ ಛಾಯಾಗ್ರಹಣ, ಕೆ. ಗಿರೀಶ್ ಕುಮಾರ್ ಸಂಕಲನ, ಹಾಗೂ ಕೋರ ಚೆನ್ನಯ್ಯ ರವರ ಸಾಹಸ ಈ ಚಿತ್ರಕ್ಕಿದೆ.

# 'ಲವ್ ಕಾಕ್ಟೇಲ್' ಕೊಡಲು ಬಂದ ಹರೀಶ್ ರಾಜ್

ಲವ್ ಕಾಕ್ಟೇಲ್ ನಲ್ಲಿ ರೊಮ್ಯಾಂಟಿಕ್ ಆಗಿ ಕಾಡ್ತಿದ್ದಾರೆ ಹರೀಶ್ ರಾಜ್ ಹರೀಶ್ ರಾಜ್ ಅವರನ್ನು ಹಿರಿ ತೆರೆ ಕಿರುತೆರೆಯಲ್ಲಿ ನೋಡಿ ಮೆಚ್ಚಿಕೊಂಡ ಅಭಿಮಾನಿಗಳಿದ್ದಾರೆ. ಇಷ್ಟು ದಿನ ನಾವೂ ನೀವೂ ನೋಡಿದ ಹರೀಶ್ ರಾಜ್ ಬೇರೆ. ಈಗ ಪ್ಲೇ ಬಾಯ್ ಎಲ್ಲರನ್ನ ಕಾಡೋದಕ್ಕೆ ಬಂದಿದ್ದಾರೆ. ಲವ್ ಕಾಕ್ಟೇಲ್ ನಲ್ಲಿ ಕೈನಲ್ಲಿ ಹಿಡಿದು ಎಲ್ಲರನ್ನ ಸೆಳೆಯುತ್ತಿದ್ದಾರೆ. ಲವ್ ಕಾಕ್ಟೇಲ್ ಸಿನಿಮಾದ ಮೇಕಿಂಗ್, ಸಾಂಗ್ಸ್ ಗಳನ್ನ ಬಿಟ್ಟು ಹರೀಶ್ ರಾಜ್ ತಮ್ಮ ಮತ್ತೊಂದ ಮಗಲನ್ನ ವೀಕ್ಷಕರಿಗೆ ಪರಿಚಯ ಮಾಡಿಕೊಟ್ಟಿದ್ದಾರೆ.

ಅದರಲ್ಲೂ ಲವ್ ಫೇಲ್ಯೂರ್ ಆದ್ರೆ ಏನಂತೆ, ಲೈಫ್ ನ ಹೇಗೆ ಜಾಲಿಯಾಗಿ ಕಳೆಯಬಹುದು ಎಂಬುದನ್ನ ತೋರಿಸಿಕೊಟ್ಟಿದ್ದಾರೆ. ಅವರದ್ದೇ ಬತ್ತಳಿಕೆಯಲ್ಲಿ ಬಂದ ಕಥೆ ಇದಾಗಿದ್ದು, ನಿರ್ದೇಶನವನ್ನು ಅವರೇ ಮಾಡಿದ್ದಾರೆ. ಈ ಬಗ್ಗೆ ಹರೀಶ್ ರಾಜ್ ಹೇಳಿದ್ದು ಹೀಗೆ, ಇಂಡಸ್ಟ್ರಿಯ ಜರ್ನಿಗೆ 30 ವರ್ಷ, ನನಗೀಗ 50 ವರ್ಷ. ಈ ಸಂತಸವನ್ನ ಎಲ್ಲರ ಜೊತೆಗೆ ಹಂಚಿಕೊಳ್ಳುವುದಕ್ಕೆ ಇಷ್ಟಪಡ್ತಾ ಇದ್ದೀನಿ. ಉಮೇಶ್ ಅಣ್ಣ ಒಳ್ಳೆ ಪಾತ್ರ ಮಾಡಿದ್ದರು. ಆದರೆ ಇಂದು ಅವರು ನಮ್ಮ ಜೊತೆಗೆ ಇಲ್ಲ.

ಅಭಿನಯ ಮೇಡಂ ಜೊತೆಗೆ ಈ ಹಿಂದೆ ಒಂದು ಕಾಮಿಡಿ ಪಾತ್ರ ಮಾಡಿದ್ದೆ. ಇಮನದು ಒಟ್ಟಿಗೆ ಆಗಿದ್ದೀವಿ. ಉಮಾಶ್ರೀ ಅಮ್ಮ ಅದ್ಭುತವಾಗಿ ಕಾಡ್ತಾರೆ. ಈ ಸಿನಿಮಾದ ಟೈಟಲ್ ಅನ್ನ ಈ ಮೊದಲು ವೆಂಕಟೇಶಾಯನಮಃ ಅಂದುಕೊಂಡಿದ್ದೆವು. ಸೆನ್ಸಾರ್ ಮಂಡಳಿ ಅವರು



ಹೊಗಳಿದರು. ಒಂದು ಮಾರ್ಗದರ್ಶನದ ಪ್ರಕಾರ ಟೈಟಲ್ ಅನ್ನು ಬದಲಾಯಿಸಿದೆವು ಎಂದಿದ್ದಾರೆ.

ನಿರ್ಮಾಪಕ ಜನಾರ್ಧನ್ ಪಿ ಮಾತನಾಡಿ, ನಿರ್ಮಾಪಕ ಅನ್ನೋದನ್ನ ಬಿಟ್ಟರೆ ಉಳಿದ ಜವಬ್ದಾರಿಯನ್ನೆಲ್ಲಾ ಅವರೇ ತಲೆ ಮೇಲೆ ಹಾಕಿಕೊಂಡು ನಿಭಾಯಿಸಿದರು. ಸಮಯ ಮಾಡಿಕೊಂಡು ಬಂದು ಹೋಗಿ ಅಂತಷ್ಟೇ ಹೇಳ್ತಾ ಇದ್ದರು. ಸಿನಿಮಾ ತುಂಬಾ ಚೆನ್ನಾಗಿ ಬಂದಿದೆ. ನೋಡಿ ಹಾರೈಸಿ ಎಂದರು.


ಅಭಿನಯ ಮಾತನ್ನಾಡಿ, ಹರೀಶ್ ನಾನು ಹೋಗ್ಲಿ ಬಿಡಿ ಸರ್ ಎಂಬ ಕಾಮಿಡಿ ಸೀರಿಯಲ್ ನಲ್ಲಿ ಮಾಡ್ತಾ ಇದ್ದೆವು. ಅಂದೆ ನಂಗೆ ಇವರ ಎನರ್ಜಿ ನೋಡಿ ನೀವೂ ಹೀರೋ ಆಗಬಹುದು ಎಂದಿದ್ದ. ಆಮೇಲೆ ಹೀರೋ ಆಗಿ ಮಿಂಚಿದ್ರು. ನಾನು ಒಮ್ಮೆ ಕೇಳಿದ್ದೆ ಏನ್ ಹರೀಶ್ ನಮ್ಮನ್ನೆಲ್ಲಾ ಹಾಕಿಕೊಳ್ಳೋದೆ ಇಲ್ಲ ಅಂದಿದ್ದೆ. ಅದಾದ ಮೇಲೆ ಎಷ್ಟೋ ದಿನಕ್ಕೆ ಕಾಲ್ ಮಾಡಿ ಈ ಪಾತ್ರ ಕೊಟ್ಟರು ಎಂದರು.

ಲವ್ ಕಾಕ್ಟೇಲ್ ಸಿನಿಮಾಗೆ ಹರೀಶ್ ರಾಜ್ ಅವರೇ ಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಶ್ರೀ ಲಕ್ಷ್ಮೀ ಜನಾರ್ಧನ ಬ್ಯಾನರ್ ಮೂಲಕ ಪಿ ಜನಾರ್ಧನ್ ಅವರು ನಿರ್ಮಾಣ ಮಾಡಿದ್ದು, ಪ್ರವೀಣ್ ಶ್ರೀನಿವಾಸ ಮೂರ್ತಿ ಸಂಗೀತ, ಜೀವನ್ ಪ್ರಕಾಶ್ ಸಂಕಲನ, ರಾಜಾ ಶಿವಶಂಕರ್ ಛಾಯಾಗ್ರಹಣ ನೀಡಿದ್ದಾರೆ. ಸಿನಿಮಾದ ಸಂಪರ್ಕವನ್ನ ರಮಿತ್ ಎಲಕ್ಕಿ ನಡೆಸುತ್ತಿದ್ದಾರೆ. ಹರೀಶ್ ರಾಜ್, ಪ್ರಕೃತಿ ಪ್ರಸಾದ್, ತಬಲನಾಣಿ, ಅಶೋಕ್, ಉಮಾಶ್ರೀ, ಅಭಿನಯ ಸೇರಿದಂತೆ ಹಲವರು ತಾರಾಗಣದಲ್ಲಿದ್ದಾರೆ.

# ದೇವರ ಹೆಸರಲ್ಲಿ ಪ್ರಮಾಣ ಮಾಡುತ್ತೇನೆ? ಟೀಸರ್ ರಿಲೀಸ್!

ವಿ. ನಾಗೇಂದ್ರ ಪ್ರಸಾದ್ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿರುವ ದೇವರ ಹೆಸರಲ್ಲಿ ಪ್ರಮಾಣ ಮಾಡುತ್ತೇನೆ ಸಿನಿಮಾದ ಟೀಸರ್ ಬಿಡುಗಡೆಯಾಗಿದೆ. ಸಾಮಾಜಿಕ,ರಾಜಕೀಯ ಮತ್ತು ಕನ್ನಡ ಭಾಷೆಯ ಸುತ್ತ ಸಾಗುವ ಈ ಸೋಶಿಯೋ–ಪೊಲಿಟಿಕಲ್ ಲಿಂಗ್ವಿಸ್ಟಿಕ್ ಕಥಾಹಂದರ ಹೊಂದಿರುವ ಚಿತ್ರವನ್ನು ಗುರುಪ್ರಸಾದ್ ಚಂದ್ರಶೇಖರ್ ನಿರ್ದೇಶಿಸಿದ್ದಾರೆ.

ಚಿತ್ರದ ಕುರಿತು ಮಾತನಾಡಿದ ನಿರ್ದೇಶಕ ಗುರುಪ್ರಸಾದ್ ಚಂದ್ರಶೇಖರ್, "ಇದು ಕನ್ನಡ ಭಾಷೆ ಮತ್ತು ಅದರ ಸುತ್ತ ನಡೆಯುವ ಸಾಮಾಜಿಕ–ರಾಜಕೀಯ ಘಟನೆಗಳ ಆಧಾರಿತ ಡ್ರಾಮಾ. ಟೀಸರ್‌ನಲ್ಲಿ ನಾಗೇಂದ್ರ ಪ್ರಸಾದ್ ಅವರ ಲೀಡ್ ರೋಲ್ ಹಾಗೂ ರಾಜಕೀಯದ ಟ್ರ್ಯಾಕ್ ಮಾತ್ರ ತೋರಿಸಿ ಪ್ರೇಕ್ಷಕರಲ್ಲಿ ಕುತೂಹಲ ಮೂಡಿಸುವ ಪ್ರಯತ್ನ ಮಾಡಿದ್ದೇವೆ ಅಂದರು. ದೇವರ ಹೆಸರಿನಲ್ಲಿ ಪ್ರಮಾಣ ಮಾಡಿ ಸಮಾಜದಲ್ಲಿ ಏನೆಲ್ಲಾ ಬದಲಾವಣೆ ತರುತ್ತಾರೆ ಮತ್ತು ಕಾಲಕ್ಕೆ ತಕ್ಕಂತೆ ಪಾತ್ರಗಳು ಹೇಗೆ ಬದಲಾಗುತ್ತದೆ ಎಂಬುದು ಚಿತ್ರದ ಪ್ರಮುಖ ಆಕರ್ಷಣೆಯಾಗಿದೆ.



ಈ ಚಿತ್ರದ ಎರಡು ಹಾಡುಗಳನ್ನು ನಾಗೇಂದ್ರ ಪ್ರಸಾದ್ ಬರೆದಿದ್ದು, ಚರಣ್ ಅರ್ಜುನ್ ಸಂಗೀತ ಸಂಯೋಜಿಸಿದ್ದಾರೆ ಜೊತೆಗೆ ಉತ್ತರ ಕರ್ನಾಟಕ ಶೈಲಿಯ ಫೋಕ್ ಭಜನೆ ಹಾಡುಗಳು ಹಾಗೂ ಬಿಟ್ ಸಾಂಗ್‌ಗಳು ಚಿತ್ರದಲ್ಲಿದೆ. ಬಿ. ಶಿವಶಂಕರ್, ದತ್ತಾತ್ರೇಯ ಜಮಾದಾರ್ ಶಶಿಪ್ರಸಾದ್,ಚಂದ್ರಶೇಖರ್ ಜಂಟಿಯಾಗಿ ಈ ಚಿತ್ರ ನಿರ್ಮಿಸುತ್ತಿದ್ದಾರೆ. ಕಥೆ, ಚಿತ್ರಕಥೆ, ಸಂಭಾಷಣೆ ನಿರ್ದೇಶನ ಗುರುಪ್ರಸಾದ್ ಚಂದ್ರಶೇಖರ್.

ತಾರಾಗಣದಲ್ಲಿ ನಾಗೇಂದ್ರ ಪ್ರಸಾದ್ ವೈಜನಾಥ್ ಬಿರಾದಾರ್, ಡಿಂಪನ ಜೀವನ್, ಅಶ್ವಿತಾ ಹೆಗಡೆ, ಬಾಲ ರಾಜವಾಡಿ, ಪ್ರದೀಪ್ ಪೂಜಾರಿ, ಶ್ರೀನಾಥ್ ವಶಿಷ್ಠ, ಶ್ರೀನಿವಾಸ್ ಪ್ರಭು, ಕಲಾಮಾಧ್ಯಮ ಪರಮೇಶ್ವರ್, ಅಂಕಿತಾ ಗೌಡ, ದತ್ತಾತ್ರೇಯ ಜಮಾದಾರ್ ಹಾಗೂ ಮಾವಳ್ಳಿ ಕಾರ್ತಿಕ್ ಮುಂತಾದವರು ಅಭಿನಯಿಸಿದ್ದಾರೆ.

# ಡಾ. ರಾಜ್ ಕುಮಾರ್ ಅವರ ವಿರುದ್ಧದ ಅಪಪ್ರಚಾರಕ್ಕೆ ದಾಖಲೆಗಳ ಮೂಲಕ ಉತ್ತರ: ಎನ್.ಆರ್. ರಮೇಶ್ ಅವರ ಕೃತಿ ಲೋಕಾರ್ಪಣೆ



ಹಲವು ದಶಕಗಳಿಂದ ಡಾ॥ ರಾಜಕುಮಾರ್ ಅವರ ಚಾರಿತ್ರ್ಯವಧೆ ಮಾಡಬೇಕೆಂಬ ದುರುದ್ದೇಶದಿಂದ ಅವರ ವೈಯಕ್ತಿಕ ಬದುಕಿಗೆ ಸಂಬಂಧಪಟ್ಟಂತೆ ಅಪಪ್ರಚಾರ ಮಾಡುತ್ತಿದ್ದ ವಿಷಯವನ್ನು ಗಂಭೀರವಾಗಿ ಪರಿಗಣಿಸಿ – ನಿಜಕ್ಕೂ ಡಾ॥ ರಾಜ್ ಕುಮಾರ್ ಮತ್ತು ದಿವಂಗತ ನಟಿ ಲೀಲಾವತಿ ಅವರ ನಡುವೆ ಇದ್ದ ಸಂಬಂಧ ಏನು ದಿವಂಗತ ನಟಿ ಲೀಲಾವತಿಯವರ ಪತಿ ಯಾರು ಮತ್ತು ನಟ ವಿನೋದ್ ರಾಜ್ ಅವರ ತಂದೆ ಯಾರು ಕನ್ನಡದ ಖ್ಯಾತ ರಂಗಭೂಮಿ ಕಲಾವಿದ, ಹಿರಿಯ ಚಲನಚಿತ್ರ ನಟ ಮತ್ತು ಸಂಸ್ಕೃತ ಶಿರೋಮಣಿ ದಿವಂಗತ ಮಹಾಲಿಂಗ ಭಾಗವತರ್ ಅವರಿಗೂ ನಟಿ ಲೀಲಾವತಿಯವರಿಗೂ ಇದ್ದ ಸಂಬಂಧವೇನು ಎಂಬ ಬಗ್ಗೆ ಮೂರ್ನಾಲ್ಕು ವರ್ಷಗಳಿಂದ ಸರ್ಕಾರಿ ದಾಖಲೆಗಳನ್ನು ಕಲೆ ಹಾಕಿ, ತಮಿಳುನಾಡಿನ ಚೆನ್ನೈ ಮಹಾನಗರ ಮತ್ತು ಅದಕ್ಕೆ ಹೊಂದಿಕೊಂಡಂತಿರುವ ಚಂಗಲ್ ಪಟ್ಟು ಜಿಲ್ಲೆಗಳಲ್ಲಿ ಇರುವ ದಿವಂಗತ ಮಹಾಲಿಂಗ ಭಾಗವತರ್, ದಿವಂಗತ ಲೀಲಾವತಿ ಮತ್ತು ನಟ ವಿನೋದ್ ರಾಜ್ ರವರ ಮಾಲೀಕತ್ವದ ಸ್ವತ್ತುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಕಾನೂನು ರೀತ್ಯಾ ಕಲೆಹಾಕಿ, ಆ ಸ್ವತ್ತುಗಳಿಗೆ ಸಂಬಂಧಿಸಿದ ತೀರುವಳಿ ಪತ್ರ (Settlement Deed), ಕ್ರಯಪತ್ರ (Sale Deed), ದಾನಪತ್ರ (Gift Deed), RTC, ಪಹಣಿ, ಪಟ್ಟಾ ದಾಖಲೆಗಳು ಹಾಗೂ ಆಧಾರ್ ಕಾರ್ಡ್ ಗಳನ್ನು ಕಲೆಹಾಕಿ 2025ರ ಫೆಬ್ರವರಿ ತಿಂಗಳಿನಲ್ಲಿ ಪತ್ರಿಕಾ ಮಾಧ್ಯಮದ ಸಮಕ್ಷಮದಲ್ಲಿ ಬಿಡುಗಡೆ ಮಾಡಲಾಗಿತ್ತು.

ಅದೇ ಸರ್ಕಾರಿ ದಾಖಲೆಗಳನ್ನು ಒಳಗೊಂಡ ಹಾಗೂ ಲೀಲಾವತಿಯವರ ಜೀವನದ ಇತಿಹಾಸ ಮತ್ತು ಮಹಾಲಿಂಗ ಭಾಗವತರ್ ಅವರ ಜೀವನದ ಇತಿಹಾಸದ ಬಗ್ಗೆ ಸಂಪೂರ್ಣ ದಾಖಲೆಗಳ ಸಹಿತ ಎನ್ ಆರ್ ರಮೇಶ್ ಅವರು ರಚಿಸಿ, ಸ್ನೇಹ ಪ್ರಕಾಶನದಿಂದ ಪ್ರಕಾಶಿಸಿರುವ ಲೀಲಮ್ಮ..... ನಿನ್ನ ಗಂಡ ಯಾರಮ್ಮ..... ಎಂಬ ಕೃತಿ ಲೋಕಾರ್ಪಣೆಗೊಂಡಿದೆ.. ಸಮಾರಂಭದಲ್ಲಿ ನಿವೃತ್ತ IAS ಅಧಿಕಾರಿ ಮತ್ತು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷಡಾ॥ ಸಿ ಸೋಮಶೇಖರ್, ಹಿರಿಯ ಪತ್ರಕರ್ತ ಬಿ. ಗಣಪತಿ ಮತ್ತು ಹಿರಿಯ ಲೇಖಕ ದೊಡ್ಡ ಹುಲ್ಲೂರು ರುಕ್ಕೋಜಿ, ಜಗನ್ನಾಥ್ ಬಹುಳೆ ಮತ್ತು ಕನ್ನಡ ಚಲನಚಿತ್ರ ನಿರ್ದೇಶಕ ಪ್ರವೀಣ್ ನಾಯಕ್ ಲೋಕಾರ್ಪಣೆಗೊಳಿಸಿದರು. ಕಾರ್ಯಕ್ರಮದಲ್ಲಿ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಡಾ॥ ರಾಜ ಅಭಿಮಾನಿಗಳು ಹಾಜರಿದ್ದರು.

ಯಾವುದೇ ಗಣ್ಯ ವ್ಯಕ್ತಿಯ ಬಗ್ಗೆ ಹಗುರವಾಗಿ ಮಾತನಾಡುವವರಿಗೆ ಎನ್‌ಆರ್ ರಮೇಶ್ ರ ಈ ಕೆಲಸ ಉತ್ತರ ನೀಡಿದೆ.

# "ತದ್ವಿರುದ್ಧ" ಚಿತ್ರ ಈ ವಾರ ತೆರೆಗೆ

ಕನ್ನಡದಲ್ಲಿ ಒಳ್ಳೆಯ ಕಂಟೆಂಟ್ ಇರುವ ಚಿತ್ರಗಳು ಯಶಸ್ಸು ಕಂಡಿರುವ ಸಾಕಷ್ಟು ಉದಾಹರಣೆಗಳಿದೆ. ಅಂತಹುದೇ ವಿಭಿನ್ನ ಕಂಟೆಂಟ್ ವುಳ್ಳ "ತದ್ವಿರುದ್ಧ" ಚಿತ್ರ ಈ ವಾರ ಬಿಡುಗಡೆಯಾಗುತ್ತಿದೆ. ಈಗಾಗಲೇ ಟೀಸರ್ ಹಾಗೂ ಹಾಡುಗಳ ಮೂಲಕ ಈ ಚಿತ್ರ ಎಲ್ಲರ ಗಮನ ಸೆಳೆದಿದೆ.

ಸ್ವಚ್ಛ ಕನ್ನಡದ ಮಾತಿನಿಂದ ಹಾಗೂ ತಮ್ಮ ಅಮೋಘ ಅಭಿನಯದಿಂದ ಜನಪ್ರಿಯರಾಗಿರುವ ಸುಚೇಂದ್ರ ಪ್ರಸಾದ್, ಹಿರಿಯ ನಟಿ ಸುಮನ್ ರಂಗನಾಥ್ ಹಾಗೂ ವಿಕ್ರಮ್ ಪ್ರಮುಖಪಾತ್ರದಲ್ಲಿ ನಟಿಸಿರುವ ಈ ಚಿತ್ರವನ್ನು CHARMION MOTION PICTURES ಸಂಸ್ಥೆ ನಿರ್ಮಾಣ ಮಾಡಿದೆ. ವಿನೋದ್ ಜೆ ರಾಜ್ ನಿರ್ದೇಶಿಸಿದ್ದಾರೆ.

ವಾಸ್ತವಕ್ಕೆ ವಿರುದ್ಧವಾಗಿ ನಡೆದುಕೊಳ್ಳುವುದೆ " ತದ್ವಿರುದ್ಧ" ಎಂದು ಶೀರ್ಷಿಕೆ ಬಗ್ಗೆ ನಿರ್ದೇಶಕ ವಿನೋದ್ ಜೆ ರಾಜ್ ಮಾಹಿತಿ ನೀಡಿದ್ದಾರೆ. ಛಾಯಾಗ್ರಹಣ ಹಾಗೂ ಸಂಕಲನವನ್ನು ನಿರ್ದೇಶಕರೆ ಮಾಡಿದ್ದಾರೆ. ಇದೊಂದು 90 ಕಾಲಘಟ್ಟದಲ್ಲಿ ನಡೆಯುವ ಕಥೆ. ಮರ್ಡರ್ ಮಿಸ್ಟರಿ ಕಥಾಹಂದರ ಹೊಂದಿದೆ. ಸುಚೇಂದ್ರ ಪ್ರಸಾದ್, ಸುಮನ್ ರಂಗನಾಥ್, ವಿಕ್ರಮ್ ಸೇರಿದಂತೆ ಐದು ಪ್ರಮುಖಪಾತ್ರಗಳ ಸುತ್ತ ಈ ಚಿತ್ರದ ಕಥೆ ಸಾಗುತ್ತದೆ. ಐಶ್ವರ್ಯ ಬಿ ಶೆಟ್ಟಿ, ಸುವಿನ ಗೌಡ, ಪೂಜಾ ಗೌಡ, ಅಭಿಲಾಶ್ ಮುಂತಾದವರು ಅಭಿನಯಿಸಿರುವ ಈ ಚಿತ್ರಕ್ಕೆ ಕೆ.ಆರ್ ರವಿಚಂದ್ರ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯ ನಿರ್ವಹಿಸಿದ್ದಾರೆ.







# `ಬುಲ್ಲಿ' ಟೈಟಲ್ ಲಾಂಚ್! ಭುವನ್ ನಾಯಕ

"ಬಿಗ್ ಬಾಸ್" ಖ್ಯಾತಿಯ ನಟ ಭುವನ್ ಪೊನ್ನಣ್ಣ ನಾಯಕನಾಗಿ ನಟಿಸುತ್ತಿರುವ ನೂತನ ಚಿತ್ರ "ಬುಲ್ಲಿ" ಸಿನಿಮಾದ ಚಿತ್ರೀಕರಣದ ಮೊದಲನೆಯ ಶೆಡ್ಯೂಲ್ ಮುಕ್ತಾಯ ಗೊಂಡಿದೆ.

ಈ ಕಾಮೆಡಿ ಚಿತ್ರದಲ್ಲಿ ಬಹುಭಾಷಾ ತಾರೆ ಹಿರಿಯ ನಟಿ ಊರ್ವಶಿ ಅಭಿನಯಿಸುತ್ತಿದ್ದಾರೆ. ಊರ್ವಶಿ ಅವರ ಮಗಳು ತೇಜ ಊರ್ವಶಿ ನಾಯರ್ ಈ ಚಿತ್ರದ ನಾಯಕಿಯಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾಳೆ.

ಸಮೃದ್ಧ್ ಸ್ಟುಡಿಯೋಸ್ ಹಾಗು ಭುವನಂ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ನಿರ್ಮಿಸಲಾಗುತ್ತಿರುವ ಈ ಚಿತ್ರವನ್ನು ಅನೂಪ್ ಆಂಟೋನಿ ನಿರ್ದೇಶಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಶೀರ್ಷಿಕೆ ಅನಾವರಣ ಹಾಗೂ ಪತ್ರಿಕಾಗೋಷ್ಠಿ ಶ್ರೀ ಕಂಠೀರವ ಸ್ಟುಡಿಯೋದಲ್ಲಿ ನಡೆಯಿತು.

ಹತ್ತು ವರ್ಷದ ನಂತರ ನಾನು ಕನ್ನಡ ಚಿತ್ರ ರಂಗಕ್ಕೆ ಮರಳಿದ್ದೇನೆ. ಹಲವಾರು ಕನ್ನಡ ಸಿನಿಮಾಗಳ ಆಫರ್ ಬಂದರೂ ನನಗೆ ಯಾವುದು ಹಿಡಿಸಿರಲಿಲ್ಲ. ತಮಿಳು ಹಾಗೂ ಮಲಯಾಳಂ ಚಿತ್ರಗಳಲ್ಲಿ ಬಿಜಿ ಇದ್ದೆ. ಭುವನ್ ಮತ್ತು ಹರ್ಷಿಕಾಪೂಣಚ್ಚ ಚೆನ್ನೈಗೆ ಬಂದು ಸಿನಿಮಾದ ಬಗ್ಗೆ ಹಾಗೂ ಅವರ ಐಡಿಯ ಬಗ್ಗೆ ತಿಳಿಸಿದರು.

ತುಂಬಾ ಖುಷಿ ಆಯಿತು. ಈಗ ಸಿನಿಮಾ ಮುಗಿಸಿದ ಮೇಲೆ ನಾನೇನಾದರೂ ಈ ಸಿನಿಮಾ ಮಾಡದೇ ಇದ್ದಿದ್ದರೆ ಒಳ್ಳೆಯ ಸಿನಿಮಾವನ್ನು ಮಿಸ್ ಮಾಡಿಕೊಳ್ಳುತ್ತಿದ್ದೆ.

ತುಂಬಾ ಅಚ್ಚುಕಟ್ಟಾಗಿ ಕಾಮೆಡಿ ಸಿನಿಮಾವನ್ನು ಈ ತಂಡ ಮಾಡುತ್ತಿದೆ. ಭುವನ್ ಜೊತೆ ನಟನೆ ಮಾಡಿ ತುಂಬಾ ಖುಷಿ ಆಯಿತು. ಅವರು ಮುಂದಿನ ದಿನಗಳಲ್ಲಿ ಒಬ್ಬ ಅಧ್ಭುತ ನಾಯಕ ನಟನಾಗಿ ನಿಮ್ಮ ಮುಂದೆ ಬರುತ್ತಾರೆ. ನಂಬರ್ 1 ಆಗುವ ಎಲ್ಲಾ ಲಕ್ಷಣಗಳು ಅವರ ಪ್ರತಿಭೆ ಯಲ್ಲಿದೆ. ನನಗೂ ಕನ್ನಡ ಚಿತ್ರರಂಗಕ್ಕೂ ಅವಿನಾಭಾವ ಸಂಬಂಧ. ಈ ಚಿತ್ರದಲ್ಲಿ ಭುವನ್ ಪೊನ್ನಣ್ಣ ನಾಯಕನಾಗಿ ನಟಿಸುತ್ತಿದ್ದಾರೆ.

"ರಾಮ ಶ್ಯಾಮ ಭಾಮ" ಚಿತ್ರದ ನಂತರ ಹಿರಿಯ ನಟಿ ಊರ್ವಶಿ ಅವರು ಕನ್ನಡ ಚಿತ್ರರಂಗಕ್ಕೆ ಮರಳಿ ಬಂದಿದ್ದಾರೆ. ಅಚ್ಯುತ ಕುಮಾರ್, ಓಂಪ್ರಕಾಶ್ ರಾವ್, ಪ್ರಕಾಶ್ ತುಮಿನಾಡು, ಹುಲಿ ಕಾರ್ತಿಕ್, ಆರ್ಯ ಸಂತೋಷ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಇದೊಂದು ಡಾರ್ಕ್ ಕಾಮಿಡಿ ಜಾನರ್ ಚಿತ್ರ. ತಾಯಿ – ಮಗನ ವಿಶೇಷ ಬಾಂಧವ್ಯದ ಕಥೆಯ ಚಿತ್ರವೂ ಹೌದು ಎಂದು ನಿರ್ದೇಶಕ ಅನೂಪ್ ಆಂಟೋನಿ ತಿಳಿಸಿದರು.

ವೃತ್ತಿಯಿಂದ ನಾನು ನಿರ್ದೇಶಕ. ಆದರೆ ನಟನಾಗೂ ಕೆಲವು ಚಿತ್ರಗಳಲ್ಲಿ ನಟಿಸುತ್ತಿದ್ದೇನೆ. ಭುವನ್ ಹಾಗು ಹರ್ಷಿಕಾ ಪೂಣಚ್ಚ ಅವರು ಈ ಚಿತ್ರದಲ್ಲಿ ನಾನೇ ನಟಿಸಬೇಕೆಂದರು. ನಾನು ಊರ್ವಶಿ ಅವರ ದೊಡ್ಡ ಅಭಿಮಾನಿ. ಅವರ ಜೊತೆಗೆ ನಟಿಸಿರುವುದು ಖುಷಿಯಾಗಿದೆ , ನನ್ನ ನಟನ ಜೀವದಲ್ಲಿ ನನಗೆ ನಟನಾಗಿ ತುಂಬಾ ತೃಪ್ತಿ ಕೊಟ್ಟ ಸಿನಿಮಾ ಇದು . ತುಂಬಾ ಎಂಜಾಯ್ ಮಾಡಿಕೊಂಡು ನಟಿಸಿದ್ದೇನೆ, ವೀಕ್ಷಕರಿಗೆ ತುಂಬಾನೆ ಇಷ್ಟವಾಗುತ್ತೆ ಎಂದರು ಓಂಪ್ರಕಾಶ್ ರಾವ್.

ಅರವಿಂದ್ ವೆಂಕಟೇಶ್ ರೆಡ್ಡಿ ಅವರು ಈ ಚಿತ್ರ ಪ್ರಾರಂಭವಾಗಲು ಪ್ರಮುಖ ಕಾರಣ. ಕಥೆ ಚೆನ್ನಾಗಿದೆ. ಇಡೀ ತಂಡದ ಸಹಕಾರದಿಂದ ಒಂದೊಳ್ಳೆ ಚಿತ್ರ ನಿಮ್ಮ ಮುಂದೆ ಬರಲಿದೆ ಎಂದು ನಿರ್ಮಾಪಕ ನವೀನ್ ತಿಳಿಸಿದರು .

ಚಿತ್ರತಂಡದವರನ್ನು ಪರಿಚಯಿಸಿ ಮಾತನಾಡಿದ ಕಾರ್ಯಕಾರಿ ನಿರ್ಮಾಪಕಿ ಹರ್ಷಿಕಾ ಪೂಣಚ್ಚ, ನಟಿ ಊರ್ವಶಿ ಅವರು ಬಹಳ ವರ್ಷಗಳ ನಂತರ ನಮ್ಮ ಚಿತ್ರದಲ್ಲಿ ನಟಿಸುತ್ತಿರುವುದು ಖುಷಿಯಾದರೆ, ಅವರ ಪುತ್ರಿ ತೇಜ ಅವರಿಗೆ ಬೇರೆ ಬೇರೆ ಭಾಷೆಗಳಿಂದ ಅವಕಾಶ ಬಂದರೂ ಈ(ಕನ್ನಡ) ಚಿತ್ರದ ಮೂಲಕ ನಾಯಕಿಯಾಗಿ ಚಿತ್ರರಂಗ ಪ್ರವೇಶಿಸಲು ಒಪ್ಪಿಕೊಂಡದ್ದು ಬಹಳ ಖುಷಿಯಾಗಿದೆ ಎಂದರು.



'ಸುಜಾತಾ ಮೈಸೂರು ' ಪ್ರೊಡಕ್ಷನ್ ನಂಬರ್ ಒನ್ ಕನ್ನಡ ಚಿತ್ರದಲ್ಲಿ ನೃತ್ಯಗಾರ್ತಿ ಪಾತ್ರದಲ್ಲಿ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,